ಸಂಪುಟ: ೦೬/ ಸಂಚಿಕೆ: ೨೭೦/ಬುಧವಾರ ದಿನಾಂಕ : ೨೫-೧೨-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 270/ WEDNESDAY Date : 25-12-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಬೆಳಗಾವಿಯಲ್ಲಿ ದಿ.26-27ರಂದು ಕಾಂಗ್ರೆಸ್ ಅಧಿವೇಶನಕ್ಕೆ ಸಿದ್ಧತೆ: ಡಿಕೆ ಶಿವಕುಮಾರ್

**ಬೆಳಗಾವಿ:** ಮಹಾತ್ಮಾ ಗಾಂಧಿ ಅಧ್ಯಕ್ಷತೆಯ 1924ರ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚ–ರಣೆ ಪ್ರಯುಕ್ತ ಡಿಸೆಂಬರ್ 26 ಕ್ಕೆ ಗಾಂಧಿ ಪರವಾರ ಬೆಳಗಾವಿಗೆ ಬರಲಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದರು.

26 ಹಾಗೂ 27ರಂದು ನಡೆಯಲಿರುವ ಅಧಿವೇಶನದ ಸಿದ್ಧತೆ ಬಗ್ಗೆ ಬೆಳಗಾವಿಯಲ್ಲಿ ಮಾಹಿತಿ ನೀಡಿದ ಅವರು, ಕಿತ್ತೂರು ಕರ್ನಾಟಕದ ಜನತೆ ಬೆಳಗಾವಿಗೆ ಬರಬೇಕು. ಶತಮಾನೋತ್ಸವ ಪ್ರಯುಕ್ತ ಮಾಡಿರುವ ಲೈಟಿಂಗ್ ಅಲಂಕಾರ ಬಂದು ನೋಡಬೇಕು ಎಂದರು.

ಈ ಹಿಂದೆ ಮಹಾತ್ಮಾ ಗಾಂಧಿ ಅಧ್ಯಕ್ಷರಾಗಿದ್ದ ಅಧಿವೇಶನದ ಎಲ್ಲಾ ಮಾಹಿತಿ ಸಂಗ್ರಹಿಸಿದ್ದೇವೆ. ಅಂತಹ ಇತಿಹಾಸ ಪುಟಕ್ಕೆ ಮತ್ತೆ ತೆಗೆದುಕೊಂಡು ಹೋಗಲು ಪ್ರಯತ್ನ ಮಾಡಿದ್ದೇವೆ. ಜನರು ಇಲ್ಲಿಗೆ ಬರಬೇಕು. ಪಾರ್ಟಿ, ಪಕ್ಷ ಎಂದು ಯೋಚನೆ ಮಾಡಬೇಡಿ. ನಮ್ಮ ಪಕ್ಷ ದೇಶವನ್ನು ಯಾವ



ದಿಕ್ಕಿನಲ್ಲಿ ತೆಗೆದುಕೊಂಡು ಹೋಗಬೇಕು ಎಂಬುದನ್ನು ನಿರ್ಧಾರ ಮಾಡುತ್ತದೆ. ಪ್ರಜಾಪ್ರಭುತ್ವ ನಿಮಗೆ ಸಿಕ್ಕಿದೆ, ಲೀಡರ್ ಆಗಬೇಕು ಎಂದುಕೊಂಡಿರುವವರು ಬನ್ನಿ ಎಂದು ಡಿಕೆ ಶಿವಕುಮಾರ್ ಹೇಳಿದರು.

**ಯಾವಾಗ ಏನೇನು ಕಾರ್ಯಕ್ರಮ?**

ಸಿದ್ಧತೆಗಳ ಬಗ್ಗೆ ಇಂದು ಅಂತಿಮ ಪರಿಶೀಲನೆ ಮಾಡುತ್ತೇನೆ. ಡಿಸೆಂಬರ್ 26 ರಿಂದ ಅಧಿಕೃತ ಕಾಂಗ್ರೆಸ್ ಅಧಿವೇಶನ ಶತಮಾನೋತ್ಸವ ಕಾರ್ಯಕ್ರಮ ಆರಂಭವಾಗಲಿದೆ. ಡಿಸೆಂಬರ್ 26 ರಂದು ಮಧ್ಯಾಹ್ನ 3 ಗಂಟೆ ಎಐಸಿಸಿ ಕಾರ್ಯಕಾರಣಿ ಸಮಿತಿ ಸಭೆ ನಡೆಯಲಿದೆ. 1924 ರ ಡಿಸೆಂಬರ್ 26 ರ ಮಧ್ಯಾಹ್ನ 3 ಗಂಟೆ ಮಹಾತ್ಮಾ ಗಾಂಧಿ ಅಧ್ಯಕ್ಷತೆಯಲ್ಲಿ ಕಾರ್ಯಕಾರಣಿ ಸಭೆ ನಡೆದಿತ್ತು. ಅದೇ ಸಮಯದಲ್ಲಿ ಈಗಲೂ ಸಭೆ ನಡೆಯಲಿದೆ ಎಂದು ಡಿಕೆ ಶಿವಕುಮಾರ್ ತಿಳಿಸಿದರು.

ಡಿಸೆಂಬರ್ 27 ರಂದು ಬೆಳಗ್ಗೆ 10.30 ಕ್ಕೆ ಮಹಾತ್ಮಾ ಗಾಂಧಿ ಮೂರ್ತಿ ಅನಾವರಣ ಆಗಲಿದೆ. ಎಐಸಿಸಿ ಅಧ್ಯಕ್ಷರು ಡಿನ್ನರ್ ಕೊಡಿಸುತ್ತಿದ್ದಾರೆ. ಅಂದೇ ಸುವರ್ಣ ವಿಧಾನಸೌಧದಲ್ಲಿ ಫೋಟೋ ಸೆಷನ್ ಇದೆ. 27ರ ಮಧ್ಯಾಹ್ನ 12 ಗಂಟೆಗೆ ಶತಮಾನೋತ್ಸವ ಸಮಾವೇಶ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದರು.

ಡಿಸೆಂಬರ್ 26 ರಂದು ಬೆಳಗ್ಗೆ ಗಾಂಧಿ ಪರಿವಾರ ಬೆಳಗಾವಿಗೆ ಬರಲಿದೆ. ಗಾಂಧಿ ಪರಿವಾರದ ವಾಸ್ತವ್ಯಕ್ಕೆ ಸರ್ಕ್ಯೂಟ್ ಹೌಸ್ ಮತ್ತು ಖಾಸಗಿ ಹೊಟೆಲ್‌ನಲ್ಲಿ ವ್ಯವಸ್ಥೆ ಮಾಡಿದ್ದೇವೆ. ಅಂತಿಮವಾಗಿ ಗಾಂಧಿ ಪರಿವಾರದ ಭದ್ರತಾ ಸಿಬ್ಬಂದಿ ನಿರ್ಧಾರ ಮಾಡಲಿದ್ದಾರೆ ಎಂದು ಅವರು ಹೇಳಿದರು.

ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಸೇರಿದಂತೆ ಕಾಂಗ್ರೆಸ್‌ನ ಬಹುತೇಕ ನಾಯಕರ ದಂಡು ಈಗಾಗಲೇ ಬೆಳಗಾವಿಗೆ ಆಗಮಿಸಿದೆ.

ಏತನ್ಮಧ್ಯೆ, ಬೆಳಗಾವಿ ಅಧಿವೇಶನದ ಶತಮಾನೋತ್ಸವ ಸಂದರ್ಭದಲ್ಲಿ ಬಿಜೆಪಿ 'ಬೆಳಗಾವಿ ಚಲೋ' ಅಭಿಯಾನ ಹಮ್ಮಿಕೊಂಡಿರುವ ಬಗ್ಗೆ ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್, ಈಗ ಯಾಕೆ ಆ ಬಗ್ಗೆ ಮಾತು? ಯಾರನ್ನಾದರೂ ಕಳುಹಿಸಲಿ, ಏನಾದರೂ ಮಾಡಲಿ. ಕಾಂಗ್ರೆಸ್ ಪಾರ್ಟಿ ಶಕ್ತಿ ಅವರಿಗೂ ಗೊತ್ತಿದೆ, ನಮಗೂ ಗೊತ್ತಿದೆ. ಈಗ ಅದರ ಬಗ್ಗೆ ನಾನು ಮಾತನಾಡಲ್ಲ ಎಂದರು.

## ಯಾವುದೇ ತನಿಖಾ ಸಂಸ್ಥೆಗಳು 'ಡಿಜಿಟಲ್ ಅರೆಸ್ಟ್' ಮಾಡುವುದಿಲ್ಲ ಜನರಿಗೆ ಸಾಮಾನ್ಯ ಕಾನೂನು ಜ್ಞಾನವಿರಬೇಕು: ಪೊಲೀಸ್ ಆಯುಕ್ತ



ಬೆಂಗಳೂರು: "ನಮ್ಮ ಕಾನೂನು, ಸಂವಿಧಾನದಲ್ಲಿ ಡಿಜಿಟಲ್ ಅರೆಸ್ಟ್ ಎನ್ನುವ ವಿಧಾನವೇ ಇಲ್ಲ. ಮಹಾರಾಷ್ಟ್ರ, ಮುಂಬೈ ಸೇ–ರಿದಂತೆ ಎಲ್ಲಿಯೂ ಯಾವುದೇ ತನಿಖಾ ಸಂಸ್ಥೆಗಳು ಡಿಜಿಟಲ್ ಅರೆಸ್ಟ್ ಮಾಡುವುದಿಲ್ಲ. ಈ ಕುರಿತು ಜನ–ರಿಗೆ ಸಾಮಾನ್ಯ ಜ್ಞಾನ ಇರಬೇಕು" ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದ್ದಾರೆ. ದೇಶದಲ್ಲಿ ಇತ್ತೀಚಿನ ದಿನಗಳಲ್ಲಿ ಡಿಜಿಟಲ್ ಅರೆಸ್ಟ್ ಪ್ರಕರಣಗಳಿಂದ ಅಮಾಯಕರು ಹಣ ಕಳೆದುಕೊಳ್ಳುತ್ತಿರುವುದರ ಕುರಿತು ಪ್ರತಿಕ್ರಿಯಿಸಿದ ಪೊಲೀಸ್ ಆಯುಕ್ತರು, "ಯಾವುದೇ ತನಿಖಾ ಸಂಸ್ಥೆಗಳು ಡಿಜಿಟಲ್ ಅರೆಸ್ಟ್ ಮಾಡುವುದಿಲ್ಲ. ಈ ಬೆದರಿಕೆ ಕರೆಗಳ ಕುರಿತು ಸಾರ್ವಜನಿಕರು ತಿಳಿದುಕೊಳ್ಳಬೇಕಿದೆ" ಎಂದರು.

ಡಿಜಿಟಲ್ ಅರೆಸ್ಟ್ ಎಂಬ ಪದ್ಧತಿ ನಮ್ಮ ಕಾನೂನಿನಲ್ಲಿಲ್ಲ: "ಕಾನೂನಿನ ಪ್ರಕಾರ, ಯಾವುದೇ ವ್ಯಕ್ತಿಗೆ ನೋಟಿಸ್ ನೀಡಿ ಅಥವಾ ನೇರವಾಗಿ ಅವರನ್ನು ಭೇಟಿಯಾಗಿ ವಶಕ್ಕೆ ಪಡೆದು ಬಳಿಕ ಬಂಧಿಸುವ ಪದ್ಧತಿಯಿದೆ. ಬಂಧಿಸಿದ ಆರೋಪಿಯನ್ನು 24 ಗಂಟೆಗಳೊಳಗಾಗಿ ನ್ಯಾಯಾಲಯದ ಮುಂದೆ ಹಾಜರುಪಡಿಸಬೇಕು ಎಂಬ ಕಠಿಣ ಕಾನೂನಿದೆ. ಆದರೆ ಡಿಜಿಟಲ್ ಅರೆಸ್ಟ್ ಎಂಬ ಪದ್ಧತಿ ನಮ್ಮ ಕಾನೂನಿನಲ್ಲಿ ಇಲ್ಲ. ಸಾರ್ವಜನಿಕರು ಸ್ವಲ್ಪ ಮಟ್ಟಿನ ಕಾನೂನಿನ ಅರಿವು ಹೊಂದಿದರೆ ವಂಚಕರ ಜಾಲದಲ್ಲಿ ಸಿಲುಕುವ ಪ್ರಮೇಯವೇ ಬರುವುದಿಲ್ಲ. ಅನುಮಾನಾಸ್ಪದ ಕರೆಗಳು ಬಂದಾಗ ಸಮೀಪದ ಪೊಲೀಸ್ ಠಾಣೆಗೆ ಒಂದು ಕರೆ ಮಾಡಿದರೂ ಸಹ ಸೂಕ್ತ ಮಾಹಿತಿ ನೀಡಲಾಗುತ್ತದೆ" ಎಂದು ತಿಳಿಸಿದರು.

ತಕ್ಷಣ ಸ್ಥಳೀಯ ಪೊಲೀಸರಿಗೆ ತಿಳಿಸಿ: "ಸರ್ಕಾರದ ಯಾವುದೇ ತನಿಖಾ ಸಂಸ್ಥೆಗಳು ವಿಡಿಯೋ ಕರೆಯ ಮೂಲಕ ತನಿಖೆ ಕೈಗೊಳ್ಳುವುದಿಲ್ಲ. ಮೊದಲು ನೋಟಿಸ್ ನೀಡಿ ಇಲ್ಲವೇ ನೇರವಾಗಿ ಬಂದು ತನಿಖಾ ಸಂಸ್ಥೆಗಳು ತನಿಖೆ ನಡೆಸುತ್ತವೆ. ಆದ್ದರಿಂದ ಮೊಬೈಲ್ ಕರೆಗಳ ಮೂಲಕ ಯಾರಾದ್ರೂ ಸಂಪರ್ಕಿಸಿ ಡಿಜಿಟಲ್ ಅರೆಸ್ಟ್ ಅಂತಾ ಬೆದರಿಕೆ ಹಾಕಿದರೆ ಜನರು ಎಚ್ಚೆತ್ತುಕೊಂಡು ಸ್ಥಳೀಯ ಪೊಲೀಸರಿಗೆ ತಿಳಿಸುವುದು ಸೂಕ್ತ" ಎಂದರು.

ರೂ.109 ಕೋಟಿ ವಂಚಕರ ಪಾಲು!: 2024ರ ನವೆಂಬರ್ ಅಂತ್ಯಕ್ಕೆ ರಾಜ್ಯದಲ್ಲಿ ಒಟ್ಟು 641 ಡಿಜಿಟಲ್ ಅರೆಸ್ಟ್ ಪ್ರಕರಣಗಳು ವರದಿಯಾಗಿದ್ದು, 109 ಕೋಟಿ ರೂ. ವಂಚಕರ ಪಾಲಾಗಿದೆ. ಆ ಪೈಕಿ ಬೆಂಗಳೂರಲ್ಲೇ 480 ಪ್ರಕರಣಗಳು ವರದಿಯಾಗಿದ್ದು, 42.4 ಕೋಟಿ ರೂ ಹಣವನ್ನು ವಂಚಕರು ಲೂಟಿ ಮಾಡಿದ್ದಾರೆ. ವಂಚಕರ ಪಾಲಾದ ಹಣದಲ್ಲಿ ಕೇವಲ 9 ಕೋಟಿ ರೂ ಮಾತ್ರ ವಾಪಸ್ ಜಪ್ತಿ ಮಾಡುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಟೆಕ್ಕಿಗೆ ರೂ. 11 ಕೋಟಿ ವಂಚನೆ: ಇತ್ತೀಚಿಗೆ ಬೆಂಗಳೂ–ರಿನ ಸಾಫ್ಟ್‌ವೇರ್ ಉದ್ಯೋಗಿಯೊಬ್ಬರಿಗೆ ವಂಚಕರು ಬೆದರಿಸಿ ಒಂದು ತಿಂಗಳ ಕಾಲ ಡಿಜಿಟಲ್ ಅರೆಸ್ಟ್ ಜಾಲದಲ್ಲಿ ಬೀಳಿಸಿ, ಅವರಿಂದ 11.83 ಕೋಟಿ ರೂ ವರ್ಗಾಯಿಸಿಕೊಂಡು ಮೋಸ ಮಾಡಿರುವ ಘಟನೆ ನಡೆದಿತ್ತು. ಹಣ ಕಳೆದುಕೊಂಡ ವಿಜಯ್ ಕುಮಾರ್ ಎಂಬವರು ನೀಡಿದ್ದ ದೂರಿನನ್ವಯ ಈಶಾನ್ಯ ವಿಭಾಗದ ಸಿಇಎನ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿತ್ತು. ಇಲ್ಲಿಯವರೆಗೆ ರಾಜ್ಯದಲ್ಲಿ ವರದಿಯಾದ ಅತ್ಯಧಿಕ ಮೊತ್ತ ಕಳೆದುಕೊಂಡ ಡಿಜಿಟಲ್ ಅರೆಸ್ಟ್ ಪ್ರಕರಣ ಇದಾಗಿದೆ.

## ಇಂದು ನೇಸರಗಿ ಗ್ರಾಮಕ್ಕೆ ಸತೀಶ ಜಾರಕಿಹೊಳಿ

ನೇಸರಗಿ. ಇಲ್ಲಿನ ಕ್ರಾಸದಿಂದ ಮದನಭಾವಿ, ಮುರಕಿಭಾವಿ, ನಾಗನೂರ ಹಳ್ಳದವರೆಗೆ ಸುಮಾರು 30 ಕೋಟಿ ರೂಪಾಯಿಗಳ ವೆಚ್ಚದ ಲೋಕೋಪಯೋಗಿ ಇಲಾಖೆ, ರಾಜ್ಯ ಅಭಿವೃದ್ಧಿ ಯೋಜನೆ ವತಿಯಿಂದ ಎಸ್ ಎಚ್ ಡಿ ಪಿ ಯೋಜನೆಯಡಿ, ಹಂತ 5 ರ ಘಟ್ಟದ 01 ಪ್ಯಾಕೇಜ್ ಸಂಖ್ಯೆ 685 ರ ಅಡಿಯಲ್ಲಿ 6 ಕಿಲೋ ಮೀಟರ ಉದ್ದದ ಜತ್ತ ಜಾಂಬೋಟಿ ರಸ್ತೆ ನಿರ್ಮಾಣ ಕಾಮಗಾರಿ ಉದ್ಘಾಟನೆ ಕಾರ್ಯಕ್ರಮಕ್ಕೆ ಬೆಳಿಗ್ಗೆ 10–30 ಕ್ಕೆ ನೇಸರಗಿ ಕ್ರಾಸ ಗೆ ರಾಜ್ಯದ ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಆಗಮಿಸಲಿದ್ದು ರಸ್ತೆ ಕಾಮಗಾರಿ ಉದ್ಘಾಟನೆಯು ನೇಸರಗಿ ಕ್ರಾಸನಲ್ಲಿ ನೆರವೇರಲಿದೆ ಎಂದು ಚನ್ನಮ್ಮನ ಕಿತ್ತೂರು ಶಾಸಕರಾದ ಬಾಬಾಸಾಹೇಬ ಪಾಟೀಲ ಹೇಳಿದ್ದಾರೆ.

## ಗುತ್ತಿಗೆ ಆಧಾರದ ಸಿಬ್ಬಂದಿಗಳ ವೇತನ ಪರಿಷ್ಕರಣೆ ; ರಾಜ್ಯ ಸರಕಾರ ಆದೇಶ

**ಬೆಂಗಳೂರು** : ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸಚಿವರು, ವಿಧಾನಸಭೆ, ವಿಧಾನ ಪರಿಷತ್, ಸಂಸದರು, ರಾಜ್ಯಸಭಾ ಸದಸ್ಯರ ಆಪ್ತ ಸಿಬ್ಬಂದಿ ಸೇರಿದಂತೆ ವಿವಿಧ ಸಚಿವಾಲಯದಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯ ವೇತನ ಪರಿಷ್ಕರಿಸಿ ರಾಜ್ಯ ಸರಕಾರ ಮಂಗಳವಾರ ಆದೇಶ ಹೊರಡಿಸಿದೆ.

ಏಳನೇ ವೇತನ ಆಯೋಗದ ಶಿಫಾರಸ್ಸಿನ ಮೇರೆಗೆ ಕರ್ನಾಟಕ ನಾಗರಿಕ ಸೇವೆಗಳು (ಪರಿಷ್ಕೃತ ವೇತನ) ನಿಯಮಗಳು 2024ನ್ನು ರಾಜ್ಯ ಸರಕಾರ ಜಾರಿಗೆ ತಂದಿದ್ದು, ಅದರಂತೆ ಗುತ್ತಿಗೆ ಆಧಾರದ ಸಿಬ್ಬಂದಿಯ ಪರಿಷ್ಕೃತ ಸಂಚಿತ ವೇತನ ನ.1ರಿಂದ ಜಾರಿಗೆ ಬಂದಿದೆ.

ಸಿಎಂ, ಡಿಸಿಎಂ, ಸಚಿವರು ಸೇರಿದಂತೆ ವಿವಿಧೆಡೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ಸಂಚಿತ ವೇತನ ಪರಿಷ್ಕರಣೆ ಅನ್ವಯವಾಗಲಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಆದರೆ, ಹೊರಗುತ್ತಿಗೆ ಸಿಬ್ಬಂದಿಗೆ ಅನ್ವಯವಾಗುವುದಿಲ್ಲ ಎಂಬ ಷರತ್ತು ವಿಧಿಸಲಾಗಿದೆ.

ವಿಶೇಷ ಅಧಿಕಾರಿ/ವಿಶೇಷ ಕರ್ತವ್ಯಾಧಿಕಾ–ರಿಗಳಿಗೆ 69,250ರೂ., ಸಹಾಯಕರ ಹುದ್ದೆ ಮತ್ತು ಶೀಘ್ರ ಲಿಪಿಗಾರರಿಗೆ 49,050 ರೂ., ಕಿರಿಯ ಸಹಾಯಕ/ದ್ವಿತೀಯ ದರ್ಜೆ ಸಹಾಯಕ, ಬೆರಳಚ್ಚುಗಾರರು ಹಾಗೂ ವಾಹನ ಚಾಲಕರಿಗೆ 34,100 ರೂ. ಹಾಗೂ 'ಡಿ' ದರ್ಜೆ ನೌಕರರಿಗೆ 27ಸಾವಿರ ರೂ.ವರೆಗೆ ವೇತನ ಪರಿಷ್ಕರಣೆ ಮಾಡಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಸರಕಾರದ ಅಧೀನ ಕಾರ್ಯದರ್ಶಿ ಬಿ.ಡಿ.ರಾಜೇಂದ್ರ ಆದೇಶ ಹೊರಡಿಸಿದ್ದಾರೆ.

## ಶತಮಾನೋತ್ಸವ ಯಶಸ್ವಿಗೆ ಕೆ.ಎಚ್. ಮುನಿಯಪ್ಪ ಮನವಿ




**ಬೆಳಗಾವಿ:** ನಗರದಲ್ಲಿ ನಡೆಯಲಿರುವ ಕಾಂಗ್ರೆಸ್ ಪಕ್ಷದ ಅಧಿವೇಶನದ ಶತಮಾನೋತ್ಸವದ ಯಶಸ್ವಿಗೊಳಿಸಲು ಸಚಿವ ಕೆ.ಎಚ್. ಮುನಿಯಪ್ಪ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಯಿತು. ಈ ಸಭೆಯಲ್ಲಿ ಸಚಿವರು ಕಾರ್ಯಕ್ರಮ ಯಶಸ್ವಿಗೆ ಶ್ರಮಿಸಲು ಮನವಿ ಮಾಡಿದರು.

ಮಹಾತ್ಮ ಗಾಂಧೀಜಿಯವರು ಈ ಹಿಂದೆ 1924 ರಲ್ಲಿ ಬೆಳಗಾವಿಯಲ್ಲಿ ಕಾಂಗ್ರೆಸ್ ಪಕ್ಷದ ಅಧಿವೇಶನವನ್ನು ನಡೆಸಿ 100 ವರ್ಷದ ಸಂಭ್ರಮಾಚರಣೆಯ ಪ್ರಯುಕ್ತ ಕಾಂಗ್ರೆಸ್ ಪಕ್ಷದ ವತಿಯಿಂದ ಅದ್ದೂರಿಯಾಗಿ ಕಾರ್ಯಕ್ರಮವನ್ನು ನಡೆಸುತ್ತಿದ್ದು ಸಮಾವೇಶದಲ್ಲಿ ಅಖಿಲ ಭಾರತ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಸದಸ್ಯರು ,ವಿಧಾನ ಸಭೆಯ ಸದಸ್ಯರು ವಿಧಾನ ಪರಿಷತ್ ನ ಸದಸ್ಯರು, ಹಾಗೂ ಕಾಂಗ್ರೆಸ್ ಪಕ್ಷದ ಪ್ರಮುಖರು, ರಾಜ್ಯದ ವಿವಿಧ ಭಾಗಗಳಿಂದ ಬರುವ ಜನ–ರಿಗೆ ಆಹಾರ ವ್ಯವಸ್ಥೆ ಯನ್ನು ಮಾಡುವುದ–ರಿಂದ ಆಹಾರ ಸಮಿತಿಯ ಅಧ್ಯಕ್ಷರಾಗಿ ರಾಗಿ ಆಹಾರ ಸಚಿವ .ಕೆ ಹೆಚ್. ಮುನಿಯಪ್ಪ ಹಾಗೂ ಕಾರ್ಮಿಕ ಸಚಿವ ಸಂತೋಷ್ ಲಾಡ್, ಗಣಿ ಮತ್ತು ಭೂ ವಿಜ್ಞಾನ ಸಚಿವ ಮಲ್ಲಿಕಾರ್ಜುನ ಅವರ ನೇತೃತ್ವದ ಸಮಿತಿಯ ಮೂಲಕ ಆಹಾರ ವಿತರಣೆ ಜವಾಬ್ದಾರಿಯನ್ನು ನೀಡಲಾಗಿದೆ.

ಮಹಾತ್ಮ ಗಾಂಧಿಯವರು ಅಧ್ಯಕ್ಷತೆಯಲ್ಲಿ ನೆಡದ ಕಾಂಗ್ರೆಸ್ ಅಧಿವೇಶನವು 100 ವರ್ಷಗಳು ಪೂರೈಸಿದ್ದು ಅವರ ತತ್ವ ಆದರ್ಶಗಳು ,ಚಿಂತನೆ ಅವರು ನಡೆಸಿದಂತಹ ಹೋರಾಟಗಳು ಹಾಗೂ ಅವರು ಸರ್ವ ಧರ್ಮಗಳ ಪರವಾಗಿ ಯಾವುದೇ ಜಾತಿ ಧರ್ಮ ಎಂಬ ಬೇದ ಬಾವವಿಲ್ಲದೆ ಹೋರಾಟ ಮಾಡಿ ಸ್ವಾತಂತ್ರ ವನ್ನು ಈ ದೇಶಕ್ಕೆ ತಂದು ಕೊಟ್ಟ ಮಾಹಾನ್ ಚೇತನ ಮಹಾತ್ಮ ಗಾಂಧಿಯವರನ್ನು ಈ ದೇಶದ. ಉದ್ದಗಳಕ್ಕೂ ಸ್ಮರಿಸುವುದು ಪ್ರತಿ ಯೊಬ್ಬ ನಾಗ–ರಿಕನ ಆದ್ಯ ಕರ್ತವ್ಯವಾಗಿದೆ ಎಂದರು.

ಸುಭಾಷ್ ಚಂದ್ರ ಬೋಸ್,ವಲ್ಲಬಾಯಿಪಟೇಲ್,ಮೌಲಾನಾ ಆಜಾಧ್ ಎಂಬ ಮಹಾನ್ ಚೇತನರ ತ್ಯಾಗ ಬಲಿದಾನಗಳಿಂದ ಈ ದೇಶಕ್ಕೆ ಸ್ವಾತಂತ್ರ ಬಂತು.

ಪಂಡಿತ್ ಜವಹರಲಾಲ್ ನೆಹರೂ ಅವರ ಈ ದೇಶಕ್ಕೆ ಸಂವಿಧಾನ ರಚಿಸಬೇಕಾದರೆ ಮಾಹಾತ್ಮ ಗಾಂಧಿಯವರ ಸಲಹೆ ಮೇರೆಗೆ ಅಂಬೇಡ್ಕರ್ ರವರನ್ನು ರಚನಾ ಸಮಿತಿಯ ಅಧ್ಯಕ್ಷರಾಗಿ ನೇಮಿಸಿ ಈ ದೇಶಕ್ಕೆ ಒಂದು ಮಹತ್ವದ ಸಂವಿಧಾನ ರಚಿಸುವ ಜವಾಬ್ದಾ–ರಿಯನ್ನು ವಹಿಸಿದರು. ಈ ಕಾರ್ಯಕ್ರಮಕ್ಕೆ ಲಕ್ಷಾಂತರ ಜನರು ಭಾಗವಹಿಸುವ ಹಿನ್ನಲೆಯಲ್ಲಿ ನಾಮ್ಮ ಪಕ್ಷದವತಿಂಯಿಂದ ಸಮರ್ಪಕವಾಗಿ ಆಹಾರ ವ್ಯವಸ್ಥೆ ಹಾಗೂ ವಾಹನಗಳ ನಿಲುಗಡೆ ಸ್ಥಳಗಳು ಜನರಲ್ಲಿ ಗೊಂದಲ ಉಂಟಾಗದೆ ಇರುವ ಹಾಗೆ ಅದರ ಸಮರ್ಪಕ ನಿರ್ವಹಣೆ ಗಾಗಿ ನಮ್ಮ ನೇತೃತ್ವದಲ್ಲಿ ಎಲ್ಲಾ ವಿಭಾಗಗಳನ್ನು ನಿಗಾವಹಿಸಿ ಸೂಕ್ತ ರೀತಿಯಲ್ಲಿ ಯಶಸ್ವಿಯಾಗಿಸುವ ಸಲುವಾಗಿ ಇಂದಿನ ಪೂರ್ವ ಭಾವಿ ಸಭೆಯಲ್ಲಿ ಸೂಕ್ತ ತೀರ್ಮಾನಗಳನ್ನು ತೆಗೆದುಕೊಳ್ಳಲಾಗಿದೆ ಎಂದರು.

ಸ್ವತಂತ್ರ ಪೂರ್ವ ಮತ್ತು ಸ್ವತಂತ್ರ ನಂತರದಲ್ಲಿ ಭಾಗವಹಿಸಿದ ಎಲ್ಲರಿಗೂ ಪಕ್ಷಾತೀತವಾಗಿ ಆಹ್ವಾನ ನೀಡುತ್ತಿದ್ದು ಈ ಐತಿಹಾಸಿಕ ಕಾರ್ಯಕ್ರಮ ನಡೆಸುತ್ತಿದ್ದು ನಮ್ಮ ಅಧ್ಯಕ್ಷರಾದ ಡಿಕೆ.ಶಿವಕುಮಾರ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ರವರ ನೇತೃತ್ವದಲ್ಲಿ ನಡೆಸುತ್ತಿದ್ದೇವೆ ಎಂದರು.

## ರಾಮತೀರ್ಥ ನಗರ ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಕ್ರೀಸಮಸ್ ಹಬ್ಬ ಆಚರಣೆ.!





**ಬೆಳಗಾವಿ :** ರಾಮತೀರ್ಥ ನಗರದಲ್ಲಿರುವ ಪಿ.ಎಮ್.ಶ್ರೀ ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕ್ರೀಸ್‌ಮಸ್ ಹಬ್ಬವನ್ನು ಆಚರಣೆ ಮಾಡಲಾಯಿತು.

ಶಾಲೆಯ ಮುಖ್ಯೋಪಾಧ್ಯಾಯರಾದ ಎಂ.ಆರ್. ಮೇಳವಂಕಿ ಅವರ ನೇತ್ರತ್ವದಲ್ಲಿ ಕ್ರೀಸ್‌ಮಸ್ ಹನ್ನವನ್ನು ಶಾಲಾ ಸಿಬ್ಬಂದಿಗಳು, ಮಕ್ಕಳು ಸೇರಿಕೊಂಡು ಸಂಭ್ರಮದಿಂದ ಆಚರಿಸಲಾಯಿತು.

ಅಲ್ಲದೆ ಕಾರ್ಯಕ್ರಮದಲ್ಲಿ ಶಾಲಾ ವಿದ್ಯಾರ್ಥಿಗಳ ವಿವಿಧ ಸಂಸ್ಕೃತಿಕ ಸಾಂತಾಕ್ಲಾಸ್ ಟೋಪಿ, ಚಿತ್ರಕಲೆ, ಹಾಗೂ ಕ್ರೀಸ್ ಮಸ್ ಚಿತ್ರಗಳನ್ನು ಬರೆಯುವುದರ ಮೂಲಕ ಕಾರ್ಯಕ್ರಮದಲ್ಲಿ ಎಲ್ಲರ ಗಮನ ಸೇಳೆಯುವಂತೆ ಮಾಡಿದ ಪುಟ್ಟಾನಿಗಳು ಹಾಗೂ ವಿದ್ಯಾರ್ಥಿಗಳು, ಈ ಕಾರ್ಯಕ್ರಮ ಯಶಸ್ವಿಗೊಳಿಸಿದಕ್ಕೆ ಶಾಲಾ ಮುಖ್ಯೋಪಾಧ್ಯಾಯ, ಪಾಲಕರು ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.

## ಮೀಸಲಾತಿ ಪಡೆದೇ ಪಡೆಯುತ್ತೇವೆಂದ ಜಯಮೃತ್ಯುಂಜಯ ಸ್ವಾಮೀಜಿ



**ಬಳ್ಳಾರಿ:** ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ನಮ್ಮನ್ನು ಕೇವಲವಾಗಿ ನಡೆಸಿಕೊಂಡಿದ್ದು, ಬಹಳ ಅಪಮಾನ ಮಾಡಿದೆ ಎಂದು ಬಸವ ಜಯಮೃತ್ಯುಂ–ಜಯ ಸ್ವಾಮೀಜಿ ಆರೋಪಿಸಿದ್ದಾರೆ.

ವಿಜಯನಗರದ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ವಟ್ಟಮ್ಮನಹಳ್ಳಿಯಲ್ಲಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಹಳ್ಳಿ ಹಳ್ಳಿಯಲ್ಲಿ ಜಾಗೃತಿ ಮೂಡಿಸಿ ನಮ್ಮನ್ನು ಅಪ್ಪಿಕೊಳ್ಳುವ ಸರ್ಕಾರ ತಂದು ಮೀಸಲಾತಿ ಪಡೆಯುತ್ತೇವೆ ಎಂದೂ ಹೇಳಿದ್ದಾರೆ.

ಜನವರಿ 16ರಿಂದ ಪ್ರತಿ ಹಳ್ಳಿ ಹಳ್ಳಿಗೂ ತೆರಳಿ ಪಂಚಮಸಾಲಿ ಜಾಗೃತಿ ಸಭೆ ನಡೆಸಲಾಗುವುದು. ಮುಂದಿನ 3 ವರ್ಷ ಹೋರಾಟದ ಮೂಲಕ ಜಾಗೃತಿ ಮೂಡಿಸುತ್ತೇವೆ ಎಂದು ಅವರು ಹೇಳಿದರು.

2ಎ ಮೀಸಲಾತಿಗಾಗಿ ಆಗ್ರಹಿಸಿ ಹೋರಾಟ ಮಾಡಿದರೆ ನಮ್ಮ ಮೇಲೆ ಲಾಠಿಚಾರ್ಜ್ ಮಾಡಿಸಿದರು. ಸಿಎಂ ಸಿದ್ದರಾಮಯ್ಯ ಸರ್ಕಾರ ನಮ್ಮ ಮೇಲೆ ಲಾಠಿಚಾರ್ಜ್ ಮಾಡಿದೆ. ಕಾಂಗ್ರೆಸ್ ಪಕ್ಷ ಪಂಚಮಸಾಲಿ ಸಮಾಜ–ಕ್ಕೆ ಬಹಳ ಅಪಮಾನ ಮಾಡಿದೆ. ಲಾಠಿಚಾರ್ಜ್ ಮಾಡಿರುವ ಪೊಲೀಸರ ವಿರುದ್ಧ ಕ್ರಮ ಕೈಗೊಂಡಿಲ್ಲ. ಸಿದ್ದರಾಮಯ್ಯ ಸರ್ಕಾರ ಈವರೆಗೆ ಪಂಚಮಸಾಲಿಗಳ ಕ್ಷಮೆ ಕೇಳಿಲ್ಲ. ಮೀಸಲಾತಿ ಕೊಡಲು ಆಗಲ್ಲ ಎಂದು ಸಿಎಂ ನೇರವಾಗಿ ಹೇಳಿದ್ದಾರೆ. ನಮ್ಮನ್ನು ಅಪ್ಪಿಕೊಳ್ಳುವ ಸರ್ಕಾರ ತಂದು ಮೀಸಲಾತಿ ಪಡೆಯುತ್ತೇವೆ ಎಂದು ಅವರು ಹೇಳಿದ್ದಾರೆ.

ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆದ ವಿಧಾನಮಂಡಲ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಜಯ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಪಂಚಮಸಾಲಿ 2ಎ ಮೀಸಲಾತಿಗಾಗಿ ಆಗ್ರಹಿಸಿ ವ್ಯಾಪಕ ಪ್ರತಿಭಟನೆ ನಡೆದಿತ್ತು. ಆ ಸಂದರ್ಭದಲ್ಲಿ ಪ್ರತಿಭಟನಾನಿರತರ ಮೇಲೆ ಲಾಠಿಚಾರ್ಜ್ ಮಾಡಲಾಗಿತ್ತು. ನಂತರ ಸರ್ಕಾರ ಆ ಬಗ್ಗೆ ಸಮರ್ಥನೆ ಮಾಡಿಕೊಂಡಿತ್ತು.

ಲಾಠಿ ಚಾರ್ಜ್ ಕುರಿತು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರಿಂದ ಮಾಹಿತಿ ಪಡೆದಿದ್ದ ಸಿದ್ದರಾಮಯ್ಯ, ನೀವು ಮಾಡಿದ್ದು ಸರಿ ಇದೆ ಎಂದಿದ್ದರು. ಪ್ರತಿಭಟನೆ ವೇಳೆ ಹೈಕೋರ್ಟ್ ಆದೇಶ ಉಲ್ಲಂಘನೆ ಮಾಡಿದ್ದಾರೆ. ಅದಕ್ಕಾಗಿ ಲಾಠಿಚಾರ್ಜ್ ಮಾಡಲಾಯಿತು ಎಂಬ ಜಿಲ್ಲಾಧಿಕಾರಿ ಮಾಹಿತಿಗೆ ಪ್ರತಿಕ್ರಿಯಿಸಿ, ಆದೇಶ ಪಾಲನೆ ಮಾಡಿದ್ದು ಒಳ್ಳೆಯದಾಯಿತು ಎಂದಿದ್ದರು. ನಂತರ ಸಿದ್ದರಾಮಯ್ಯ ಕ್ಷಮೆಯಾಚಿಸಬೇಕೆಂದು ಪಂಚಮಸಾಲಿ ಮುಖಂಡರು ಆಗ್ರಹಿಸಿದ್ದರು. ಆದರೆ ಸಿದ್ದರಾಮಯ್ಯ ಕ್ಯಾರೇ ಅಂದಿರಲಿಲ್ಲ. ಇದು ಪಂಚಮಸಾಲಿ ಸಮಾಜದ ಮುಖಂಡರನ್ನು ಮತ್ತಷ್ಟು ಕೆರಳಿಸಿತ್ತು.

## ರಾಷ್ಟ್ರೀಯ ಗ್ರಾಹಕರ ದಿನಾಚರಣೆ: ಗ್ರಾಹಕರು ಕುಂದುಕೊರತೆಗಳ ನಿವಾರಿಸಿಕೊಳ್ಳುವ ಹಕ್ಕು ಹೊಂದಿರುತ್ತಾರೆ: ಸಚಿವ ಕೆಹೆಚ್. ಮುನಿಯಪ್ಪ

**ಬೆಳಗಾವಿ.** ಗ್ರಾಹಕರಿಗೆ ಸುರಕ್ಷತೆಯ, ಮಾಹಿತಿ ಪಡೆಯುವ ಹಾಗೂ ಕುಂದುಕೊರತೆಗಳನ್ನು ನಿವಾರಿಸಿಕೊಳ್ಳುವ ಹಕ್ಕುಗಳನ್ನು ಹೊಂದಿರುತ್ತಾರೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ಅವರು ಹೇಳಿದರು.

ನಗರದ ಕುಮಾರ ಗಂಧರ್ವ ರಂಗಮಂದಿರದಲ್ಲಿ ಮಂಗಳವಾರ (ಡಿ.24)

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಜರುಗಿದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ

ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಹಕರ ಶಿಕ್ಷಣದ ಹಕ್ಕಿನ ಜೊತೆಗೆ ಮೂಲಭೂತ ಅಶ್ಯಕತೆಗಳನ್ನು ಪಡೆಯುವ ಹಕ್ಕು, ಮಾಲಿನ್ಯ ಮುಕ್ತ ಪರಿಸರವನ್ನು ಪಡೆಯುವ ಹಕ್ಕುಗಳನ್ನು ಪಡೆದಿರುತ್ತಾರೆ ಎಂದರು.




ಗ್ರಾಹಕರು ಖರೀದಿಸುವ ಸರಕು, ಸಾಮಗ್ರಿಗಳ ತೂಕದಲ್ಲಿ ಯಾವುದೇ ವ್ಯತ್ಯಾಸವಿಲ್ಲದೆ ಸಮರ್ಪಕವಾಗಿ ವಿತರಣೆ ಮಾಡುವುದು ನಮ್ಮ ಆದ್ಯ ಕರ್ತವ್ಯವಾಗಬೇಕು ಎಂದರು. ಆಧುನಿಕ ಮಾರುಕಟ್ಟೆ ಸಿದ್ಧಾಂತವು ಗ್ರಾಹಕರನ್ನು ಮಾರುಕಟ್ಟೆಯ ರಾಜನೆಂದು ಪರಿಗಣಿಸಿದೆ. ಮಾರುಕಟ್ಟೆಯ ಎಲ್ಲಾ ಕಾರ್ಯ ಚಟುವಟಿಕೆಗಳು ಗ್ರಾಹಕನ ಅವಶ್ಯಕತೆಗಳು ಮತ್ತು ಅಭಿಲಾಷೆಗಳನ್ನು ತೃಪ್ತಿಪಡಿಸುವ ಉದ್ದೇಶವನ್ನು ಹೊಂದಿದೆ ಎಂದು ಸಚಿವ ಕೆ. ಎಚ್. ಮುನಿಯಪ್ಪ ಹೇಳಿದರು.

ನ್ಯಾಯವಾದಿಗಾಳದ ಎನ್.ಆರ್.ಲಾತೂರ ಅವರು ರಾಷ್ಟ್ರೀಯ ಗ್ರಾಹಕರ ದಿನಾವರಣೆ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಗ್ರಾಹಕರಿಗಾಗಿ ಇರುವಂತಹ ಹಕ್ಕುಗಳ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಅಣ್ಣಾಸಾಹೇಬ ಸದಲಗೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪಿ.ಮುರಳಿಮೋಹನ ರೆಡ್ಡಿ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರುಗಳಾದ ಸುನಂದಾ ಕಾದ್ರೋಳಿಮಠ, ಗಿರೀಶ್ ಪಾಟೀಲ, ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರದ ಜಿಲ್ಲಾಅಂಕಿತ ಅಧಿಕಾರಿ ಡಾ.ಚೇತನ ಕಂಕಣವಾಡಿ, ಆಹಾರ ಇಲಾಖೆ ಉಪ ನಿರ್ದೇಶಕ ಮಲ್ಲಿಕಾರ್ಜುನ ನಾಯಕ ಉಪಸ್ಥಿತರಿದ್ದರು.

## ಸ್ವಾತಂತ್ರ್ಯ ಯೋಧರ ಮನೆಗಳಿಗೆ ತೆರಳಿ ಆಹ್ವಾನಿಸಿದ ಸಚಿವ ಎಚ್.ಕೆ.ಪಾಟೀಲ

**ಬೆಳಗಾವಿ:** ಬೆಳಗಾವಿಯಲ್ಲಿ ನಡೆಯುತ್ತಿರುವ 39ನೆಯ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಸಂಭ್ರಮಾಚರಣೆ ದಿನದಿಂದ ದಿನಕ್ಕೆ ಮೆರಗು ಪಡೆಯುತ್ತಿದೆ. ಶತಮಾನೋತ್ಸವದ ಸಮಿತಿಯ ಅಧ್ಯಕ್ಷ ಹಾಗೂ ರಾಜ್ಯದ ಕಾನೂನು ಮತ್ತು ಸಂಸದಿಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ ಪಾಟೀಲರು ಇಂದು ಸಾಂಕೇತಿಕವಾಗಿ ಸ್ವಾತಂತ್ರ್ಯ ಯೋಧರ ಮನೆಗಳಿಗೆ ತೆರಳಿ ಸುವರ್ಣ ಸೌಧದ ಮುಂದೆ ಪ್ರತಿಷ್ಠಾಪಿಸಲಾಗಿರುವ ಮಹಾತ್ಮ ಗಾಂಧೀ ಪುತ್ಥಳಿ ಅನಾವರಣ ಕಾರ್ಯಕ್ರಮಕ್ಕೆ ಕುಟುಂಬ ಸಮೇತ ಆಗಮಿಸಲು ಆಹ್ವಾನ ನೀಡಿದರು.

ಇಂದು ಬೆಳಗ್ಗೆ ರಾಮತೀರ್ಥನಗರದಲ್ಲಿ ಇರುವ ಅಣ್ಣು ಗುರೂಜಿ ಅವರ ಮನೆಗೆ, ಹನುಮಾನ ನಗರದಲ್ಲಿರುವ ವಿಠ್ಠಲರಾವ್ ಯಾಳಗಿ ಹಾಗೂ 1924 ರ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ರೂವಾರಿ ಶ್ರೀಗಂಗಾಧರರಾವ್ ದೇಶಪಾಂಡೆ ಅವರ ಮನೆಗಳಿಗೆ ಖುದ್ದಾಗಿ ಭೇಟಿ ನೀಡಿ ಆಹ್ವಾನ ನೀಡಿದರು.

ಈ ಕುಟುಂಬದ ಸದಸ್ಯರಿಂದ ಸಚಿವ ಎಚ್.ಕೆ.ಪಾಟೀಲ ಅವರು ವಿವರವಾದ ಮಾಹಿತಿ ಪಡೆದುಕೊಂಡರು. ಅಸ್ಪೃಶತೆ ನಿವಾರಣೆಗೆ ಗಾಂಧಿಜಿ ಕರೆ ಕೊಟ್ಟ ಕಾಲಘಟ್ಟದಲ್ಲಿ ಬೆಳಗಾವಿ ಅಧಿವೇಶನ ನಡೆಯತ್ತಿತ್ತು. ನಮ್ಮ ಮನೆತನದವರು ಸ್ವಯಂ ಪ್ರೇ–ರಿತರಾಗಿ ಭಂಗಿ ಬಳಿಯಲು ಮುಂದಾದರು. ಹೀಗಾಗಿ ಅವರು ಮುಂಚೂಣಿಯಲ್ಲಿ ಇರಲ್ಲಿಲ್ಲ ಇದನ್ನು ಈಗ ಊಹಿಸಿಕೊಳ್ಳವದೂ ಕಷ್ಟ ಎಂದು ಅಣ್ಣೂ ಗುರೂಜೀ ಅವರ ಮೊಮ್ಮಗ ಶ್ರೀ ಮಹೇಶ ದೇಶಪಾಂಡೆ ಹೇಳಿದರು.

ನಮ್ಮೂರು ಹಾಗೂ ಸುತ್ತ ಮುತ್ತಲಿನ ಊರುಗಳ ಜನರು ಗಾಂಧೀಜೀಯಿಂದ ಪ್ರೇರಿತರಾಗಿ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಧುಮುಕಿದರು ಎಂದು ನಮ್ಮಜ್ಜ ಹೇಳುತ್ತಿದ್ದರು. ನಾವೆಲ್ಲ ಅಜ್ಜನ ನೆರಳಿನಿಂದಲೇ ಬೆಳದವರು. ನಮ್ಮಜ್ಜ ತಲಾಠಿ ನೌಕರಿ ಬಿಟ್ಟು ಸ್ವಾತಂತ್ರ್ಯ ಚಳುವಳಿಗೆ ಧುಮುಕಿದರು. ನಾನು ಈ ಎಲ್ಲ ಮಾಹಿತಿ, ದಾಖಲೆ ಸಂಗ್ರಹಿಸಿರುವೆ ಎಂದರು.

ಇದು ಪುಸ್ತಕ ರೂಪದಲ್ಲಿ ಬರಬೇಕೆಂದು ಸಚಿವರು ದೇಶಪಾಂಡೆ ಅವರಿಗೆ ಸಲಹೆ ಮಾಡಿದರು. ಬೆಳಗಾವಿ ಅಧಿವೇಶನ ಕುರಿತು ಅಣ್ಣು ಗುರೂಜಿ ಬರೆದ ಕಿರು ಪುಸ್ತಕ ಮರು ಮುದ್ರಿಸಲು ಆದೇಶ ನೀಡಿದರು. ಸ್ವಾತಂತ್ರ್ಯಕ್ಕಾಗಿ ತ್ಯಾಗ ಮಾಡಿದ ಹಾಗೂ ಹೋರಾಡಿದ ಯೋಧರನ್ನು ಮರೆಯಬಾರದು. ನೈಜವಾಗಿ ದುಡಿದವರ ಸೇವೆ ಸ್ಮರಿಸಬೇಕು ಇದು ನಮ್ಮ ಕರ್ತವ್ಯ ಎಂದು ಸಚಿವ ಎಚ್.ಕೆ.ಪಾಟೀಲ ಅವರು ಹೇಳಿದರು.

ಒಂದೇ ಕುಟುಂಬ 16 ಜನರ ಜೈಲುವಾಸ

ನಮ್ಮ ಮನೆಯಲ್ಲಿ 16 ಜನ ಜೈಲು ವಾಸ ಅನುಭವಿಸಿದ್ದಾರೆ. 13 ಜನ ಸ್ವಾತಂತ್ರ್ಯಕ್ಕಾಗಿ 3 ಜನ ಗೋವಾ ವಿಮೋಚನೆಗಾಗಿ ಹೋರಾಡಿದ್ದಾರೆ. ಗಾಂಧೀಜಿ ಜೋತೆ ನಮ್ಮ ತಂದೆ ನಿಕಟ ಸಂಪರ್ಕ ಹೊಂದಿದ್ದರು. ಚಿಕ್ಕಪ್ಪ ಬೆಳಗಾವಿಯಲ್ಲಿ ಅಧಿವೇಶನ ವಾಗಬೇಕೆಂದು ಬಯಸಿದ್ದರು ಆದರೆ 1923 ರಲ್ಲಿ ತೀರಿಕೊಂಡರು. ಲೋಕಮಾನ್ಯ ಟಿಳಕರಿಂದ ಸ್ಪೂರ್ತಿ ಪಡೆದಿದ್ದರು.



ಗಾಂಧೀಜಿ ಬೆಳಗಾವಿಗೆ ಭೇಟಿ ಕೊಟ್ಟಾಗಲೆಲಾ ನಮ್ಮ ಮನೆತನ ಸೇವೆಸಲ್ಲಿಸಿದೆ ಎಂದು ವಿಠ್ಠಲರಾವ ಯಾಳಗಿ ಮೆಲಕು ಹಾಕಿದರು.

1942ರಲ್ಲಿ ನಾನು ನಮ್ಮ ತಂದೆ, ನಮ್ಮ ಕಾಕಾ ಎಲ್ಲರನ್ನೂ ಬಂಧಿಸಿ ಜೈಲಿಗೆ ಹಾಕಿದರು. ಬಾಂಬ್ ತಯಾರಿಸುವುದು, ಪೊಲೀಸ್ ಠಾಣೆಗೆ ಮುತ್ತಿಗೆ ಹಾಕುವುದು, ಚಾವಡಿ ಸುಡುತ್ತಿದ್ದೆವು ಇದಕ್ಕಾಗಿ ನಮ್ಮನ್ನು ಜೈಲಿಗೆ ಹಾಕಿದರು.

1924ರಲ್ಲಿ ಬೆಳಗಾವಿಯಲ್ಲಿ ಕಾಂಗ್ರೆಸ್ ಅಧಿವೇಶನ ಮಾಡಲು ಅಂದು ಗಂಗಾಧರಾವ ದೇಶಪಾಂಡೆ 72 ಸಾವಿರ ರೂ. ಸಂಗ್ರಹಿಸಿದರು. ಅಧಿವೇಶನಕ್ಕೆ ತಗಲುವ ಖರ್ಚನ್ನು ಭರಿಸಲು ಮುಂದಾದರು ಹುಬ್ಬಳಿಯಲ್ಲಿ ಜರುಗಿದ ಸಭೆಯಲ್ಲಿ ಈ ವಿಷಯವನ್ನು ಮತಕ್ಕೆ ಹಾಕಿದಾಗ ಬೆಳಗಾವಿಯಲ್ಲಿ ಅಧಿವೇಶನ ನಡೆಸಲು ಹೆಚ್ಚು ಮತಗಳು ಬಂದವು ಹೀಗಾಗಿ ಬೆಳಗಾವಿಯಲ್ಲಿ ಅಧಿವೇಶನ ನಡೆಯಿತು ಎಂದು ಶ್ರೀ ರವೀಂದ್ರ ದೇಶಪಾಂಡೆ (ಗಂಗಾಧರಾವ ದೇಶಪಾಂಡೆ ಅವರ ಮೊಮ್ಮಗ) ಹೇಳಿದರು.

ಸರ್ಕಾರ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಸೇನಾನಿಗಳನ್ನು ಸ್ಮರಿಸುತ್ತಿರುವುದು ನಮಗೆಲ್ಲಾ ಸಂತಸ ತಂದಿದೆ ಸರ್ಕಾರಕ್ಕೆ ಸ್ವಾತಂತ್ರ್ಯ ಯೋಧರ ಕುಂಟುಬದ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸುವೆ ಎಂದರು.

ಸ್ವಾತಂತ್ರ್ಯ ಯೋಧರ ಕುಟುಂಬದ ಸದಸ್ಯರು ಮಹಾತ್ಮಾ ಗಾಂಧಿಜಿ ಪುತ್ಥಳಿ ಅನಾವರಣ ಕಾರ್ಯಕ್ರಮಕ್ಕೆ ಆಗಮಿಸಲು ಸರ್ಕಾರದ ಪರವಾಗಿ ಸಚಿವರು ಹೆಚ್. ಕೆ. ಪಾಟೀಲರು ಆಹ್ವಾನ ನೀಡಿದರು. ಸ್ವಾತಂತ್ರ್ಯ ಹೋರಾಟಗಾರರ ಮನೆಗಳಿಗೆ ನೀಡಿದ ಭೇಟಿ ಬಗ್ಗೆ ಸಚಿವರು ಸಂತಸ ವ್ಯಕ್ತ ಪಡಿಸಿದರು. ಈ ಕುಟುಂಬದ ಸದಸ್ಯರ ಜೊತೆ ಕೆಲ ಕ್ಷಣಗಳನ್ನು ಕಳೆದಿರುವುದು ಸಂತೋಷದ ಹೆಮ್ಮೆಯ ನೆಮ್ಮದಿಯ ಭಾವ ಮೂಡಿಸಿತು ಎಂದು ತಮ್ಮನ್ನು ಬೇಟಿಯಾದ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದರು.

**ಸುವರ್ಣ ಸೌಧಕ್ಕೆ ಭೇಟಿ** ನಂತರ ಸಚಿವರಾದ ಎಚ್. ಕೆ.ಪಾಟೀಲರು ಸುವರ್ಣ ಸೌಧಕ್ಕೆ ತೆರಳಿ ಮಹಾತ್ಮಾ ಗಾಂಧಿ ಪುತ್ಥಳಿ ಅನಾವರಣ ಸಿದ್ಧತೆಯನ್ನು ಪರಿಶಿಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ ಮತ್ತಿತರು ಹಾಜರಿದ್ದರು.

# ಅಮಿತ ಶಾ ಅವರು ನೀಡಿರುವ ಅವಹೇಳನಕಾರಿ ಹೇಳಿಕೆ ಖಂಡಿಸಿ- ಪ್ರತಿಭಟಿಸಿ ಮನವಿ ಸಲ್ಲಿಕೆ



ರಾಯಬಾಗ: ಡಾ.ಬಿ.ಆರ್. ಅಂಬೇಡ್ಕರರವರ ಬಗ್ಗೆ ಸದನದಲ್ಲಿ ಕೇಂದ್ರ ಗೃಹ ಸಚಿವ ಅಮಿತ ಶಾ ಅವರು ನೀಡಿರುವ ಅವಹೇಳನಕಾರಿ ಹೇಳಿಕೆ ಖಂಡಿಸಿ ಸೋಮವಾರ ತಾಲೂಕಿನ ವಿವಿಧ ದಲಿತ ಸಂಘಟನೆಗಳಿಂದ ಪಟ್ಟಣದ ಅಂಬೇಡ್ಕರ ವೃತ್ತದಿಂದ ಝಂಡಾ ಕಟ್ಟೆವರೆಗೆ ಪ್ರತಿಭಟನೆ ನಡೆಸಿ, ಝಂಡಾ ಕಟ್ಟೆ ಹತ್ತಿರ ಮಾನವ ಸರಪಳಿ ನಿರ್ಮಿಸಿ, ರಸ್ತೆ ಬಂದ ಮಾಡಿ, ಟೈಯರಗೆ ಬೆಂಕಿ ಹಚ್ಚಿ ಅಮಿತ ಶಾ ಅವರ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು.

ನಂತರ ತಹಶೀಲ್ದಾರ ಸುರೇಶ ಮುಂಜೆ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ವಿಶ್ವ ರತ್ನ ಡಾ. ಬಾಬಾಸಾಹೇಬ ಅಂಬೇಡ್ಕರರ ಹೆಸರನ್ನು ಪ್ರಸ್ತಾಪಿಸುವುದರ ಬದಲಾಗಿ ದೇವರ ಹೆಸರನ್ನು ಪ್ರಸ್ತಾಪಿಸಿದರೆ ಏಳು ಜನ್ಮ ಸ್ವರ್ಗ ಸಿಗುತ್ತಿತ್ತು ಎಂದು ಹೇಳುವ ಮೂಲಕ ಅಂಬೇಡ್ಕರರವ- ರಿಗೆ ಅಗೌರವ ತೋರಿರುವ ಗೃಹ ಸಚಿವ ಅಮಿತ ಶಾ ಅವರನ್ನು ಕೂಡಲೇ ಗೃಹ ಸಚಿವ ಸ್ಥಾನದಿಂದ ವಜಾಗೊಳಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಿದರು. ತೆಗೆದು ಹಾಕುವ ಕ್ರಮ ಕೈಗೊಳ್ಳಬೇಕೆಂದು ಮನವಿಯಲ್ಲಿ ತಿಳಿಸಿದ್ದಾರೆ.

ಸಿಪಿಐ ಬಿ.ಎಸ್.ಮಂಟೂರ, ಪಿಎಸ್ಐ ಶಿವಶಂಕರ ಮುಕರಿ, ವಕೀಲರಾದ ರಾಜು ಶಿರಗಾಂವೆ, ದಲಿತ ಮುಖಂಡರಾದ ನಾಮದೇವ ಕಾಂಬಳೆ ಸಿದ್ದಾರ್ಥ ಸಿಂಗೆ, ಲೋಕೇಶ ಕಾಂಬಳೆ, ದೀಲಿಪ ಪಾಯನ್ನವರ, ಗಣೇಶ ಕಾಂಬಳೆ, ಶಶಿಕಾಂತ ಕಾಂಬಳೆ, ಅಶೋಕ ಶಿಂಗೆ, ಹಾಜಿ ಮುಲ್ಲಾ, ಶ್ರಾವಣ ಕಾಂಬಳೆ, ಉತ್ತಮ ಕಾಂಬಳೆ, ಕಾಡೇಶ ಐಹೋಳೆ, ಸಾಗರ ಜೆಂಡೆನ್ನವರ, ಮಹಾವೀರ ಸಾನೆ, ಅನೀಲ ಮೋಹಿತೆ, ಪರಶುರಾಮ ಟೊನಪೆ, ಜ್ಯೋತಿಬಾ ಮಾನೆ, ಮಹೇಶ ಕಾಂಬಳೆ, ಸುಜಾತಾ ಕಾಂಬಳೆ, ಲಕ್ಕವ್ವಾ ಜೋಡಟ್ಟಿ, ವಿನಾಯಕ ಕಾಂಬಳೆ, ರಾಜು ಅಸೋದೆ, ಉಮೇಶ ಸಿಂಗೆ, ಪ್ರೇಮ ಸಾನೆ, ರಾಕೇಶ್ ಅವಳೆ ಹಾಗೂ ತಾಲೂಕಿನ ವಿವಿಧ ದಲಿತ ಸಂಘಟನೆಗಳ ಒಕ್ಕೂಟದ ಮುಖಂಡರು, ಚಿಂತಕರು, ದಲಿತಪರ ಹೋರಾಟಗಾರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಮಹಾದೇವಿ ನೇಗಿನಾಳ ನಿಧನ



ಗೋಕಾಕ: ನಗರದ ನಿವಾಸಿ ಮಹಾದೇವಿ ರಾಮಪ್ಪ ನೇಗಿನಾಳ 72 ಇವರು ಸೋಮವಾರದಂದು ನಿಧನರಾದರು. ಮೃತರು ಓರ್ವ ಪುತ್ರ, ಮೂವರು ಪುತ್ರಿಯರು ಸೇ- ರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

## ಕಂಪ್ಯೂಟರ್-ಪ್ರಿಂಟರ್ ಪೂರೈಕೆಗೆ ದರಪಟ್ಟಿ ಆಹ್ವಾನ

ಹಾವೇರಿ.: ಜಿಲ್ಲಾಧಿಕಾರಿಗಳ ಕಚೇರಿಗೆ ಬೇಕಾದ ಕಂಪ್ಯೂಟರ್‌ಗಳು, ಪ್ರಿಂಟರ್ ವಿತ್ ಸ್ಕ್ಯಾನರ್‌ಗಳ ಪೂರೈಕೆಗೆ ಪೂರ್ವಾರ್ಹತೆಯುಳ್ಳ ಟೆಂಡರುದಾರರಿಂದ ನಿಯಮಾವಳಿ ಅನುಸಾರ ಇ-ಪ್ರಕ್ಯೂರ ಮೆಂಟ್ ಪೋರ್ಟಲ್ https://eproc.karnataka.gov.in ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಭರ್ತಿಮಾಡಿದ ಟೆಂಡರ್‌ಗಳನ್ನು ದಿನಾಂಕ 2-1-2025ರ ಸಾಯಂಕಾಲ 4 ಗಂಟೆಯೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ https://eproc.karnataka.gov.in ವೆಬ್‌ಸೈಟ್ ಸಂಪರ್ಕಿಸಲು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪುರುಷ ಕಾಣೆ-ಪತ್ತೆಗೆ ಮನವಿ

ಹಾವೇರಿ.ಡಿ : ರಾಣೇಬೆನ್ನೂರ ತಾಲೂಕು ಇಟಗಿ ಗ್ರಾಮದ 60 ವರ್ಷದ ಹನುಮಪ್ಪ ಬಸಪ್ಪ ಎರೇಶಿಮಿ ಎಂಬಾತ 25 ಮೇ 2024 ರಂದು ಸವದತ್ತಿ ಯಲ್ಲಮ್ಮನಗುಡ್ಡಕ್ಕೆ ಹೋಗುವುದಾಗಿ ಹೋದವನು ಮರಳಿ ಬಾರದೆ ಕಾಣೆಯಾಗಿರುವುದಾಗಿ ಹಲಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ. ಕಾಣೆಯಾದ ವ್ಯಕ್ತಿ 4.8 ಫೂಟ್ ಎತ್ತರ, ತೆಳ್ಳನೆಯ ಮೈಕಟ್ಟು, ಕಪ್ಪು ಮೈಬಣ್ಣ, ಕೋಲು ಮುಖಹೊಂದಿದ್ದು, ಕೇಸರಿ ಬಣ್ಣದ ಉದ್ದ ತೋಳಿನ ಅಂಗಿ, ಕೇಸರಿ ಪಂಜೆ ಧರಿಸಿದ್ದು, ಕೈಯಲ್ಲಿ ಜೋಳಿಗೆ ಹಾಗೂ ಕೋಲು ಹಿಡಿದುಕೊಂಡು ಓಡಾಡುತ್ತಾನೆ ಎಂದು ಹಲಗೇರಿ ಪೊಲೀಸ್ ಠಾಣೆ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ಸಂಗಮೇಶ್ವರ ಪಿಕೆಪಿಎಸ್ ಚುನಾವಣೆಯಲ್ಲಿ ಸಹಕಾರಿ ಅಭಿವೃದ್ಧಿ ಪೆನಲ್‌ಗೆ ಭರ್ಜರಿ ಜಯ



ಬೈಲಹೊಂಗಲ : ತಾಲೂಕಿನ ದೊಡವಾಡ ಗ್ರಾಮದ ಶತಮಾನೋತ್ಸವ ಸಂಸ್ಥೆ ಶ್ರೀ ಸಂಗಮೇಶ್ವರ ಪಿಕೆಪಿಎಸ್ ಆಡಳಿತ ಮಂಡಳಿ ನಿರ್ದೇಶಕ ಸ್ಥಾನಗಳಿಗೆ ಭಾನುವಾರ ನಡೆದ ಚುನಾವಣೆಯಲ್ಲಿ ಸಂಘದ ಮಾಜಿ ಅಧ್ಯಕ್ಷ ನಿಂಗಪ್ಪ ಚೌಡಣ್ಣವರ ನೇತೃತ್ವದ ಸಹಕಾರಿ ಅಭಿವೃದ್ಧಿ ಪೆನಲ್‌ನ ಅಭ್ಯರ್ಥಿಗಳು ಭರ್ಜರಿ ಜಯ ದಾಖಲಿಸಿದ್ದಾರೆ. ಭಾನುವಾರ ಬೆಳಗ್ಗೆ 9 ರಿಂದ ಸಂಜೆ 4 ಗಂಟೆವರೆಗೆ ಮತದಾನ ಪ್ರಕ್ರಿಯೆ ನಡೆದು. ಸಂಜೆ 8 ಗಂಟೆವರೆಗೆ ಮತ ಎಣಿಕೆ ಕಾರ್ಯ ನಡೆಯಿತು. ಸಾಲಗಾರ ಸಾಮಾನ್ಯ ಕ್ಷೇತ್ರಗಳಲ್ಲಿ ಬಸವರಾಜ ಮುರಗೋಡ, ನಿಂಗಪ್ಪ ಚೌಡಣ್ಣವರ, ಅಜ್ಜಪ್ಪ ಪಟಾತ, ಗುರುನಾಥ ಕಾರಕೂನ, ಸಂಗಮೇಶ ಅಂದಾನಶೆಟ್ಟಿ ಆಯ್ಕೆಗಿದ್ದಾರೆ. ಸಾಲಗಾರ ಹಿಂದುಳಿದ ಅ ವರ್ಗದಲ್ಲಿ ಮಡಿವಾಳಪ್ಪ ಕರಿಗಾರ, ಹಿಂದುಳಿದ ಬ ವರ್ಗದಲ್ಲಿ ರಾಮನಿಂಗಪ್ಪ ಯರಿಕಿತ್ತೂರ, ಪರಿಶಿಷ್ಟ ಜಾತಿ ವರ್ಗದಲ್ಲಿ ಗದಿಗೆಪ್ಪ ದೊಡಮನಿ, ಪರಿಶಿಷ್ಟ ಪಂಗಡ ವರ್ಗದಲ್ಲಿ ಲಕ್ಕಪ್ಪ ಅಲಕ್ಕನವರ ಆಯ್ಕೆಯಾಗಿದ್ದಾರೆ. ಬಿನ್ ಶೇರ ಸ್ಥಾನಕ್ಕೆ ಗಿರೀಶ ಧಾರವಾಡ, ಮಹಿಳಾ ಸಾಲಗಾರ ಸ್ಥಾನಗಳಿಗೆ ಲಲಿತಾ ಹತ್ತಿಕಟಗಿ, ಪಾರ್ವತಿ ಮುದೆನ್ನವರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಚುನಾವಣಾಧಿಕಾರಿಯಾಗಿ ಸಂತೋಷ ಹೆಗಡೆ ಕಾರ್ಯ ನಿರ್ವಹಿಸಿದರು. ದೊಡವಾಡ ಪೋಲೀಸ್ ಠಾಣೆಯಿಂದ ಸೂಕ್ತ ಬಂದೋ ಬಸ್ತ್ ಒದಗಿಸಲಾಗಿತ್ತು.ನೂತನವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ಗ್ರಾಮದೇವತೆ ದೇವಸ್ಥಾನದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಶಂಕರ ಮಾಡಲಗಿ ಹಾಗೂ ಗುರು ಹಿರಿಯರು ಸತ್ಕರಿಸಿ ಗೌರವಿಸಿದರು.

### ರಾಷ್ಟ್ರೀಯ ಗ್ರಾಹಕರ ದಿನಾಚರಣೆ

# ಹಣ ನೀಡಿ ಸೇವೆ ಪಡೆಯುವ ಪ್ರತಿಯೊಬ್ಬರೂ ಗ್ರಾಹಕರಾಗಿದ್ದಾರೆ



ಹಾವೇರಿ.ಡಿ.24: ಒಂದು ವಸ್ತು ಅಥವಾ ಸೇವೆಯನ್ನು ಹಣ ಕೊಟ್ಟು ಪಡೆಯುವ ಪ್ರತಿಯೊಬ್ಬರೂ ಗ್ರಾಹಕರಾಗಿರುತ್ತಾರೆ. ವಸ್ತುಗಳನ್ನು ಖರೀದಿಸುವಾಗ ಆತುರಮಾಡದೇ ಯೋಚನೆಮಾಡಿ ಖರೀದಿಸಬೇಕು ಎಂದು ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಈಶ್ವರಪ್ಪ ಬಿ.ಎಸ್. ಅವರು ಹೇಳಿದರು.

ಹಾವೇರಿ ನಗರದ ಶ್ರೀ ಹುಕ್ಕೇರಿಮಠದ ಪ್ರೌಢಶಾಲೆಯಲ್ಲಿ ಮಂಗಳವಾರ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಹೆಚ್ಚಾಗಿ ಆನ್‌ಲೈನ್ ಖರೀದಿಗೆ ಮೊರೆಹೋಗುತ್ತಿದ್ದು, ಆನ್‌ಲೈನ್ ಸೇವೆಯಲ್ಲಿ ಲೋಪಗಳು ಕಂಡುಬಂದಲ್ಲಿ ನಿರ್ಲಕ್ಷ್ಯ ವಹಿಸದೇ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ದೂರು ಸಲ್ಲಿಸಿ ಪರಿಹಾರ ಕಂಡುಕೊಳ್ಳಬಹುದು. ಖರೀದಿಸಿ ವಸ್ತುಗಳ ರಸೀದಿ, ವಾರಂಟಿ ಹಾಗೂ ಗ್ಯಾರಂಟಿ ದಾಖಲೆಗಳನ್ನು ಸುರಕ್ಷಿತವಾಗಿಟ್ಟುಕೊಳ್ಳಬೇಕು. ಅಂದಾಗ ಮಾತ್ರ ಮಾರಾಟಗಾರರ ವಿರುದ್ಧ ದೂರು ದಾಖಲಿಸಿ ಪರಿಹಾರ ಪಡೆದುಕೊಳ್ಳಲು ಸಾಧ್ಯ ಎಂದು ಹೇಳಿದರು.

ದೈನಂದಿನ ವ್ಯವಹಾರದಲ್ಲಿ ಖರೀದಿಸಿದ ವಸ್ತುಗಳಲ್ಲಿ ನ್ಯೂನ್ಯತೆ ಅಥವಾ ದೋಷಗಳು ಕಂಡುಬಂದಲ್ಲಿ ಖರೀದಿಸಿದ ರಸೀದಿಯೊಂದಿಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರ ಸಲ್ಲಿಸುವ ಮೂಲಕ ಪರಿಹಾರವನ್ನು ಪಡೆಯಬಹುದು ಎಂದು ಮಾಹಿತಿ ನೀಡಿದರು.

ಉಪನ್ಯಾಸಕರಾಗಿ ಭಾಗವಹಿಸಿದ ಶಿವರಾಜ ಕಂಬಳಿ ಅವರು ಗ್ರಾಹಕರ ಹಕ್ಕುಗಳ ಕುರಿತು ವಿವರವಾದ ಮಾಹಿತಿ ನೀಡಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಶ್ರೀಮತಿ ಉಮಾದೇವಿ ಹಿರೇಮಠ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿ ಚಂದ್ರಶೇಖರ, ಮುಖ್ಯೋಪಾಧ್ಯಾಯರಾದ ಚಿ.ವೈ.ಅಂತರವಳ್ಳಿ ಹಾಗೂ ಮದರಲಿ ಕಾಗಿನೆಲಿ ಇತರರು ಉಪಸ್ಥಿತರಿದ್ದರು.

# ಗ್ರಾಮೀಣ ಭಾಗದ ರಸ್ತೆ ಅಭಿವೃದ್ಧಿಗೆ ಬದ್ಧ- ಬಾಬಾಸಾಹೇಬ ಪಾಟೀಲ



ನೇಸರಗಿ . ಚನ್ನಮ್ಮನ ಕಿತ್ತೂರು ಕ್ಷೇತ್ರದ ಗ್ರಾಮೀಣ ಭಾಗದ ರಸ್ತೆಗಳ ಅಭಿವೃದ್ಧಿಗೆ ಬದ್ಧವಾಗಿದ್ದು ಹಂತ ಹಂತವಾಗಿ ಗ್ರಾಮೀಣ ಭಾಗದ ರಸ್ತೆಗಳ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ಚನ್ನಮ್ಮನ ಕಿತ್ತೂರು ಶಾಸಕರಾದ ಬಾಬಾಸಾಹೇಬ ಪಾಟೀಲ ಹೇಳಿದರು.

ಅವರು ಸಮೀಪದ ನೇಗಿನಹಾಳ ಗ್ರಾಮದಲ್ಲಿ ಮುಖ್ಯ ಮಂತ್ರಿಗಳ ವಿಶೇಷ ಅನುಧಾನದಲ್ಲಿ ಸಿ ಸಿ ರಸ್ತೆ ನಿರ್ಮಾಣಕ್ಕೆ 7,20,000/- ರೂಪಾಯಿಗಳ ಅನುಧಾನದ ಕಾಮಗಾರಿಗೆ ಮತ್ತು ಮುಖ್ಯ ಮಂತ್ರಿಗಳ ವಿಶೇಷ ಅನುಧಾನದಲ್ಲಿ ಬೇವಿನಕೊಪ್ಪ ರಸ್ತೆಯ ರುಂಡದೊಳ್ಳಿ ಗ್ರಾಮದಲ್ಲಿ 10 ಲಕ್ಷ ರೂಪಾಯಿಗಳ ಅನುಧಾನದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷೆ ಶ್ರೀಮತಿ ಮಹಾದೇವಿ ಕೋಟಗಿ, ಮಡಿವಾಳಪ್ಪ ಕುಲ್ಲೊಳ್ಳಿ, ಶಿವಾನಂದ ಕುಂಕುರ, ಈರಣ್ಣ ಉಳವಿ, ಬಸು ಹಡಗಿನಹಾಳ, ಈರಪ್ಪ ಶಿಂತ್ರಿ, ಇಂಜಿನೀಯರ ಆರ್ ಆರ್ ಬಡಿಗೇರ, ಗ್ರಾ ಪಂ ಸದಸ್ಯ ಮಹಾದೇವ ಮಡಿವಾಳರ ಸೇರಿದಂತೆ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಕ್ರೀಡೆಯಲ್ಲಿ ಭಾಗವಹಿಸಿದರೆ ಆತ್ಮ ವಿಶ್ವಾಸ ಹೆಚ್ಚಳ : ಬಾಬಾಸಾಹೇಬ ಪಾಟೀಲ



ನೇಸರಗಿ. ಇಂದಿನ ಯುವಕರು ಮೊಬೈಲ್ ವ್ಯಾಮೋಹ ಬಿಟ್ಟು ಎಲ್ಲ ತರಹದ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಂಡು ತಮ್ಮ ಶರೀರವನ್ನು ಸದೃಢವಾಗಿ ಇಟ್ಟು ಪಾಠದ ಜೊತೆ ಆಟದಲ್ಲಿ ಪಾಲ್ಗೊಳ್ಳಿ ಎಂದು ಚನ್ನಮ್ಮನ ಕಿತ್ತೂರು ಶಾಸಕರಾದ ಬಾಬಾಸಾಹೇಬ ಪಾಟೀಲ ಹೇಳಿದರು. ಅವರು ಗ್ರಾಮದ ವಿದ್ಯಾ ಮಂದಿರ ಪ್ರೌಢ ಶಾಲೆಯಲ್ಲಿ ಡಿ ಎಸ್ ಎಸ್ ಆಶ್ರಯದಲ್ಲಿ ದಿ. ನಿಂಗಪ್ಪ ಮಾಳಣ್ಣವರ ಸ್ಮರಣಾರ್ಥ ಫುಲ್ ಪಿಚ್ ಕ್ರಿಕೆಟ್ ಪಂದ್ಯಾವಳಿ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಯುವ ಮುಖಂಡ ಸಚಿನ ಪಾಟೀಲ ಮಾತನಾಡಿ ಇಂದಿನ ಯುಗದಲ್ಲಿ ಯುವಕರು ಕ್ರೀಡೆಯಲ್ಲಿ ಹೆಚ್ಚಾಗಿ ಪಾಲ್ಗೊಳ್ಳುತ್ತಿಲ್ಲ ಅದಕ್ಕಾಗಿ ಈ ಭಾಗದ ಯುವಕರು ಕಬ್ಬಡಿ, ಕೋಕೋ, ವಾಲಿಬಾಲ್, ಕ್ರಿಕೆಟ್, ಕೇರಂ, ಚೆಸ್ ಇನ್ನಿತರ ಕ್ರೀಡೆಗಳಲ್ಲಿ ಪಾಲ್ಗೊಂಡು ದೇಹವನ್ನು ಗಟ್ಟಿಯಾಗಿ ಇಟ್ಟುಕೊಳ್ಳಿ ಎಂದರು. ಕಾರ್ಯಕ್ರಮದಲ್ಲಿ ಹಿರಿಯರಾದ ಅಡಿವಪ್ಪ ಮಾಳಣ್ಣವರ, ಬಾಳಪ್ಪ ಮಾಳಗಿ, ಗ್ರಾ ಪಂ ಅಧ್ಯಕ್ಷ ವೀರಭದ್ರ ಚೋಭಾರಿ, ಮಲ್ಲಿಕಾರ್ಜುನ ಕಲ್ಲೋಳಿ, ಮಂಜುನಾಥ ಹುಲಮನಿ,ಅಶೋಕ ಹತ್ತರಗಿ, ಡಿ ಎಸ್ ಎಸ್ ಅಧ್ಯಕ್ಷ ರಮೇಶ ರಾಯಪ್ಪಗೋಳ, ಸಲೀಮ್ ಶಾ ನದಾಫ್, ಬಸವರಾಜ ಚಿಕ್ಕನಗೌಡರ,ಸುರೇಶ ಅಗಸಿಮನಿ, ಯಮನಪ್ಪ ಪೂಜೇರಿ, ಪ್ರಕಾಶ ತೋಟಗಿ, ಸಂತೋಷ ಪಾಟೀಲ, ಪ್ರಕಾಶ ಮುಂಗರವಾಡಿ, ಮಂಜು ಮದೇನ್ನವರ ಸೇರಿದಂತೆ ಗ್ರಾಮದ ಮುಖಂಡರು, ಕ್ರೀಡಾ ಪಟುಗಳು ಉಪಸ್ಥಿತರಿದ್ದರು.

# ನಟ ವಿಶ್ವಪ್ರಕಾಶ ಮಲಗೊಂಡಗೆ "ಅತ್ಯುತ್ತಮ ನಟ" ಪ್ರಶಸ್ತಿ



ವಿಜಯಪುರ : ನವ ಕರ್ನಾಟಕ ಚಲನಚಿತ್ರೋತ್ಸವ ಅಕಾಡೆಮಿ ಹಾಗೂ ಯುನಿವರ್ಸಲ್ ಫೀಲಂ ಕೌನ್ಸಿಲ್ ಆಯೋಜಿಸಿರುವ ನಾಲ್ಕನೇಯ ಕರ್ನಾಟಕ ಅಂತರರಾಷ್ಟ್ರೀಯ ಚಲನಚಿತ್ರೋತ್ಸವ 2024 ದಲ್ಲಿ ವಿಜಯಪುರ ಜಿಲ್ಲೆಯ ಆಲಮೇಲ ತಾಲೂಕಿನ ಗುಂದಗಿ ಗ್ರಾಮದ ಪ್ರತಿಭೆ ನಟ ನಿರ್ದೇಶಕ ಪತ್ರಕರ್ತ ವಿಶ್ವಪ್ರಕಾಶ ಟಿ ಮಲಗೊಂಡ ಅವರಿಗೆ "ಬೆಸ್ಟ್ ಆಕ್ಟರ್" ಅವಾರ್ಡ (ಅತ್ಯುತ್ತಮ ನಟ) ನೀಡಲಾಯಿತು.


ಇತ್ತಿಚೆಗೆ ಬೆಂಗಳೂರಿನ ವೈಟ್ ಫೀಲ್ಡ್ ನಲ್ಲಿರುವ ಎಸ್ಪಾಟೋ ರೀ ಕ್ರಿಯೇಷನ್ ಹಬ್ ನಲ್ಲಿ ಜರುಗಿದ ಕರ್ನಾಟಕ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ನಿರ್ದೇಶಕ ಎಂ ಎ ಮುಮ್ಮಿಗಟ್ಟಿ, ಹಿರಿಯ ಕಲಾವಿದ ಸುಂದರ ರಾಜ್, ಆಂಧ್ರಪ್ರದೇಶ ಫೀಲಂ ಚೆಂಬರ್ ಅಧ್ಯಕ್ಷ ಅಂಬಾಟಿ ಮಧು ಮೋಹನ ಕೃಷ್ಣ, ನಿರ್ಮಾಪಕ ಕಲ್ಮೇಶ ಹಾವೇರಿಪೇಟ, ಅವರು ವಿಶ್ವಪ್ರಕಾಶ ಮಲಗೊಂಡ ಅವ- ರಿಗೆ ಅತ್ಯುತ್ತಮ ನಟನೆಂದು ಗುರುತಿಸಿ ಪ್ರಶಸ್ತಿ ಪ್ರದಾನ ಮಾಡಿದರು.

ಚಲನಚಿತ್ರೋತ್ಸವದ ಸ್ಪರ್ಧೆಯಲ್ಲಿ ವಿಶ್ವಪ್ರಕಾಶ ನಟಿಸಿ ನಿರ್ದೇಶಿಸಿರುವ "ತುಷಾರ್" ಚಿತ್ರವೂ ಸಹ ಭಾಗವಹಿಸಿತ್ತು. ಸುಮಾರು 150 ಕ್ಕೂ ಹೆಚ್ಚು ಚಲನಚಿತ್ರಗಳು ಚಲನಚಿತ್ರೋತ್ಸವದಲ್ಲಿ ಭಾಗವಹಿಸಿದ್ದವು.

ವೇದಿಕೆ ಮೇಲೆ ಕೆಜಿಎಫ್ ಸಿನಿಮಾ ಸಾಹಿತ್ಯ ರಚನೆಕಾರ ಹಾಗೂ ನಿರ್ದೇಶಕ ಕಿನ್ನಾಳ ರಾಜ, ದಿಲೀಪ್ ಕುಮಾರ್, ಜಮ್ಮು ಕಾಶ್ಮಿರ ಜಯೇಶ ಗುಪ್ತಾ, ಪ್ರಭುರಾಮ ರೆಡ್ಡಿ, ಸುಪರಸ್ಟಾರ್ ಸಂಪಾದಕ ಅಸ್ಲಾಂ, ಆನಂದ ಗುಪ್ತಾ, ನಿರ್ದೇಶಕ ನಿರ್ಮಾಪಕ ಸುನೀಲ್ ಕುಮಾರ್ , ಹಿರಿಯ ಕಲಾವಿದರು, ನಟ ನಟಿಯರು, ನಿರ್ದೇಶಕರು, ನಿರ್ಮಾಪಕರು, ಉದ್ದಿಮೆದಾರರು ಸೇರಿದಂತೆ ಇನ್ನಿತರರು ಇದ್ದರು. ವಿಶ್ವನಾಥ ಪಲ್ಲೇದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ಮಿಣಜಗಿಯ ಶ್ರೀ ಗ್ರಾಮದೇವತೆ – ಶ್ರೀ ಮಾಯಮ್ಮದೇವಿ ಜಾತ್ರೆ

# ಎಲ್ಲ ದಾನಗಳಲ್ಲಿ ರಕ್ತದಾನ ಮಹಾದಾನವಾಗಿದೆ-ಹುಕ್ಕೇರಿ




ತಾಳಿಕೋಟೆ, ಸಮಾಜದಲ್ಲಿ ಅನೇಕ ದಾನಗಳನ್ನು ಮಾಡಲಾಗುತ್ತದೆ ಆದ- 'ರೆ ಮನುಷ್ಯನ ಜೀವಕ್ಕೆ ಆಪತ್ತು ಬಂದಾಗ ರಕ್ತವೆಂಬುದು ಎಲ್ಲಿ ದುಡ್ಡುಕೊಟ್ಟರೂ ಸಿಗುವದಿಲ್ಲಾ ಅಂತಹ ರಕ್ತವನ್ನು ದಾನ ಮಾಡುವ ರೂಡಿಯನ್ನು ಯುವಕರು ಅಳವಡಿಸಿಕೊಂಡಾಗ ಮಹಾದಾನಿಯಾಗುವದರ ಜೊತೆಗೆ ಜೀವ ಉಳಿಸಿದ ಪುಣ್ಯ ಲಬಿಸಲಿದೆ ಎಂದು ತಾಳಿಕೋಟೆ ಸಮೂದಾಯ ಆರೋಗ್ಯ ಕೇಂದ್ರದ ಆಡಳಿತ ವೈಧ್ಯಾಧಿಕಾರಿ ಡಾ.ಶ್ರೀಶೈಲ ಹುಕ್ಕೇರಿ ಅವರು ಹೇಳಿದರು.

ಸೋಮವಾರರಂದು ತಾಲೂಕಿನ ಮಿಣಜಗಿ ಗ್ರಾಮದಲ್ಲಿ ಶ್ರೀ ಗ್ರಾಮದೇವತೆ(ದ್ಯಾಮವ್ವದೇವಿ) ಹಾಗೂ ಶ್ರೀ ಮಾಯಮ್ಮದೇವಿ ಜಾತ್ರೋತ್ಸವ ಅಂಗವಾಗಿ ಜಾತ್ರೋತ್ಸವ ಕಮಿಟಿ ಹಾಗೂ ಜಿಲ್ಲಾ ಪಂಚಾಯತ್ ವಿಜಯಪುರ ಜಿಲ್ಲಾ ಆರೋಗ್ಯ ಮತ್ತು ಕುಟುಂಭ ಕಲ್ಯಾಣ ಇಲಾಖೆ, ಪ್ರಾಥಮಿಕ ಆರೋಗ್ಯ ಕೇಂದ್ರ ಕೊಣ್ಣೂರ ಹಾಗೂ ಸಮೂದಾಯ ಆರೋಗ್ಯ ಕೇಂದ್ರ ತಾಳಿಕೋಟೆ, ಗ್ರಾಂ ಪಂಚಾಯ್ತಿ ಮಿಣಜಗಿ ಇವರ ಸಹಯೋಗದಲ್ಲಿ ಆಯೋಜಿಸಲಾದ ರಕ್ತದಾನ ಹಾಗೂ 1ನೇ ಹಂತದ ಸಮಗ್ರ ಆರೋಗ್ಯ ಅಭಿಯಾನ ಶಿಬಿರ ಮತ್ತು ಮದುಮೇಹ ಕಾಯಲೆ ಉಚಿತ ತಪಾಸಣಾ ಮತ್ತು ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದ ಅವರು ಪ್ರತಿಯೊಬ್ಬ- ರಿಗೂ ಆರೋಗ್ಯವೆಂಬುದು ಮುಖ್ಯವಾಗಿದೆ ಮನುಷ್ಯನು ಆರೋಗ್ಯದಿಂದ ಇದ್ದರೆ ಎಲ್ಲವನ್ನು ಸಾದಿಸಬಹುದು ಇತ್ತಿಚಗೆ ವಿವಿಧ ರೋಗಗಳು ಕಾಣಿಸಿಕೊಳ್ಳುತ್ತಿದ್ದು ಸ್ವಲ್ಪೇ ಆರೋಗ್ಯದಲ್ಲಿ ಏರುಪೇರು ಆದ- 'ರೂ ಸಹ ವೈಧ್ಯರನ್ನು ಸಂಪರ್ಕಿಸಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕೆಂದ ಅವರು ರಕ್ತದಾನವೆಂಬುದು ಬಡಬಗ್ಗ- ರಿಗೆ ಹಾಗೂ ನಿರ್ಗತಿಕರಿಗೆ ಆಪತ್ತಕಾಲದಲ್ಲಿ ಸಹಾಯವಾಗಲಿ ಎಂಬ ಉದ್ದೇಶದಿಂದ ಮಿಣಜಗಿ ಜಾತ್ರೋತ್ಸವ ಕಮಿಟಿಯವರು ಆರೋಗ್ಯ ಇಲಾಖೆಯ ಸಹಯೋಗತ್ವದಲ್ಲಿ ರಕ್ತದಾನ ಶಿಬಿರ ಏರ್ಪಡಿಸಿರುವದು ಸಂತಸದ ಸಂಗತಿಯಾಗಿದೆ. ರಕ್ತದಾನ ಮಾಡುವುದರಿಂದ ಶೇಕಡಾ 80ರಷ್ಟು ಹೃದಯಾಘಾತ ಆಗುವುದನ್ನು ತಡೆಹಿಡಿಯಬಹುದು ರಕ್ತದಾನದಿಂದ ಕೊಲೆಸ್ಟ್ರಾಲ್ ಎಂಬುದು ಕಡಿಮೆಯಾಗುತ್ತದೆ ಒಬ್ಬರು ಮಾಡಿದ ರಕ್ತದಾನದಿಂದ ಸುಮಾರು ಮೂರು ಜನರ ಜೀವ ಉಳಿಸುವ ಕಾರ್ಯವಾಗಬಹುದು ಇದು ಪುಣ್ಯದ ಕಾರ್ಯವಾಗಿದೆ ರಕ್ತದಾನ ಮಾಡುವುದ- ರಿಂದ ಪ್ರಪಂಚದಲ್ಲಯೇ ಮಾನವನಲ್ಲಿ ಹುಟ್ಟುತ್ತೀರುವ ರಕ್ತ ಬೇರೆಯಾವ ಪ್ಯಾಕ್ಟ- ರಿಯಲ್ಲಿ ತಯಾರಾಗುವಂತಹ ವಸ್ತು ಅಲ್ಲ ಆದಷ್ಟು ಎಲ್ಲರೂ 18ವರ್ಷ ಮೇಲ್ಪಟ್ಟು 60ವರ್ಷ ಒಳಗಿನವರು ಆರೋಗ್ಯವಂತರಾಗಿರುವವರು ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಮಿಣಜಗಿ ಗ್ರಾಂಪಂ ಅಧ್ಯಕ್ಷರಾದ ಶ್ರೀಮತಿ ಜ್ಯೋತಿ ಮಹಾಂತೇಶ ಬಿರಾದಾರ ಅವರು ಮಾತನಾಡಿ ಮಿಣಜಗಿ ಗ್ರಾಮದ ಜನರು ಎಲ್ಲ ದಾನಗಳಲ್ಲಿಯೂ ಶ್ರೇಷ್ಠತೆಯನ್ನು ಪಡೆದುಕೊಂಡಿದ್ದಾರೆ ಶ್ರೀ ಗ್ರಾಮದೇವತೆ(ದ್ಯಾಮವ್ವದೇವಿ) ಹಾಗೂ ಶ್ರೀ ಮಾಯಮ್ಮದೇವಿ ಜಾತ್ರೋತ್ಸವ ಅಂಗವಾಗಿ ರಕ್ತದಾನ ಶಿಬಿರವನ್ನು ಆಯೋಜಿಸಿ ನಾ ಮುಂದೆ ನೀ ಮುಂದೆ ಎಂಬಂತೆ ರಕ್ತದಾನ ಮಾಡಲು ಮುಂದೆ ಬಂದಿರುವದು ಒಳ್ಳೆಯ ಬೆಳವಣಿಗೆಯಾಗಿದ್ದು ಇಂತಹ ಕಾರ್ಯಗಳಿಗೆ ಮಿಣಜಗಿ ಗ್ರಾಂ ಪಂಚಾಯ್ತಿಯಿಂದ ಎಲ್ಲ ಸಹಕಾರ ನೀಡಲಾಗುವದೆಂದರು. ಈ ಸಮಯದಲ್ಲಿ ಮುಖಂಡರುಗಳಾದ ಈರಣ್ಣ ಯರನಾಳ, ಸಂಗನಗೌಡ ಪಾಟೀಲ, ಸಮೂದಾಯ ಆರೋಗ್ಯ ಅಧಿಕಾರಿ ಸಂಗಮೇಶ ವಣ- ಕ್ಯಾಳ, ಅನೀಲ ರೂಗಿ, ನಿರಿಕ್ಷಣಾಧಿಕಾರಿ ಶಿವಯೋಗಿಮಠ, ಕಲ್ಪನಾ ಹೂಗಾರ, ಮಿಣಜಗಿ ಗ್ರಾಂಪಂ ಅಧಿಕಾರಿ ಎಸ್. ಎಸ್.ಬೆಳಗಲ್ಲ, ಮಹಾಂತೇಶ ಬಿರಾದಾರ, ಗ್ರಾಮದ ಮುಖಂಡರುಗಳು ಉಪಸ್ಥಿತ- ರಿದ್ದರು.

# ಶ್ರೀ ಖಾಸ್ಗತೇಶ್ವರ ಸಮೂದಾಯ ಭವನ ಉದ್ಘಾಟನೆ : ಸಾಮೂಹಿಕ ವಿವಾಹ

# ಶ್ರೀಖಾಸ್ಗತಮಠಕ್ಕೆ ಸಿದ್ದಲಿಂಗದೇವರೆಂಬ ಮುತ್ತು ದೊರೆತಿದೆ-ನಡಹಳ್ಳಿ



ತಾಳಿಕೋಟೆ, ಸಮಾಜ- ಕ್ಕೆ ಅನುಕೂಲವಾಗುವಂತಹ ಮಹಾ ಸಭಾಭವನವನ್ನು ಇಂದು ಲೋಕಾರ್ಪಣೆ ಮಾಡಿದ ಶ್ರೀ ಖಾಸ್ಗತೇಶ್ವರ ಮಠದ ಪೀಠಾಧಿಪತಿ ಶ್ರೀ ಸಿದ್ದಲಿಂಗ ದೇವರು ಸಾಕ್ಷಾತ ಶ್ರೀ ಖಾಸ್ಗತರಂತೆ ಭಕ್ತೋದ್ದಾರ ಜನೋದ್ದಾರಕ್ಕಾಗಿ ಶ್ರಮಿಸುತ್ತಿರುವದನ್ನು ನೋಡಿದರೆ ಶ್ರೀ ಖಾಸ್ಗತಮಠಕ್ಕೆ ಸಿದ್ದಲಿಂಗ ದೇವರೆಂಬ ಮುತ್ತು ದೊರೆತಂತಾಗಿದೆ ಎಂದು ಬಿಜೆಪಿ ರಾಜ್ಯ ರೈತ ಮೂರ್ಚಾ ಅಧ್ಯಕ್ಷ ಮಾಜಿ ಶಾಸಕ ಎ. ಎಸ್.ಪಾಟೀಲ(ನಡಹಳ್ಳಿ) ಅವರು ಹೇಳಿದರು.

ಸೋಮವಾರರಂದು ಪಟ್ಟಣದ ಎಸ್.ಕೆ.ಹೈಸ್ಕೂಲ್ ಪಕ್ಕದಲ್ಲಿ ಸರಕಾರ ಮತ್ತು ಶ್ರೀಮಠದ ಸಹಯೋಗದಲ್ಲಿ ನಿರ್ಮಾಣಗೊಂಡ ಶ್ರೀ ಖಾಸ್ಗತೇಶ್ವರ ಸಮುದಾಯ ಭವನವ ಉದ್ಘಾಟನಾ ಕಾರ್ಯಕ್ರಮವನ್ನು ದೀಪ ಬೆಳಗಿಸುವದರೊಂದಿಗೆ ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ಸಭಾ ಭವನ ಉದ್ಘಾಟನೆಯಿಂದ ಈ ಭಾಗದ ಬಡ ಕುಟುಂಬಗಳಿಗೆ ಅನುಕೂಲವಾಗಲಿದೆ ಇಂದು 9 ಜೋಡಿ ಉಚಿತ ಸಾಮೂಹಿಕ ವಿವಾಹ ಮಾಡಿ ಅನುಕೂಲ ಕಲ್ಪಿಸಿರುವದು ಮೆಚ್ಚುವಂತಹದ್ದಾಗಿದೆ ಎಂದರು. ಶ್ರೀ ಖಾಸ್ಗತವೆಂಬ ಶಕ್ತಿ ಸಾಮಾನ್ಯವಲ್ಲಾ ಮಹಾ ಶಕ್ತಿಯಾಗಿದೆ ಈ ಹಿಂದೆ ಶ್ರೀ ಖಾಸ್ಗತರ ಕಾಲದಲ್ಲಿ ಕಾಳುಕಡಿ ಎತ್ತಿನಗಾಡಿಯಲ್ಲಿ ತುಂಬಿಕೊಂಡು ಬಂದು ದಾಸೋಹ ನಡೆಸುವ ಕಾರ್ಯ ನಡೆಯುತ್ತಿತ್ತು ಇಂತಹ ಅನೇಕ ಉದಾಹರಣೆಗಳಿವೆ ಶ್ರೀಮಠದಲ್ಲಿ ಪ್ರಸಾದ ಸೇವಿಸಿ ನಾನೂಕೂಡಾ ಈ ಹಿಂದೆ ಅಲ್ಲಿ ಮಲಗಿದವನಾಗಿದ್ದೇನೆ ಶ್ರೀಮಠದ ಪರಮಭಕ್ತರು ಹಗಲಿರುಳು ಈ ಹಿಂದೆ ತೊಂದರೆ ಅನುಭವಿಸಿ ಶ್ರೀ ಮಠವನ್ನು ಉಳಿಸಿ ಬೆಳೆಸಲು ಪ್ರಯತ್ನಿಸಿರುವದನ್ನು ವೇ. ಮುರುಘೇಶ ವಿರಕ್ತಮಠ ಅವರು ಶ್ರೀ ಸಿದ್ದಲಿಂಗ ಶ್ರೀಗಳಿಗೆ ಮನವರಿಕೆ ಮಾಡಬೇಕೆಂದ ಅವರು ಶ್ರೀಗಳ ವರ್ಚಸ್ಸು ಘನತೆ ಗೌರವವೆಂಬುದು ಗ್ರಾಮಾಂತರ ಮಟ್ಟದಲ್ಲಿಯೂ ಹೆಚ್ಚಾಗಿದೆ ಇತ್ತೀಚಿಗೆ ಮರೆ ಮಾಚುತ್ತಿರುವ ದಾಸೋಹ ಪದ್ದತಿಯನ್ನು ಮುಂದುವರೆಸಿಕೊಂಡು ಹೋಗಲು ಭಕ್ತರು ಕೈಜೋಡಿಸಬೇಕೆಂದರು. ನಾವು ಸ್ವಾರ್ಥ ಬಧುಕಿನಲ್ಲಿರುವದನ್ನು ಮರೆಯಬೆಕಾಗಿದೆ ಶ್ರೀಮಠದ ಪರಂಪರೆಯನ್ನು ಬೆಳೆಸಿಕೊಂಡು ಹೋಗಬೇಕಾಗಿದೆ ಮಠ ಅಂ- ದರೇನು?, ಆದ್ಯಾತ್ಮ ಅಂದರೇನು? ಎಂಬ ಮಹತ್ವದ ಜೀವನದ ಹಂತವನ್ನು ಮಕ್ಕಳಿಗೆ ಕಲಿಸಬೇಕಾಗಿದೆ ಎಂದು ಹೇಳಿದ ನಡಹಳ್ಳಿ ಅವರು ನೂತನವಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟ ದಂಪತಿಗಳು ಸುಖಃ ಜೀವನ ನಡೆಸಬೇಕೆಂದು ಆಶಿಸಿ ಶುಭ ಕೋರಿದರು.

ದಿವ್ಯ ಸಾನಿದ್ಯ ವಹಿಸಿದ ಕೊಡೇಕಲ್ಲ ದುರದುಂಡೇಶ್ವರ ಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು ಮಾತನಾಡಿ ಜಿಲ್ಲೆಯಲ್ಲಿಯೇ ಬೃಹತ್ ಆಕಾರದ ಸಭಾಭವನ ಇಂದು ಉದ್ಘಾಟನೆಗೊಂಡ ಶ್ರೀ ಖಾಸ್ಗತ ಸಭಾಭವನವಾಗಿದೆ ಬಡ ಬಗ್ಗರ ಬಗ್ಗೆ ಕಾಳಜಿ ವಹಿಸುತ್ತಾ ಚಿಕ್ಕ ವಯಸ್ಸಿನಲ್ಲಿಯೇ ಭಕ್ತ ಸಮೂಹವನ್ನು ಆಕರ್ಷಣೆ ಮಾಡಿಕೊಂಡು ಭಕ್ತರ ವಲುಮೆ ಪಡೆದ ಶ್ರೀ ಖಾಸ್ಗತ ಮಠದ ಶ್ರೀ ಸಿದ್ದಲಿಂಗದೇವರು ಬೃಹತ್ ಆಕಾರದ ಸಭಾಭವನವನ್ನು ನಿರ್ಮಾಣ ಮಾಡಿ ತೋರಿಸಿದ್ದಾರೆ ಸಿದ್ದಲಿಂಗ ದೇವರು ಶಿವ ಸ್ವರೂಪಿಯಾಗಿದ್ದು ಇಂದು ಸಾಮೂಹಿಕವಾಗಿ ಮಧುವೆಯನ್ನು ಮಾಡಿ ಭಕ್ತರ ಉದ್ದಾರಕ್ಕೆ ಮುಂದಾಗಿರುವದು ಸಂತಸ ತಂದಿದೆ ಇಂದು ಮಧುವೆಯಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟ ಸತಿ ಪತಿಯರು ಭಾಗ್ಯವಂತರೆಂದು ನಾನು ಬಣ್ಣಿಸುತ್ತೇನೆಂದ ಶ್ರೀಗಳು ಶ್ರೀ ಖಾಸ್ಗತರ ಶ್ರೀ ವಿರಕ್ತಶ್ರೀಗಳ ಆಶೀರ್ವಾದ ಎಲ್ಲರ ಮೇಲಿರಲಿ ಎಂದರು.

ಇನ್ನೋರ್ವ ಶ್ರೀ ಖಾಸ್ಗತೇಶ್ವರ ಮಠದ ಪೀಠಾಧಿಪತಿಗಳು ಹಾಗೂ ಶ್ರೀ ಖಾಸ್ಗತೇಶ್ವರ ಸಮುದಾಯ ಭವನದ ಅಧ್ಯಕ್ಷರಾದ ಶ್ರೀ ಸಿದ್ದಲಿಂಗದೇವರು ಮಾತನಾಡಿ ಬಡ ಮಕ್ಕಳ, ಹಾಗೂ ಬಡ ಭಕ್ತರ ಉದ್ದಾರವಾಗಲಿ ಎಂಬುದೇ ನನ್ನ ಅಪೇಕ್ಷೆಯಾಗಿದೆ ಭಕ್ತರೇ ನನ್ನ ಆಸ್ತಿ ನೀವೇ ದೊಡ್ಡವರೆಂದು ತಮ್ಮ ಹಾಗೂ ಶ್ರೀಮಠದ ಮೇಲಿಟ್ಟ ಭಕ್ತರ ಭಕ್ತಿಯನ್ನು ಕೊಂಡಾಡಿದ ಶ್ರೀಗಳು ನವ ದಾಂಪತ್ಯ ಜೀವನಕ್ಕೆ ಕಾಲಿಟ್ಟ ದಂಪತಿಗಳಿಗೆ ಶುಭ ಕೋರಿ ದಾಂಪತ್ಯ ಜೀವನ ಸುಖಃಮಯವಾಗಿ ಸಾಗಲೆಂದರು.

ನಾವದಗಿಯ ಶ್ರೀ ರಾಜೇಂದ್ರ ಒಡೆಯರ ಮಹಾಸ್ವಾಮಿಗಳು ಮಾತನಾಡಿದರು.

ಇದೇ ಸಮಯದಲ್ಲಿ ಅನೇಕ ಶ್ರೀ ಸಿದ್ದಲಿಂಗ ಮಾತಾಪಿತರಿಗೆ ಹಾಗೂ ದಾನಿಗಳಿಗೆ ಹಾಗೂ ಸೇವಾ ಕಾರ್ಯಕರ್ತರಿಗೆ ಮಹಾ ದಾಸೋಹಿಗಳಿಗೂ, ಪೋಷಕರಿಗೂ, ಸನ್ಮಾನಿಸಿ ಶ್ರೀಗಳು ಗೌರವಿಸಿದರು.

ವೇದಿಕೆಯ ಮೇಲೆ ಶ್ರೀ ಖಾಸ್ಗತೇಶ್ವರ ಮಠದ ಉಸ್ತುವಾರಿ ವೇ. ಮುರುಘೇಶ ವಿರಕ್ತಮಠ, ದೇವಗಿರಿಯ ಶ್ರೀ ಶೀವರುದ್ರಯ್ಯಸ್ವಾಮಿಗಳು, ಜಾಲಿಹಾಳದ ಶಂಕ್ರಾನಂದ ಸ್ವಾಮಿಗಳು, ಹಾಗೂ ಢವಳಗಿಯ ಗಣ್ಯ ಉದ್ಯಮಿ ಸಾಮೂಹಿಕ ವಿವಾಹದ ಸಂಪೂರ್ಣ ಸೇವಾ ಕಾರ್ಯ ಮಾಡಿದ



ಬಸವಂತ್ರಾಯಗೌಡ ಬಿರಾದಾರ ಅವರು ಉಪಸ್ಥಿತರಿದ್ದರು.

ಸುಮಾರು 10 ಸಾವಿರಕ್ಕೂ ಮೇಲ್ಪಟ್ಟು ಜನತೆ ಈ ಶುಭ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಹಾ ಪ್ರಸಾದ ಸೇವಿಸಿ ಪುನಿತರಾದರು.

ಕಾರ್ಯಕ್ರಮದ ಮೊದಲಿಗೆ ಶ್ರೀ ಖಾಸ್ಗತೇಶ್ವರ ಸಂಗೀತ ಮಹಾ ವಿದ್ಯಾಲಯದ ಹಳೆಯ ವಿದ್ಯಾರ್ಥಿಗಳಾದ ಗವಾಯಿ ಬಸವರಾಜ ಭಂಟನೂರ, ದೀಪಕಸಿಂಗ್ ಹಜೇರಿ, ಲಕ್ಷ್ಮಣಸಿಂಗ್ ವಿಜಾಪೂರ, ಯಮುನೇಶ ಯಾಳಗಿ, ಶಾರದಾ ವಿಜಾಪೂರ, ನಾಗರಾಜ ಹೂಗಾರ, ಗುಂಡಣ್ಣ ಹಂದಿಗನೂರ, ಅವರು ತಮ್ಮ ಸಂಗಡಿಗರೊಂದಿಗೆ ಸಂಗೀತ ಸೇವೆ ಸಲ್ಲಿಸಿದರು. ಶಿಕ್ಷಣ ಪ್ರೇಮಿ ಅಮರಯ್ಯ ಹಿರೇಮಠ ಸ್ವಾಗತಿಸಿ ನಿರೂಪಿಸಿ ವಂದಿಸಿದರು.

# ರಾಷ್ಟ್ರೀಯ ಗಣಿತ ದಿನಾಚರಣೆ




ಗದಗ : ಗದಗ ತಾಲ್ಲೂಕಿನ ಕಣವಿ ಸರ್ಕಾರಿ ಪ್ರೌಢ ಶಾಲೆಯಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಭಾರತೀಯ ವಿಜ್ಞಾನ ಸಂಸ್ಥೆ ಆವರಣ, ಬೆಂಗಳೂರು ಹಾಗೂ ರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನ ಮಂಡಳಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಭಾರತ ಸರ್ಕಾರ ಮತ್ತು ಜಿಲ್ಲಾ ಪಂಚಾಯತಿ ಗದಗ ಇವರ ಸಹಯೋಗದಲ್ಲಿ ಶ್ರೀನಿವಾಸ ರಾಮಾನುಜಮ್ ರವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಗಣಿತ ದಿನಾಚರಣೆ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಣವಿ ಸರ್ಕಾರಿ ಪ್ರೌಢ ಶಾಲೆ, ಮುಖ್ಯ ಶಿಕ್ಷಕರಾದ ಶಶಿಧರ ಬಡಿಗೇರ ಅವರು ವಹಿಸಿದ್ದರು.ನಿವೃತ್ತ ಗಣಿತ ಶಿಕ್ಷಕ ಎಂ.ಎಸ್ ಪೂಜಾರ್ ಉಪನ್ಯಾಸವನ್ನು ನೀಡಿದರು.

ರಾಷ್ಟ್ರೀಯ ಗಣಿತ ದಿನದ ಪ್ರಯುಕ್ತ ಮಕ್ಕಳ ಸಂತೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ವಿಶೇಷವಾಗಿ-ತ್ತು.

ಮುಖ್ಯ ಅಥಿತಿಗಳಾಗಿ ವಿಜ್ಞಾನ ವಿಷಯ ಪರಿವೀಕ್ಷಕರಾದ ಶ್ರೀಮತಿ ಬಂಡಿವಡ್ಡರ್, ಜಿಲ್ಲಾ ಪಂಚಾಯತಿ (ಎನ್. ಆರ್.ಡಿ.ಎಂ.ಎಸ್ ಶಾಖೆ) ಮಂಜುನಾಥ ಎಸ್ ತೋಟದ, ಶಿಕ್ಷಕ ವೃಂದ ಹಾಗೂ ಮಕ್ಕಳು ಭಾಗವಹಿಸಿದ್ದರು.

# ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

ಗದಗ : ಕರ್ನಾಟಕ ಲೋಕಸೇವಾ ಆಯೋಗವು 2023-24 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ ಗ್ರೂಪ್ ಎ ಮತ್ತು ಬಿ ವೃಂದದ ಒಟ್ಟು 384 ಹುದ್ದೆಗಳ ಪೂರ್ವಭಾವಿ ಪರೀಕ್ಷೆಗಳನ್ನು ಡಿಸೆಂಬರ್ 29 ರಂದು ನಡೆಸಲಿದೆ. ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 18 ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟ-ರ್ ಪರಿಮಿತಿಯೊಳಗೆ ಡಿಸೆಂಬರ್ 29 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 6 ಗಂಟೆಯವರಗೆ ಪ್ರತಿಬಂಧಕಾಜ್ಞೆ ಜಾ-ರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದು ಮಾಡಲು ಆದೇಶಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ನಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವ-ರಿಗೆ ಅವಕಾಶವಿದ್ದು ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಗುರುತು ಪತ್ತೆ ಹಚ್ಚಲು ಸಾಧ್ಯವಾಗದ ರೀತಿಯಲ್ಲಿ ವಸ್ತ್ರ ಧರಿಸಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದಲ್ಲಿ ಫ್ರಿಸ್ಕಿಂಗ್ ನಡೆಸುವ ಸಿಬ್ಬಂದಿಯೊಂದಿಗೆ ಮತ್ತು ಪರೀಕ್ರಾ ಕೊಠಡಿಯ ಸಂವೀಕ್ಷಕರೊಂದಿಗೆ ಸಹಕರಿಸಿ ತಪಾಸಣೆಗೊಳಗಾಗುವುದು ಕಡ್ಡಾಯವಾಗಿರುತ್ತದೆ.

ಪರೀಕ್ಷೆಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳು ಆಯೋಗವು ನಡೆಸುವ ಹ್ಯಾಂಡ್‌ಹೆಲ್ಡ್ ಮೆಟಲ್ ಡಿಟೆಕ್ಟರ್ ತಪಾಸಣೆಗೆ ಒಳಗಾಗುವುದು ಕಡ್ಡಾಯವಾಗಿರುತ್ತದೆ. ಮೆಟಲ್ ವಾಟರ್ ಬಾಟಲ್ಸ್ ಅಥವಾ ನಾನ್ ಟ್ರಾನ್ಸಪರಂಟ್ ವಾಟರ್‌ಬಾಟಲ್‌ಗಳನ್ನು ಪರೀಕ್ಷಾ ಕೊಠಡಿಯೊಳಗೆ ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. ಮೊಬೈಲ್/ಸೆಲ್ಯೂಲಾರ್ ಫೋನ್, ಟ್ಯಾಬ್ಲೆಟ್ ಪೆನ್ ಡ್ರೈವ್, ಬ್ಲೂ ಟೂತ್ ಡಿವೈಸ್, ಸ್ಮಾರ್ಟವಾಚ್, ಕ್ಯಾಲ್ಕುಲೇಟ-ರ್ ಮತ್ತು ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ ಉಪಕರಣಗಳು ಅಥ-'ವಾ ಲಾಗ್ ಟೇಬಲ್ಸ್ ಕೈಚೀಲ, ಪರ್ಸ್ ನೋಟುಗಳು,ಚಾರ್ಟ್, ಬಿಡಿ ಹಾಳೆಗಳು ಅಥವಾ ರೆಕಾರ್ಡಿಂಗ್ ವಸ್ತುಗಳನ್ನೂ ಸೇರಿದಂತೆ ಇನ್ನಿತರ ಯಾವುದೇ ರೀತಿಯ ಉಪಕರಣಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ. ಹೀಯರಿಂಗ್ ಏಡ್ ಉಪಕರಣ ಧರಿಸಿರುವ ಅಭ್ಯರ್ಥಿಗಳು ವೈದ್ಯಕೀಯ ದಾಖಲೆಗಳೊಂದಿಗೆ ಪರೀಕ್ಷೆ ಪ್ರಾರಂಭವಾಗುವ ಎರಡು ಗಂಟೆಗೆ ಮುಂಚಿತವಾಗಿ ಸಂಪೂರ್ಣ ತಪಾಸಣೆಗೆ ಒಳಪಡುವುದು ಕಡ್ಡಾಯವಾಗಿರುತ್ತದೆ.

ಕರ್ನಾಟಕ ಲೋಕಸೇವಾ ಆಯೋಗವು ಅಭ್ಯರ್ಥಿಗಳ ಪ್ರವೇಶಪತ್ರದಲ್ಲಿ ತಿಳಿಸಿರುವ ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳ ಕಡ್ಡಾಯವಾಗಿ ಪಾಲಿಸುವುದು. ಎಲ್ಲ ಪರೀಕ್ಷಾ ಸಿಬ್ಬಂದಿ/ಅಭ್ಯರ್ಥಿಗಳು ಮೊಬೈಲ್ ಪೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ಕರ್ನಾಟಕ ಲೋಕಸೇವಾ ಆಯೋಗವು ನಿಗದಿಪಡಿಸಿರುವ ಸೂಚನೆಗಳನ್ನು ಸಂಬಂಧಪಟ್ಟವರು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಪಾಲಿಸತಕ್ಕದ್ದು ಎಂದು ಜಿಲ್ಲಾ ದಂಡಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು

**ಚೂರು-ಪಾರು**

## ವಿವಿಧ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಆಹ್ವಾನ

ಕೊಪ್ಪಳ : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವಿವಿಧ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಆಕ್ಷೇಪಣೆಗಳಿಗೆ ಆಹ್ವಾನಿಸಲಾಗಿದೆ.

ಎನ್.ಹೆಚ್.ಎಂ ಹಾಗೂ ಪಿ.ಎಂ ಅಭಿಮ್ ಯೋಜನೆಯಡಿಯಲ್ಲಿ ಖಾಲಿ ಇರುವ ಎಂ & ಇ ವ್ಯವಸ್ಥಾಪಕರು, ಹೆಚ್.ಡಿ.ಯು/ಐ.ಸಿ.ಯು ಶುಶ್ರೂಷಣಾಧಿಕಾರಿಗಳು, ಎಸ್.ಎನ್.ಸಿ.ಯು ಎನ್.ಬಿ.ಎಸ್.ಯು ಶುಶ್ರೂಷಣಾಧಿಕಾರಿಗಳು ಹಾಗೂ ಜೂನಿಯರ್ ಹೆಲ್ತ್ ಅಸಿಸ್ಟಂಟ್ ಹುದ್ದೆಗಳ ಸಾಮಾನ್ಯ ಅರ್ಹತಾ ಪಟ್ಟಿ, ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ ತಿರಸ್ಕೃತ ಪಟ್ಟಿಗಳನ್ನು ಕಛೇರಿಯ ಸೂಚನಾ ಫಲಕಕ್ಕೆ ಹಾಗೂ ಕೊಪ್ಪಳ ಜಿಲ್ಲಾ ವೆಬ್‌ಸೈಟ್ www.koppal.nic.in ನಲ್ಲಿ ಪ್ರಚುರಪಡಿಸಿದ್ದು, ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಸಲ್ಲಿಸಲು ಡಿಸೆಂಬರ್ 31 ರವರೆಗೆ ಕಾಲಾವಕಾಶ ನೀಡಲಾಗಿದೆ. ನಿಗದಿಪಡಿಸಿದ ಕೊನೆಯ ದಿನಾಂಕದ ನಂತರದಲ್ಲಿ ಬಂದ ಆಕ್ಷೇಪಣೆಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಲಿಂಗರಾಜು ಟಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಕೌಶಲ್ಯಾಧಾರಿತ ತರಬೇತಿಗೆ ಅರ್ಜಿ ಆಹ್ವಾನ

ಕೊಪ್ಪಳ : ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯಿಂದ ಉಚಿತ ಕೌಶಲ್ಯಾಧಾರಿತ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 45 ವಯೋಮಾನದ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ, ಯುವತಿಯರಿಗಾಗಿ ಜನವರಿ 16 ರಿಂದ 10 ದಿನಗಳ ತರಕಾರಿ ಬೆಳೆಗಳ ನರ್ಸರಿ ತರಬೇತಿ ಮತ್ತು ಫೆಬ್ರವರಿ 03 ರಿಂದ 13 ದಿನಗಳ ವಾಣಿಜ್ಯ ತೋಟಗಾರಿಕೆ ಉಚಿತ ತರಬೇತಿಗಳು ಆರಂಭವಾಗಲಿದ್ದು, ತರಬೇತಿ ಅವಧಿಯಲ್ಲಿ ಊಟ ಹಾಗೂ ವಸತಿಯು ಉಚಿತವಾಗಿರುತ್ತದೆ.

ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳನ್ನು ನೋಂದಾಯಿಸಲು ಜನವರಿ 14 ಕೊನೆಯ ದಿನವಾಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು. ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿಂಗ್ ನಿಂದ ಸಾಲ ಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನೇತರ ಮಾಹಿತಿಯನ್ನು ಉಚಿತವಾಗಿ ನೀಡಲಾಗುವುದು.

ತರಬೇತಿಯಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ, ದೂ.ಸಂ : 9980510717 , 9483485489 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

## ಸಾರ್ವಜನಿಕರ ಗಮನಕ್ಕೆ

ಗದಗ : ಮುಳಗುಂದ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡುವ ವ್ಯಾಪಾರಿಗಳು ಕಡ್ಡಾಯವಾಗಿ ಪ್ರತ್ಯಾಕವಾಗಿ ಪರವಾನಿಗೆ ಪಡೆಯಲು ಪಟ್ಟಣ ಪಂಚಾಯತಿಯಿಂದ ಅರ್ಜಿ ನಮೂನೆಯನ್ನು ಪಡೆದು, ಅಗತ್ಯ ಮಾಹಿತಿಯೊಂದಿಗೆ ಡಿಸೆಂಬರ್ 31 ಒಳಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಶುಲ್ಕ ರೂ.500/- ಆಗಿದ್ದು, 1 ವರ್ಷ ಚಾಲ್ತಿಯಲ್ಲಿರುತ್ತದೆ. ಜನೇವರಿ 01 ಪರವಾನಿಗೆ ಪಡೆಯದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವ ತಂಬಾಕು ವ್ಯಾಪಾರಸ್ಥರ ಮೇಲೆ ಕಾನೂನು ಕ್ರಮವನ್ನು ಕೈಗೊಳ್ಳಲಾಗುವುದು ಎಂದು ಮುಳಗುಂದ ಪಟ್ಟಣ ಪಂಚಾಯತ ಮುಖ್ಯಾಧಿಕಾ-ರಿಗಳು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

# ಗ್ರಾಮೀಣ ಪ್ರದೇಶದ ದುಡಿಯುವ ಕೈಗಳಿಗೆ ಕೆಲಸ ಒದಗಿಸಿ : ಕರೀಂ ಅಸದಿ



ಕಾರವಾರ - ಜಿಲ್ಲಾ ಪಂಚಾಯತ್‌ನಿಂದ 2024-25ನೇ ಸಾಲಿಗೆ ಅನುಮೋದಿಸಲಾದ ಕಾಮಗಾರಿಗಳನ್ನು ತ್ವರಿತವಾಗಿ ಪ್ರಾರಂಭಿಸಿ ಗ್ರಾಮೀಣ ಪ್ರದೇಶದ ದುಡಿಯುವ ಕೈಗಳಿಗೆ ಕೆಲಸ ಒದಗಿಸುವ ಕಾರ್ಯವಾಗಬೇಕು ಎಂದು ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರು(ಡಿಆರ್‌ಡಿಎ) ಕರೀಂ ಅಸದಿ ಹೇಳಿದರು.

ಅವರು ಶನಿವಾರ ಮುಂಡಗೋಡ ತಾಲ್ಲೂಕು ಪಂಚಾಯತ ಸಭಾಂಗಣದಲ್ಲಿ ಜರುಗಿದ ಮಹಾತ್ಮ ಗಾಂಧಿ ನರೇಗಾ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಹಾತ್ಮ ಗಾಂಧಿ ನರೇಗಾದಡಿ ನಿಗದಿಪಡಿಸಿದ ಮಾನವ ದಿನಗಳ ಸೃಜನೆಯ ವಾರ್ಷಿಕ ಗುರಿ ಸಾಧನೆಗಾಗಿ ತಾಲ್ಲೂಕಿನ ಎಲ್ಲ ಗ್ರಾಮ ಪಂಚಾಯತಿಗಳು, ಕೃಷಿ, ಅರಣ್ಯ, ತೋಟಗಾರಿಕೆ ಸೇರಿದಂತೆ ಎಲ್ಲ ಅನುಷ್ಠಾನ ಇಲಾಖೆಗಳು ಅಗತ್ಯವಿರುವ ಪೂರ್ವ ಸಿದ್ಧತಾ ಕಾರ್ಯ ಯೋಜನೆ ರೂಪಿಸಿಕೊಂಡು ಕಾರ್ಯನಿರ್ವಹಿಸಬೇಕು ಎಂದರು.

ತಾಲ್ಲೂಕಿನಾದ್ಯಂತ ನರೇಗಾ ಹಾಗೂ ಶಿಕ್ಷಣ ಇಲಾಖೆಯ ಒಗ್ಗೂಡಿಸುವಿಕೆಯಡಿ ಕೈಗೊಳ್ಳುವ ಶಾಲಾ ಅಭಿವೃದ್ಧಿ ಹಾಗೂ ಅಂಗನವಾಡಿ ಕಾಮಗಾರಿಗಳನ್ನು ಪ್ರಾರಂಭಿಸಿ ಮೊದಲಿಗೇ ನರೇಗಾ ಅನುದಾನದ ಭಾಗವನ್ನು ಪೂರ್ಣಗೊಳಿಸಬೇಕು.

ತಾಲ್ಲೂಕಿನ ಎಲ್ಲ ಗ್ರಾಮ ಪಂಚಾಯತಿಗಳು ಸೇರಿದಂತೆ ವಾರ್ಷಿಕವಾಗಿ ಒಟ್ಟು 2,60,000 ಮಾನವ ದಿನಗಳ ಸೃಜನೆಯ ಗುರಿ ನಿಗದಿಪಡಿಸಿದ್ದು, ಈವರೆಗೆ ನಿಗದಿತ ಗುರಿ ಪೈಕಿ 1,90,877 ಮಾನವ ದಿನಗಳ ಸೃಜನೆ ಮಾಡುವ ಮೂಲಕ ಶೇ. 73.41 ರಷ್ಟು ಪ್ರಗತಿ ಸಾಧಿಸಲಾಗಿದೆ. ಆದರೂ ಸಹ ಇನ್ನೂ 69,123 ಮಾನವ ದಿನಗಳನ್ನ ಸೃಜಿಸುವುದು ಬಾಕಿಯಿದ್ದು, ಆರ್ಥಿಕ ವರ್ಷ ಮುಕ್ತಾಯಕ್ಕೆ ಉಳಿದಿರುವ ಮುಂದಿನ 3 ತಿಂಗಳಲ್ಲಿ ಬಾಕಿ ಮಾನವ ದಿನಗಳನ್ನ ಸೃಜಿಸುವ ಮೂಲಕ ಶೇ. 100ರಷ್ಟು ಪ್ರಗತಿ ಸಾಧನೆಗೆ ಗ್ರಾಮ ಪಂಚಾಯತಿಗಳು, ಅನುಷ್ಠಾನ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ನರೇಗಾದಡಿ ಕಾರ್ಯನಿರ್ವಹಿಸುವ ಸಿಬ್ಬಂದಿ ಪರಸ್ಪರ ಒಗ್ಗೂಡಿಕೊಂಡು ಶ್ರಮಿಸಬೇಕಿದೆ. ಜೊತೆಗೆ 2025-26ನೇ ಸಾಲಿನ ಕ್ರಿಯಾ ಯೋಜನೆ ತಯಾರಿಕೆಗಾಗಿ ಆನ್‌ಲೈನ್‌ನ ಪಿಡಿಒ ಲಾಗಿನ್‌ನಲ್ಲಿ ಹೆಚ್ಚಿನ ಸಂಖ್ಯೆಯ ಸಾರ್ವಜನಿಕ ಹಾಗೂ ವೈಯಕ್ತಿಕ ಕಾಮಗಾರಿ ಸೇರ್ಪಡೆ ಮಾಡಿಸಬೇಕು. ಆನ್‌ಲೈನ್‌ನ ಕ್ರಿಯಾ ಯೋಜನೆಯಲ್ಲಿ ಸೇರಿಸಲಾದ ಕಾಮಗಾ-ರಿಗಳ ಫ್ರೀಮೇಜರ್‌ಮೆಂಟ್ ಪ್ರಕ್ರಿಯೆಯನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು ಎಂದು ಸಂಬಂಧಿಸಿದ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಿಗೆ, ತಾಂತ್ರಿಕ ಸಂಯೋಜಕರು, ಸಹಾಯಕರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಟಿ.ವೈ. ದಾಸನಕೊಪ್ಪ, ನರೇಗಾ ಸಹಾಯಕ ನಿರ್ದೇಶಕ ಸೋಮಲಿಂಗಪ್ಪ ಛಬ್ಬಿ, ಪಿಆರ್‌ಇಡಿ ಎಇಇ ಪ್ರದೀಪ್ ಭಟ್ಟ, ಆರ್‌ಡಬ್ಲ್ಯುಎಸ್‌ನ ಎಇಇ ರಾಜೇಶ್ವರಿ ಕದಂ, ತಾಲೂಕು ಮಟ್ಟದ ವಿವಿದ ಇಲಾಖೆಯ ಅಧಿಕಾರಿಗಳು ಮತ್ತಿತರು ಇದ್ದರು.

# ವಿಶ್ವ ಮಾನವ ದಿನಾಚರಣೆ - ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕರಣಾ ದಿನಾಚರಣೆಯ ಪೂರ್ವಭಾವಿ ಸಭೆ



ಕಾರವಾರ - ವಿಶ್ವ ಮಾನವ ದಿನಾಚರಣೆ ಹಾಗೂ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕರಣಾ ದಿನಾಚರಣೆಯನ್ನು ವಿಜೃಂಭಣೆಯಿಂದ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ದತೆ ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಸಾಜಿದ್ ಅಹ್ಮದ್ ಮುಲ್ಲಾ ಹೇಳಿದರು.

ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ವಿಶ್ವ ಮಾನವ ದಿನಾಚರಣೆ ಹಾಗೂ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕರಣಾ ದಿನಾಚರಣೆಯ ಪೂರ್ವ ಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿ ವರ್ಷದಂತೆ ಈ ವರ್ಷ ಕೂಡ ಡಿ.29 ರಂದು ವಿಶ್ವ ಮಾನವ ದಿನಾಚರಣೆ ಹಾಗೂ ಜನವರಿ 1 ರಂದು ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕರಣಾ ದಿನಾಚರಣೆಯನ್ನು ಜಿಲ್ಲಾಧಿಕಾ-ರಿಗಳ ಕಚೇರಿಯ ಸಭಾಂಗಣದಲ್ಲಿ ಬೆಳಗ್ಗೆ 10.30 ಗಂಟೆಗೆ ಆಚ-ರಿಸಲು ನಿರ್ಧರಿಸಲಾಗಿದ್ದು, ಈ ಎರಡು ಕಾರ್ಯಕ್ರಮಗಳನ್ನು ವಿಜೃಂಭಣೆಯಿಂದ ಆಚರಿಸಲು ಎಲ್ಲ ಅಧಿಕಾರಿಗಳು ಸಕಲಸಿದ್ದತೆ ಮಾಡಿಕೊಂಡು, ಅಚ್ಚುಕಟ್ಟಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಸೂಚನೆ ನೀಡಿದರು.

ವಿಶ್ವದಲ್ಲಿ ವಿಖ್ಯಾತಿ ಪಡೆದ ರಾಷ್ಟ್ರಕವಿ ಕುವೆಂಪು ಹಾಗೂ ಅಮರ ಶಿಲ್ಪಿ ಜಕಣಾಚಾರಿ ಅವರ ಕುರಿತು ಸಾಹಿತಿಗಳಿಂದ ಉಪನ್ಯಾಸವನ್ನು ಆಯೋಜಿಸವಂತೆ ಸೂಚಿಸಿದ ಅವರು, ಅಮರ ಶಿಲ್ಪಿ ಜಕಣಾಚಾರಿ ದಿನಾಚರಣೆಯನ್ನು ಆಚ-ರಿಸುವ ಮೂಲಕ ಹೊಸ ವರ್ಷವನ್ನು ಪ್ರಾರಂಭಿಸೋಣ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಮಂಗಲಾ ಎಂ ನಾಯ್ಕ ಅವರು ಕಾರ್ಯಕ್ರಮದ ರೂಪ ರೇಷಗಳ ಬಗ್ಗೆ ಮಾಹಿತಿ ನೀಡಿದರು.

ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಶಿವಾನಂದ ಬಿ ನಾಯಕ, ವಿಶ್ವ ಕರ್ಮ ಮಹಾ ಒಕ್ಕೂಟದ ಜಿಲ್ಲಾಧ್ಯಕ್ಷ ರಾಘವೇಂದ್ರ ಆಚಾರ್ಯ, ವಿಶ್ವ ಕರ್ಮ ಸೇವಾ ಸಮಾಜ ಸಂಘದ ಅಧ್ಯಕ್ಷ ಗಣೇಶ್ ಆಚಾರ್ಯ, ಕಲಾವಿದ ಸುರೇಶ್ ನಾಯ್ಕ, ಧಾರ್ಮಿಕ ದತ್ತಿ ತಹಶೀಲ್ದಾರರು, ಸಮಾಜದ ಮುಖಂಡರು ಮತ್ತಿತರರು ಇದ್ದರು.

## ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆ; ಜ.೨ ರಂದು ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿ ಪರಿಶೀಲನೆ

ಕಾರವಾರ - ಉತ್ತರ ಕನ್ನಡ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ 2 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ಮುಖಾಂತರ ಪರೀಕ್ಷೆಯನ್ನು ನೆಡೆಸಲಾಗಿದ್ದು, ಸದರಿ ನೇಮಕಾತಿಗೆ ಸಂಬಂಧಿಸಿದಂತೆ ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಗಾಗಿ 1:3 ಅನುಪಾತದಲ್ಲಿ ಅಭ್ಯರ್ಥಿಗಳ ಪಟ್ಟಿಯನ್ನು ಡಿ.20 ರಂದು ಉತ್ತರ ಕನ್ನಡ ಜಿಲ್ಲಾ ವೆಬ್‌ಸೈಟ್: https://uttarakannada.nic.in/ ನಲ್ಲಿ ಪ್ರಕಟಿಸಲಾಗಿದೆ.

ಆಯ್ಕೆಯಾಗಿರುವ ಅರ್ಹ ಅಭ್ಯರ್ಥಿಗಳು ಮೂಲ ದಾಖಲಾತಿಗಳ ಪರಿಶೀಲನೆಯನ್ನು ಜನವರಿ 2 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಾಜರಾಗಲು ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಉತ್ತರ ಕನ್ನಡ ಜಿಲ್ಲಾಧಿಕಾರಿಯವರ ಕಚೇರಿಯ ದೂರವಾಣಿ ಸಂಖ್ಯೆ:08382-229857, 222072 ನ್ನು ಸಂಪರ್ಕಿಸುವಂತೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರಿಂದ ಬೆಳೆ ವಿಮೆಗೆ ಅರ್ಜಿ ಆಹ್ವಾನ

ಕಾರವಾರ - ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಹಿಂಗಾರು ಮತ್ತು ಬೇಸಿಗೆ ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಮಂತ್ರಿ ಫಸಲ್ ಬೀಮಾ(ವಿಮಾ) ಯೋಜನೆಯಡಿಯಲ್ಲಿ ನೀರಾವರಿ ಭತ್ತ, ಮಳೆಯಾಶ್ರಿತ ಹೆಸರು, ಈರುಳ್ಳಿ ಮತ್ತು ಶೇಂಗಾ ಬೆಳೆಗಳನ್ನು ರೈತರು ವಿಮೆಗೆ ಒಳಪಡಿಸಬಹುದು.

ಹಿಂಗಾರು ಹಂಗಾಮಿನ ಶೇಂಗಾ ಬೆಳೆಗೆ ಅಂಕೋಲಾ ತಾಲೂಕಿನಲ್ಲಿ ಬೇಲೆಕೆರೆ, ಬಳಲೆ, ಬಾಸಗೋಡ ಹೋಬಳಿ, ಭಟ್ಕಳ ತಾಲೂಕಿನ ಮಾವಳ್ಳಿ ಹೋಬಳಿ ಹಾಗೂ ಕುಮಟಾ ತಾಲೂಕಿನ ಗೋಕರ್ಣ ಹೋಬಳಿಯ ವ್ಯಾಪ್ತಿಗೆ ಮತ್ತು ಭತ್ತ ದ ಬೆಳೆಗೆ ಹೊನ್ನಾವರ ತಾಲೂಕಿನ ಹೊನ್ನಾವರ ಹೋಬಳಿ ಹಾಗೂ ಕುಮಟಾ ತಾಲೂಕಿನ ಕೂಜಳ್ಳಿ ಹೋಬಳಿಯ ವ್ಯಾಪ್ತಿಗೆ ಒಳಪಟ್ಟಿದೆ. ಹೆಸರು ಹಾಗೂ ಹುರುಳಿ ಬೆಳೆಗಳಿಗೆ ಹಳಿಯಾಳ ತಾಲೂಕಿನ ಮುರ್ಕವಾಡ, ಹಳಿಯಾಳ ಹೋಬಳಿ ಹಾಗೂ ಮುಂಡಗೋಡ ತಾಲೂಕಿನ ಮುಂಡಗೋಡ ಹೋಬಳಿ ವ್ಯಾಪ್ತಿಗೆ ಒಳಪಟ್ಟಿವೆ. ಹಿಂಗಾರು ಹಂಗಾಮಿನ ವಿಮಾ ಕಂತನ್ನು ಪಾವತಿಸಲು ಡಿ.31 ಕೊನೆಯ ದಿನವಾಗಿದೆ. ಬೇಸಿಗೆ ಹಂಗಾಮಿನ ಭತ್ತದ ಬೆಳೆಗೆ ಹೊನ್ನಾವರ ತಾಲೂಕಿನ ಕುದ್ರಿಗಿ ಗ್ರಾಮ ಪಂಚಾಯತ ಹಾಗೂ ಮುಂಡಗೋಡ ತಾಲೂಕಿನ ಹುನಗುಂದ, ಇಂದೂರು ಮತ್ತು ಚಿಗಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಒಳಪಟ್ಟಿವೆ. ಬೇಸಿಗೆ ಹಂಗಾಮಿನ ವಿಮಾ ಕಂತು ಪಾವತಿಸಲು 28 ಫೆಬ್ರವರಿ 2025 ಕೊನೆಯ ದಿನವಾಗಿದೆ.

ರೈತರು ಹೆಚ್ಚಿನ ಮಾಹಿತಿಗಾಗಿ ವಿಮ ಕಂಪನಿ (AIC LTd/ ಶ್ರೀನಿವಾಸ ಟಿ. ದೂ:6366684606, ಬ್ಯಾಂಕುಗಳು, ವ್ಯವಸಾಯ ಸೇವಾ ಸಹಕಾರಿ ಬ್ಯಾಂಕ್ ಹಾಗೂ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಕೌಶಲ್ಯಾಧಾರಿತ ತರಬೇತಿಗೆ ಅರ್ಜಿ ಆಹ್ವಾನ

ಕಾರವಾರ - ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ತರಬೇತಿ ಸಂಸ್ಥೆಯಲ್ಲಿ 18 ರಿಂದ 45 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗ ಯುವಕ ಯುವತಿಯರಿಗಾಗಿ ಜನವರಿ 16 ರಿಂದ 10 ದಿನಗಳ ತರಕಾರಿ ಬೆಳೆಗಳ ನರ್ಸರಿ ತರಬೇತಿ ಮತ್ತು ಫೆಬ್ರವರಿ 3 ರಿಂದ 13 ದಿನಗಳ ವಾಣಿಜ್ಯ ತೋಟಗಾರಿಕೆ ಉಚಿತ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸವನ್ನು ನೋಂದಾಯಿಸಿಕೊಳ್ಳಲು ಜನವರಿ 14 ಕೊನೆಯ ದಿನವಾಗಿದೆ. ತರಬೇತಿ ಅವಧಿಯಲ್ಲಿ ಊಟ ವಸತಿ ಸಂಪೂರ್ಣ ಉಚಿತವಾಗಿರುತ್ತದೆ. ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ-'ತೆ ನೀಡಲಾಗುವುದು. ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ, ಬ್ಯಾಂಕಿನಿಂದ ಸಾಲ ಪಡೆದು ಸ್ವಉದ್ಯೋಗ ಪ್ರಾಂಭಿಸಲು ಬೇಕಾದ ಜ್ಞಾನ, ಸರ್ಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನಿತರ ಮಾಹಿತಿಗಳನ್ನು ಉಚಿತವಾಗಿ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9980510717, 9483485489 ನ್ನು ಸಂಪರ್ಕಿಸಬಹುದು ಎಂದು ಹಳಿಯಾಳ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುರಿಗಾರರಿಗೆ ಸರ್ಕಾರದ ಯೋಜನೆಗಳ ಸೌಲಭ್ಯ ತಲುಪಿಸಿ: ಸಿಇಓ ರಾಹುಲ್ ರತ್ನಂ ಪಾಂಡೇಯ

ಕೊಪ್ಪಳ : ಅವರು ಸೋಮವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳೊಂದಿಗೆ ಕುರಿಗಾರರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದರು.

ಕುರಿ-ಮೇಕೆ ಸಾಕಾಣಿಕೆಗೆ ಮತ್ತು ಕುರಿಗಾರರಿಗೆ ಸರ್ಕಾರವು ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ, ಸಹಾಯಧನ ಸೌಲಭ್ಯ, ಅಗತ್ಯ ಪರಿಕರಗಳ ವಿತರಣೆ ಮತ್ತು ಜಾನುವಾರುಗಳಿಗೆ ಲಸಿಕೆ ಹೀಗೆ ವಿವಿಧ ಸೌಲಭ್ಯಗಳನ್ನು ನೀಡುತ್ತಿದೆ. ಈ ಎಲ್ಲಾ ಕಾರ್ಯಕ್ರಮಗಳ ಬಗ್ಗೆ ಜಿಲ್ಲೆಯ ಕುರಿಗಾರರಿಗೆ ಜಾಗೃತಿ ಮೂಡಿಸಬೇಕು. ಸರ್ಕಾರದ ಯೋಜನೆಗಳಿಗೆ ಅರ್ಜಿ ಸಲ್ಲಿಸುವ ಪ್ರಮಾಣ ಶೇ100 ರಷ್ಟಾಗಬೇಕು ಮತ್ತು ಸೌಲಭ್ಯ ವಿತರಣೆಯಲ್ಲೂ ಜಿಲ್ಲೆಯ ಪ್ರಗತಿ ಹೆಚ್ಚಾಗಬೇಕು. ಬಹಳಷ್ಟು ಕುರಿಗಾರರಿಗೆ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಹೇಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂಬುವುದು ತಿಳಿದಿರುವುದಿಲ್ಲ ಎಂದರು.

ಸಂಚಾರಿ ಮತ್ತು ವಲಸೆ ಕುರಿಗಾರರಿಗೆ ಗುರುತಿನ ಚೀಟಿ ನೀಡುವ ಸರ್ಕಾರಿ ಆದ-'ಶದಂತೆ ಅಗತ್ಯ ಕ್ರಮ ಜರುಗಿಸಿ. ಅನುಗ್ರಹ ಯೋಜನೆಯಡಿ ಸತ್ತ ಕುರಿ-ಮೇಕೆಗಳಿಗೆ ಪರಿಹಾರ ವಿತರಣೆಯಲ್ಲಿ ಬಾಕಿ ಇರುವ ಪ್ರಕರಣಗಳಿಗೆ ಅನುದಾನಕ್ಕಾಗಿ ಜಿಲ್ಲೆಯ ಕುರಿಗಾರರ ಬೇಡಿಕೆಯೊಂದಿಗೆ ಕೇಂದ್ರ ಕಚೇರಿಗೆ ಪತ್ರ ಬರೆದು ಪರಿಹಾರ ವಿತ-ರಿಸುವಂತೆ ಕ್ರಮ ಕೈಗೊಳ್ಳಬೇಕು. ಕುರಿಗಳನ್ನು ಮಳೆಯಿಂದ ಸಂರಕ್ಷಣೆಗೆ ತಾಡಪಾಲ ಶೆಡ್, ವಲಸೆ ಕುರಿಗಾರರ ಸಂರಕ್ಷಣೆಗೆ ತಾತ್ಕಾಲಿಕ ಶೆಡ್ ನಿರ್ಮಾಣ ಮತ್ತು ಕಂಬಳಿಗಳ ವಿತರಣೆ, ಸತ್ತ ಕುರಿ ಮೇಕೆಗಳಿಗೆ ಪರಿಹಾರ ಹಾಗೂ ಕುರಿಗಾರರ ಇತರೆ ಬೇಡಿಕೆಗಳ ಪಟ್ಟಿ ತಯಾರಿಸಿ ಯೋಜನೆಯ ಅಳವಡಿಕೆ ಮತ್ತು ಅನುದಾನಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ಪಶು ಇಲಾಖೆ ಅಧಿಕಾ-ರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಕುರಿಗಾರರ ಮಕ್ಕಳು ಯಾವುದೇ ಕಾರಣಕ್ಕೂ ಶಿಕ್ಷಣದಿಂದ ವಂಚಿತರಾಗಬಾರದು. ಈ ಹಿಲ್ಲೆಯಲ್ಲಿ ಪಶು ವೈದ್ಯಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಕುರಿಗಾರರ ಸಂಘಗಳ ಸಹಕಾರದೊಂದಿಗೆ ಕುರಿಗಾರರ ಮಕ್ಕಳ ಶಿಕ್ಷಣದ ಸ್ಥಿತಿಗತಿಗಳ ಬಗ್ಗೆ ವರದಿ ಸಲ್ಲಿಸಬೇಕು.



ಜಿಲ್ಲೆಯಲ್ಲಿರುವ ಪಶು ವೈದ್ಯರ ಕೊರತೆಯನ್ನು ನೀಗಿಸಲು ಅತಿಥಿ ಶಿಕ್ಷಕರ ರೀತಿಯಲ್ಲಿ ಜಿಲ್ಲೆಯ ಪಶು ವೈದ್ಯಾಧಿಕಾರಿಗಳನ್ನು ನೇಮಿಸಿಕೊಳ್ಳಬೇಕು. ಇದಕ್ಕಾಗಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನ ಸದ್ಬಳಕೆ ಮಾಡಿಕೊಳ್ಳಲು ಅವಕಾಶವಿದ್ದು, ಪಶು ವೈದ್ಯಾಧಿಕಾರಿಗಳ ಸೇವೆಯನ್ನು ತ್ವರಿತವಾಗಿ ಪಡೆದುಕೊಳ್ಳುವಂತೆ ಸೂಚಿಸಿದರು.

ಅಳವಂಡಿ ಹೋಬಳಿಯ ಹಲಗೇರಿ ಗ್ರಾಮದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ, ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರಿ ಸಂಘದ ಅಧ್ಯಕ್ಷರಾದ ಗುಡದಪ್ಪ ಬಸಪ್ಪ ಬನ್ನಪ್ಪನವರ ಮಾತನಾಡಿ, ಅಮೃತ ಯೋಜನೆಯಡಿ ಅರ್ಜಿ ಸಲ್ಲಿಸಿ, ಒಂದು ವರ್ಷ ಕಳೆದರೂ ಸಹ ಫಲಾನುಭವಿಗಳಿಗೆ ಸೌಲಭ್ಯಗಳು ಇನ್ನೂ ಸಿಗುತ್ತಿಲ್ಲ. ಕೂಡಲೇ ಯೋಜನೆಯ ಲಾಭವನ್ನು ಅರ್ಹ ಕುರಿಗಾರ-ರಿಗೆ ತಲುಪಿಸುವ ಕೆಲಸವನ್ನು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಮಡಬೇಕು. ನಮ್ಮ ಕುರಿಗಾಯಿಗಳಿಗೆ ಸರ್ಕಾರದ ಯೋಜನೆಗಳ ಲಾಭ ಸಮರ್ಪಕವಾಗಿ ತಲುಪಿಸಲು ಇನ್ನೂ ಹೆಚ್ಚಿನ ಕೆಲಸ ಮಾಡಬೇಕಿದೆ ಎಂದರು.

ಗಂಗಾವತಿಯ ಹಿಮಾಲಯ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರಿ ಸಂಘದ ಅಧ್ಯಕ್ಷರಾದ ಕೆ.ಬಿ ಜೂಡಿ ಮಾತನಾಡಿ, ಮಾರುಕಟ್ಟೆಯಲ್ಲಿ ಕುರಿಗಳನ್ನು ಮಾರಾಟ ಮಾಡಲು ವಾರದಲ್ಲಿ ಒಮ್ಮೆ ಪ್ರತಿ ಶುಕ್ರವಾರದಂದು ಕುಕನಪಳ್ಳಿಯಲ್ಲಿ ಸಂತೆ ನಡೆಯುತ್ತದೆ.

ಇದರೆ ಜೊತೆಗೆ ಡಿಜಿಟಲ್ ಮಾರುಕಟ್ಟೆ ಅತ್ಯವಶ್ಯಕವಾಗಿದ್ದು, ಗಂಗಾವತಿ ಮಾರುಕಟ್ಟೆ ಸಮಿತಿಯಲ್ಲಿ ಡಿಜಿಟಲ್ ತೂಕದ ಯಂತ್ರವನ್ನು ಅಳವಡಿಸಬೇಕು ಎಂದರು.

ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ ಪಿ.ಎಂ ಮಲ್ಲಯ್ಯ ಅವರು ಮಾತನಾಡಿ, ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಯಡಿ ಸಾಲ ಪಡೆಯಲು ಅರ್ಜಿಗಳನ್ನು ಸ್ವೀಕ-ರಿಸಲಾಗುತ್ತಿದ್ದು, 2025ರ ಮಾರ್ಚ್ 31ರವರೆಗೆ ಆವಕಾಶವಿರುತ್ತದೆ. ಆಸಕ್ತ ಕುರಿಗಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಕೊಪ್ಪಳ ಜಿಲ್ಲಾ ವ್ಯವಸ್ಥಾಪಕ ಡಾ ಆನಂದ ದೇವರನಾವದಗಿ ಮಾತನಾಡಿ, ಕುರಿ ಹಾಗೂ ಮೇಕೆಗಳಿಗೆ ಔಷಧಿಗಳ ವಿತರಣೆಗಾಗಿ ಕೇಂದ್ರ ಕಚೇರಿಗೆ ಈಗಾಗಲೇ ಬೇಡಿಕೆ ಸಲ್ಲಿಸಲಾಗಿದ್ದು, ಸರಬರಾಜು ಆದ ತಕ್ಷಣ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಕೊಪ್ಪಳದ ಜೈ ಭೀಮ್ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರಿ ಸಂಘದ ಅಧ್ಯಕ್ಷರಾದ ಮಹಾಲಕ್ಷ್ಮಿ ಲಕ್ಷ್ಮಣ ಕಂದಾರಿ ಮಾತನಾಡಿದರು. ಸಭೆಯಲ್ಲಿ ಮುಖ್ಯ ಪಶು ವೈದ್ಯಾಧಿಕಾ-ರಿಗಳಾದ ಡಾ ವಿನೋದ ಕುಮಾರ ದಿವಟರ, ಡಾ ಶಿವರಾಜ ಎಂ ಶೆಟ್ಟರ, ಡಾ ಚನ್ನಬಸಪ್ಪ ಹಳ್ಳದ, ಡಾ. ಪ್ರಕಾಶ ಚೂರಿ, ಡಾ ಜಾಕೀರ ಹುಸೇನ್, ಕುರಿಗಾರರಾದ ಮುಕ್ಕುಂದಪ್ಪ ಅಳವಂಡಿ, ಮಹಾಂತಪ್ಪ ಹನವಾಳ ಸೇ-ರಿದಂತೆ ಜಿಲ್ಲೆಯ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರು, ಸದಸ್ಯರು ಹಾಗೂ ಪದಾಧಿಕಾ-ರಿಗಳು ಉಪಸ್ಥಿತರಿದ್ದರು.

# ಕ್ರಿಸ್‌ಮಸ್ ಧಾರ್ಮಿಕ ಆಚರಣೆಗಳ ವೈಶಿಷ್ಟ್ಯವೇನು?



ಕ್ರಿಸ್‌ಮಸ್‌ಗೆ ಸಂಬಧಪಟ್ಟಆಚರಣೆಗಳು ಡಿಸೆಂಬರ್ ಆರಂಭದಲ್ಲಿ ಅಡ್ವೆಂಟ್‌ನಿಂದ ಶುರುವಾಗುತ್ತವೆ. ಕ್ರಿಸ್‌ಮಸ್ ಈವ್ ಮತ್ತು ಕ್ರಿಸ್‌ಮಸ್ ದಿನಗಳಲ್ಲಿ ವಿಶೇಷ ಪೂಜೆ ಪುನಸ್ಕಾರಗಳು ಚರ್ಚ್‌ಗ್ಗಳಲ್ಲಿ ನಡೆಯುತ್ತವೆ. ಕ್ರಿಸ್‌ಮಸ್ ನಂತರ ಹನ್ನೆರಡನೇ ದಿನದಂದು 'ಎಫಿಫನಿ' ಅಚರಣೆಗಳ ನಂತರ ಹಬ್ಬ ವಿಧ್ಯುಕ್ತವಾಗಿ ಮುಗಿಯುತ್ತದೆ.

ಬೆಂಗಳೂರು (ಡಿ. 25): ಕ್ರಿಸ್‌ಮಸ್ ಇಡೀ ಜಗತ್ತಿಗೇ ಒಂದು ಸಂಭ್ರಮದ ಹಬ್ಬ. ಅಲಂಕಾರಗಳೇ ಈ ಹಬ್ಬಕ್ಕೆ ಮೆರುಗು. ಕ್ರಿಸ್‌ಮಸ್ ಎಂದರೆ ಕ್ರಿಸ್ತಜಯಂತಿ ಅಥವಾ ಯೇಸುಕ್ರಿಸ್ತನು ಹುಟ್ಟಿದ ಸಂಭ್ರಮದ ದಿನ. ಕ್ರೈಸ್ತ ಸುವಾರ್ತೆಯ ಪ್ರಕಾರ ಯೇಸುಕ್ರಿಸ್ತನು ಮೇರಿ ಮತ್ತು ಜೋಸೆಫರ ಮಗವಾಗಿ ಡಿ.25ರಂದು ಇಸ್ರೇಲ್‌ನಲ್ಲಿರುವ ಬೆತ್ಲಹೆಮ್ ಎಂಬ ಊರಿನಲ್ಲಿ ಹುಟ್ಟಿದರು.

ಆಗ ಮೇರಿ ಮತ್ತು ಜೋಸೆಫ್ ದಂಪತಿ ರೋಮನ್ ಜನಗಣತಿಯಲ್ಲಿ ನೋಂದಾಯಿಸಲು ಅಲ್ಲಿಗೆ ಹೋಗಿದ್ದರು. ಯಹೂದಿ ಧರ್ಮದ ಪ್ರಕಾರ ಪ್ರವಾದನೆಗಳನ್ನು ನೆರವೇರಿಸಲು ಡೇವಿಡ್‌ನ ವಂಶದಲ್ಲಿ ದೇವರ ದೂತ ಬೇರಾರೂ ಅಲ್ಲ ಸ್ವತಃ ಯೇಸುಕ್ರಿಸ್ತನೇ ಎಂದು ಕ್ರೈಸ್ತರ ನಂಬಿಕೆಯಾಗಿದೆ. ಗ್ರೀಕ್ ಲಿಪಿಯಲ್ಲಿ ಕ್ರಿಸ್ತನ ಮೊದಲಕ್ಷರವು ಇಂಗ್ಲಿಷ್ ಎಕ್ಸ್‌ನಂತೆ ಇರುವುದರಿಂದ ಎಕ್ಸ್‌ಮಸ್ ಎಂದು ಕೂಡ ಕರೆಯುತ್ತಾರೆ.

**ಎಕ್ಸ್‌ಮಸ್ ಎನ್ನುವುದೇಕೆ?**

ಜೀಸಸ್‌ನ ನಿಜವಾದ ಹುಟ್ಟಿದ ದಿನಾಂಕ ಹಾಗೂ ಇತಿಹಾಸದ ಬಗ್ಗೆ ಹಲವು ವಾದಗಳಿವೆ. ಕ್ರಿಸ್ತನ ಹುಟ್ಟು ಹಬ್ಬವನ್ನು ನಿರ್ಧ–ರಿಸುವ ಯತ್ನ ಕ್ರಿಸ್ತಶಕ 2ನೇ ಶತಮಾನದಿಂದ ಆರಂಭವಾಯಿತು. ಕ್ರೈಸ್ತ ಚರ್ಚ್‌ಗ್ಗಳೂ ಕ್ರಿಸ್ತ ಹುಟ್ಟಿದ ದಿನಾಂಕ ಡಿಸೆಂಬರ್ 25 ಎಂದು ಒಪ್ಪಿಕೊಂಡವು. ಸಾಮಾನ್ಯವಾಗಿ ಎಲ್ಲ ಕ್ರೈಸ್ತ ದೇಶಗಳಲ್ಲೂ ಕ್ರಿಸ್‌ಮಸ್ ಹಬ್ಬವನ್ನು ಕ್ರಿಸ್‌ಮಸ್ ದಿನ ಮಾತ್ರವಲ್ಲದೆ ಅದರ ಅಚೀಚೆ ಕೆಲವು ದಿನಗಳನ್ನೂ ಸೇರಿಸಿಕೊಂಡು ಅಚ–ರಿಸಲಾಗುತ್ತದೆ. ಕ್ರಿಸ್‌ಮಸ್ ಹಬ್ಬದ ಹಿಂದಿನ ದಿನವನ್ನು ಕ್ರಿಸ್‌ಮಸ್ ಈವ್ ಎಂಬ ಹೆಸರಿನಲ್ಲಿ ಆಚರಿಸಲಾಗುತ್ತದೆ. ಕ್ರಿಸ್‌ಮಸ್ ನಂತರದ ಹನ್ನೆರಡನೇ ದಿನವನ್ನು 'ಎಪಿಫನ್' ಎಂಬ ಹೆಸರಿನಿಂದ ಅಚರಿಸಲಾಗುತ್ತದೆ. ಕ್ರಿಸ್‌ಮಸ್ ಹೊಸ ವರ್ಷದ ಸಮೀಪ ಬರುವುದ–ರಿಂದ ಕ್ರಿಸ್‌ಮಸ್ ಮೊದಲುಗೊಂಡು ಹೊಸ ವರ್ಷದವರೆಗೊ ಹಲವು ದೇಶಗಳಲ್ಲಿ ರಜಾ ಇರುವುದು.

**ಜಾತ್ಯತೀತ ಆಚರಣೆಗಳು**

ಹಲವು ದೇಶಗಳಲ್ಲಿ ಅನೇಕ ಜಾತ್ಯತೀತ ಸಂಪ್ರದಾಯಗಳು ಹಾಗೂ ಅಚರಣೆಗಳು ಕ್ರಿಸ್‌ಮಸ್‌ನೊಂದಿಗೆ ಸಂಬಂಧ ಹೊಂದಿವೆ. ಕ್ರಿಸ್‌ಮಸ್ ಅಚರಣೆಯಲ್ಲಿ ಕೆಲವು ರೂಢಿಗಳಿವೆ. ಕ್ರಿಸ್‌ಮಸ್ ಸಂಭ್ರಮದ ಸಮಯದಲ್ಲಿ ಮನೆಯಲ್ಲಿ ಪುಟ್ಟದಾದ ಕೊಟ್ಟಿಗೆ ಕಟ್ಟಿಕ್ರಿಸ್ತ ಜನನದ ಗೊಂಬೆಗಳನ್ನಿಡುವುದು, ಕ್ರಿಸ್‌ಮಸ್ ಪ್ರತಿನಿಧಿಸುವ ಕ್ರಿಸ್‌ಮಸ್ ಗಿಡವನ್ನು ಇಟ್ಟು ಅಲಂಕರಿಸುವುದು, ಮಿಸಲ್ಟೋಮೊದಲಾದ ಮರಗಳ ಎಲೆಗಳ ತೋರಣ ಕಟ್ಟುವುದು, ಕ್ರಿಸ್‌ಮಸ್‌ಗೆಂದೇ ತಯಾರಿಸಿದ ವಿಶಿಷ್ಟತಿಂಡಿಗಳನ್ನು ಹಾಗೂ ಉಡುಗೊರೆಗಳನ್ನು ಹಂಚುವುದು ಸಾಮಾನ್ಯ.

**ಸಾಂತಾಕ್ಲಾಸ್ ಯಾರು?**

ಉಡುಗೊರೆಗಳನ್ನು ಕೊಡುವುದು ಮತ್ತು ಪಡೆಯುವುದು ಕ್ರಿಸ್‌ಮಸ್ ವಿಶೇಷಗಳಲ್ಲೊಂದು. ಮಕ್ಕಳಿಗೆ ಉಡ–ುಗೊರೆಗಳನ್ನು ತಂದುಕೊಡಲು ಸಾಂತಾ ಕ್ಲಾಸ್ ಬರುತ್ತಾನೆ ಎಂಬುದು ನಂಬಿಕೆ. ಸಾಂತಾ ಕ್ಲಾಸ್ ಎಂಬುದು 'ಸಂತ ನಿಕೋಲಸ್' ಎಂಬುದರ ಅಪಭ್ರಂಶ. ಸಂತ ನಿಕೋಲಸ್ 4ನೇ ಶತಮಾನದಲ್ಲಿ ಜೀವಿಸಿದ್ದ ಒಬ್ಬ ಕ್ರೈಸ್ತ ಪಾದ್ರಿ. ಮಕ್ಕಳ ಮೇಲಿನ ಪ್ರೀತಿಗೆ ಸಂತ ನಿಕೋಲಸ್ ಪ್ರಸಿದ್ಧ. ಹಾಗಾಗಿ ಪ್ರತಿ ವರ್ಷ ಕ್ರಿಸ್‌ಮಸ್ ದಿನದಂದು ಆತನೇ ಉಡ–ುಗೊರೆ ತಂದುಕೊಡುತ್ತಾನೆ ಎಂದು ಮಕ್ಕಳಿಗೆ ಹೇಳಲಾಗುತ್ತದೆ.

**ಕ್ರಿಸ್ಮಸ್ ಗಿಡ ಏಕೆ ಬೇಕು?**

ಕ್ರಿಸ್‌ಮಸ್ ಗಿಡದ ಅಲಂಕಾರ ಜೋ–ರಿದ್ದಷ್ಟೂಹಬ್ಬಕ್ಕೆ ಕಳೆ. ಎಲ್ಲ ಮನೆಗಳಲ್ಲೂ ಒಂದು ಕ್ರಿಸ್‌ಮಸ್ ಗಿಡವನ್ನು ತಂದು ನಿಲ್ಲಿಸುವುದು ವಾಡಿಕೆ. ಕ್ರಿಸ್‌ಮಸ್ ಪ್ರತಿನಿ?ಧಿಸುವ ಕ್ರಿಸ್‌ಮಸ್ ಗಿಡದ ಅಲಂಕಾರವೂ ಬಹಳ ಮುಖ್ಯ. ಕ್ರಿಸ್‌ಮಸ್ ಗಿಡದ ಅಲಂಕಾರ ಒಂದೊಂದು ಕಡೆ ಒಂದೊಂದು ರೀತಿ ಇರುತ್ತದೆ. ತುಂಬಾ ಮೃದು, ಅಗಲ ಮತ್ತು ಚಪ್ಪಟೆ ಹಸಿರು ಎಲೆಗಳನ್ನು ಹೊಂದಿರುವ ಫಿರ್ ಗಿಡ ಕ್ರಿಸ್‌ಮಸ್‌ಗೆಂದು ಬಳಸುವ ನೈಜ ಗಿಡ. ಇದರಲ್ಲಿ ನಾರ್ಡ್ ಮಾನ್ ಫಿರ್, ಫ್ರೇಸರ್ ಫಿರ್, ಡಗ್ಲಾಸ್ ಫಿರ್, ಬಾಲ್ಸಂ ಫಿರ್ ಮತ್ತು ವೈಟ್ ಫಿರ್ ಪ್ರಸಿದ್ಧ. ಹಬ್ಬದ ಸಮಯದಲ್ಲಿ ಈ ಮರವನ್ನು ಕತ್ತರಿಸಿ ಮನೆಯಲ್ಲಿಟ್ಟು ಅಲಂಕರಿಸಲಾಗುತ್ತದೆ.

ಪೈನ್ ಗಿಡವನ್ನು ಅಲಂಕರಿಸಿದ ಮನೆಯಲ್ಲಿ ಗಂಧವೂ ತುಂಬಿರುತ್ತದೆ. ಸೂಜಿಯಂತಿರುವ ಇದರ ಎಲೆಗಳು 4 ವಾರದವರೆಗೂ ಹಸಿರಾಗಿರುತ್ತವೆ. ಹೊಸ ವರ್ಷಕ್ಕೂ ತಾಜಾ ಆಗಿಯೇ ಕಾಣುತ್ತಿರುತ್ತದೆ.







ವರ್ಜೆನಿಯಾ ಪೈನ್ ಮತ್ತು ಜುನಿಪರ್ ಪೈನ್ ಎಂಬ ವಿಧವೂ ಇದರಲ್ಲಿದೆ. ಬೆಳ್ಳಿ ಮತ್ತು ನೀಲಿ ಮಿಶ್ರಿತವಾಗಿರುವ ಸ್ಪೂರ್ಸ್ ಗಿಡ ಒಳ್ಳೆಯ ಸುವಾಸನೆ ಪಡೆದುಕೊಂಡಿದೆ. ಮನೆ ಹೊರಗೆ ಮತ್ತು ಒಳಗೆ ಇದರ ಅಲಂಕಾರ ಮಾಡಿದರೆ ಮನೆಗೆ ಮೆರುಗು. ಇದರಲ್ಲಿ ಬ್ಲೂ ನಾರ್ವೆ ಮತ್ತು ಅಮೆರಿಕಾ ಸೂ???ರ್ಯಸ್ ಎಂಬ ವಿಧಗಳಿವೆ.

ಗಾಢ ಹಸಿರು ಬಣ್ಣದ ಸೈಪಸ್ ಗಿಡ ಪುಕ್ಕಗಳಂತೆ ಕಾಣುತ್ತದೆ. ಸುಗಂಧವಿರುವ ಈ ಗಿಡದಲ್ಲಿ ಔಷಧಿಯ ಅಂಶವೂ ಇರುವುದರಿಂದ ಈ ಗಿಡವನ್ನು ಪವಿತ್ರವೆನ್ನುತ್ತಾರೆ. ಲೇಲ್ಯಾಂಡ್ ಸೈಪಸ್ ಒಂದು ವಿಧದ ಕ್ರಿಸ್‌ಮಸ್ ಗಿಡ. ಕೆಂಪು ಸಿಡಾರ್ ಗಿಡ ಪ್ರಾಚೀನ ಕ್ರಿಸ್‌ಮಸ್ ಗಿಡ. ಇದರ ಕೊಂಬೆಗಳು ಭಾರ ರಹಿತ ತ್ರಿಭುಜಾಕಾರವಾಗಿರುತ್ತದೆ.

ಕ್ರಿಸ್‌ಮಸ್ ಗಿಡವನ್ನು ದೀಪಗಳು ಮತ್ತು ಇತರ ವಸ್ತುಗಳಿಂದ ಅಲಂಕೃತಗೊಳಿಸಲಾಗುತ್ತದೆ. ಅನೇಕ ಕಡೆಗಳಲ್ಲಿ ಮನೆಯ ಹೊರಗೂ ಹಿಮದ ಮನುಷ್ಯ ಮೊದಲಾದ ಅಲಂಕಾರಗಳೂ ಸಾಮಾನ್ಯ. ಹಾಗೆಯೇ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ಕೆಲವು ಹೂವುಗಳು ಮತ್ತು ಸಸ್ಯಗಳು ಮೊದಲಾದವುಗಳನ್ನು ತರಲಾಗುತ್ತದೆ.

**ದೇಶದಿಂದ ದೇಶಕ್ಕೆ ವಿಭಿನ್ನ**

ಕ್ರಿಸ್‌ಮಸ್‌ಗೆ ಸಂಬಧಪಟ್ಟಆಚರಣೆಗಳು ಡಿಸೆಂಬರ್ ತಿಂಗಳ ಆರಂಭದಲ್ಲಿ ಅಡ್ವೆಂಟ್‌ನಿಂದ ಆರಂಭವಾಗುತ್ತದೆ. ಇದು ಕ್ರಿಸ್ತನ ಜನ್ಮವನ್ನು ಎದುರು ನೋಡುವ ಹಬ್ಬ. ಯೇಸುಕ್ರಿಸ್ತನನ್ನು ಬರಮಾಡಿಕೊಳ್ಳುವ ಪ್ರಕ್ರಿಯೆಯಾಗಿ ಮನೆ ಮನೆಗೂ ತೆರಳಿ ಹಾಡುಗಳನ್ನು ಹಾಡಲಾಗುತ್ತದೆ. ಕ್ರಿಸ್‌ಮಸ್ ಊಟ ದೇಶದಿಂದ ದೇಶಕ್ಕೆ ಬದಲಾಗುತ್ತದೆ. ಅನೇಕ ದೇಶಗಳಲ್ಲಿ ಕ್ರಿಸ್‌ಮಸ್ ಹಬ್ಬಕ್ಕೆ ವಿಶಿಷ್ಟವಾದ ತಿನಿಸುಗಳುಂಟು. ಈ ತಿನಿಸುಗಳನ್ನು ಪರಸ್ಪರ ಹಂಚಿಕೊಳ್ಳುವುದರಲ್ಲಿ ಒಂದು ವಿಶಿಷ್ಟಅನುಭೂತಿ ಇದೆ.

ಇನ್ನು ಧಾರ್ಮಿಕ ಆಚರಣೆಗಳು ಕಿಸ್‌ಮಸ್‌ಗೂ ಮೊದಲು ಚರ್ಚ್ ಮೊದಲಾದ ಸ್ಥಳಗಳಲ್ಲಿ ಪ್ರಾರಂಭವಾಗುತ್ತದೆ. ಕ್ರಿಸ್‌ಮಸ್ ಈವ್ ಮತ್ತು ಕ್ರಿಸ್‌ಮಸ್ ದಿನಗಳಲ್ಲಿ ವಿಶೇಷ ಪೂಜೆ ಪುನಸ್ಕಾರಗಳು ಚರ್ಚ್‌ಗ್ಗಳಲ್ಲಿ ನಡೆಯುತ್ತವೆ. ಕ್ರಿಸ್‌ಮಸ್ ನಂತರ ಹನ್ನೆರಡನೇ ದಿನದಂದು 'ಎಫಿಫನಿ' ಅಚರಣೆಗಳ ನಂತರ ಕ್ರಿಸ್‌ಮಸ್ ಕಾಲ ಮುಗಿಯುತ್ತದೆ.

# ಕೂದಲ ಸಮಸ್ಯೆಗಳಿಂದ ಬಳಲುತ್ತಿದ್ದೀರಾ? ಬೆಳ್ಳುಳ್ಳಿ ಬಳಸಿ ನೋಡಿ!

ಪ್ರತಿಯೊಬ್ಬರು ಕೂದಲಿಗೆ ಸಂಬಂಧಿಸಿ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಾರೆ. ನೈಸರ್ಗಿಕವಾಗಿ ಸಿಗುವ ಕೆಲವು ಪದಾರ್ಥಗಳು ನಮ್ಮ ಕೂದಲ ಸಮಸ್ಯೆಗೆ ಪರಿಣಾಮಕಾರಿ ಪರಿಹಾರ ಒದಗಿಸುತ್ತವೆ. ಅವುಗಳಲ್ಲಿ ಬೆಳ್ಳುಳ್ಳಿಯೂ ಒಂದು. ಬೆಳ್ಳುಳ್ಳಿ ಆಹಾರದಲ್ಲಿ ಪರಿಮಳವನ್ನು ಹೆಚ್ಚಿಸುವುದು ಮಾತ್ರವಲ್ಲದೆ ಕೂದಲ ಬೆಳವಣಿಗೆಗೂ ಸಹಾಯಕಾ–ರಿಯಾಗಿದೆ. ಹೇಗೆಲ್ಲಾ ಬಳಸಬಹುದು ಎಂಬುದಕ್ಕೆ ಇಲ್ಲಿದೆ ನೋಡಿ ಮಾಹಿತಿ.

ಬೆಳ್ಳುಳ್ಳಿ ಅತ್ಯುತ್ತಮ ಗಿಡಮೂಲಿಕೆಯಾಗಿದ್ದು, ವಿವಿಧ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸಲು ಬಹಳ ಹಿಂದಿನಿಂದಲೂ ಬಳಸಲಾಗುತ್ತಿದೆ. ಬೆಳ್ಳುಳ್ಳಿ ಅಲಿನ್ನಂತಹ ಸಲ್ಫರ್ ಹೊಂದಿರುವ ಸಂಂ–ಯುಕ್ತಗಳು, ಅಲಿನೇಸ್, ಸೆಲೆನಿಯಮ್ ಮತ್ತು ಫ್ಲೇವನಾಯ್ಡ್ ಗಳಂತಹ ಕಿಣ್ವಗಳನ್ನು ಹೊಂದಿದೆ. ಇದು ನಮಗೆ ವಿವಿಧ ರೀತಿಯಲ್ಲಿ ಆರೋಗ್ಯ ಪ್ರಯೋಜನವನ್ನು ನೀಡುತ್ತದೆ. ಉತ್ಕರ್ಷಣ ನಿರೋಧಕ ಗುಣಲಕ್ಷಣಗಳಿಂದ ಚರ್ಮರೋಗ ಕ್ಷೇತ್ರದಲ್ಲಿ ಪ್ರಾಮುಖ್ಯತೆ ಪಡೆದಿದೆ.


ಹಸಿ ಬೆಳ್ಳುಳ್ಳಿ, ಬೆಳ್ಳುಳ್ಳಿ ಪುಡಿಯಾಗಿರಲಿ, ಅವು ಕೂದಲಿನ ಬೆಳವಣಿಗೆಗೆ ಸಹಾಯ ಮಾಡುತ್ತದೆ. ಇದನ್ನು ನೆತ್ತಿ ಹಾಗೂ ಕೂದಲಿಗೆ ಹಚ್ಚಿಕೊಳ್ಳಬಹುದು ಅಥವಾ ನಿಮ್ಮ ಆಹಾರದಲ್ಲಿ ಸೇರಿಸಬಹುದು. ಬೆಳ್ಳುಳ್ಳಿಯ ಮಹತ್ವ ಮತ್ತು ಕೂದಲಿನ ಆರೋಗ್ಯಕ್ಕೆ ಹೇಗೆ ಸಹಕಾರಿ ಎಂಬುದನ್ನು ಇಲ್ಲಿ ತಿಳಿಯೋಣ.

**ಕೂದಲಿನ ಬೆಳವಣಿಗೆಗೆ ಬೆಳ್ಳುಳ್ಳಿ ಹೇಗೆ ಸಹಕಾರಿ?**

ಹಸಿ ಬೆಳ್ಳುಳ್ಳಿಯಲ್ಲಿ ಕ್ಯಾಲ್ಸಿಯಂ, ಸತು, ಮ್ಯಾಂಗನೀಸ್ ಮತ್ತು ಸೆಲೆನಿಯಂನಂತಹ ಪೋಷಕಾಂಶಗಳಿವೆ. ಅಲ್ಲದೆ ವಿಟಮಿನ್ ಸಿ ಮತ್ತು ಬಿ 6 ಇದೆ, ಇದು ಕೂದಲಿನ ಆರೋಗ್ಯಕ್ಕೆ ಸಹಕಾರಿ. ಬೆಳ್ಳುಳ್ಳಿಯಲ್ಲಿ ಆಂಟಿವೈರಲ್ ಮತ್ತು ಶಿಲೀಂಧ್ರ ವಿರೋಧಿ ಗುಣಲಕ್ಷಣಗಳನ್ನು ಹೊಂದಿರುವ ಘಟಕಗಳಿವೆ. ವೈರಲ್ ಅಥವಾ ಶಿಲೀಂಧ್ರಗಳ ಸೋಂಕಿನಿಂದ ಉಂಟಾಗುವ ನೆತ್ತಿಯ ಸಮಸ್ಯೆಗಳನ್ನು ಪರಿಹರಿಸುತ್ತದೆ.







ಕೂದಲು ಉದುರುವ ಜಾಗಕ್ಕೆ ಬೆಳ್ಳುಳ್ಳಿ ಜೆಲ್ ಅನ್ನು ಹಚ್ಚುವುದರಿಂದ ಕೂದಲು ಉದುರುವುದು ಕಡಿಮೆಯಾಗಿ ಕೂದಲ ಬೆಳವಣಿಗೆಗೆ ಸಹಕರಿಸುತ್ತದೆ ಎಂದು ವೈಜ್ಞಾನಿಕ ಅಧ್ಯಯನವು ಕಂಡುಹಿಡಿದಿದ. ಬೆಳ್ಳುಳ್ಳಿಯಲ್ಲಿರುವ ಸಲ್ಫರ್ ಮತ್ತು ಸೆಲೆನಿಯಮ್ ಕೂದಲಿನ ಶಾಫ್ಟ್ ಗಳ ರಚನೆಯನ್ನು ಬಲಪಡಿಸಲು ಸಹಾಯ ಮಾಡುತ್ತದೆ ಎಂದು ಸಾಬೀತಾಗಿದೆ.

**ಬೆಳ್ಳುಳ್ಳಿಯ ಗುಣಲಕ್ಷಣಗಳು**

ಆಂಟಿಮೈಕ್ರೊಬಿಯಲ್ ಗುಣಲಕ್ಷಣಗಳು: ಬೆಳ್ಳುಳ್ಳಿಯಲ್ಲಿ ಆಂಟಿವೈರಲ್ ಮತ್ತು ಆಂಟಿಫಂಗಲ್ ಗುಣಲಕ್ಷಣಗಳನ್ನು ಪ್ರದರ್ಶಿಸುವ ಘಟಕಗಳಿವೆ. ವೈರಲ್ ಅಥವಾ ಶಿಲೀಂಧ್ರಗಳ ಸೋಂಕಿನಿಂದ ಉಂಟಾಗುವ ನೆತ್ತಿಯ ಸಮಸ್ಯೆಗಳನ್ನು ಪರಿಹರಿಸಲು ಇದು ವಿಶೇಷವಾಗಿ ಉಪಯುಕ್ತವಾಗಿದೆ.

ತಲೆಹೊಟ್ಟು ನಿವಾರಕ: ಬೆಳ್ಳುಳ್ಳಿ ಪುಡಿಯನ್ನು ನೆತ್ತಿಗೆ ಹಚ್ಚಿದಾಗ, ಇದು ನೆತ್ತಿಯಲ್ಲಿ ರಕ್ತ ಪರಿಚಲನೆಯನ್ನು ಹೆಚ್ಚಿಸುತ್ತದೆ (ಕಟಾನಿಯಸ್ ಮೈಕ್ರೋಸರ್ಕ್ಯುಲೇಷನ್). ಈ ಸುಧಾರಿತ ರಕ್ತದ ಹರಿವು ಮತ್ತು ಅವುಗಳ ಶಿಲೀಂಧ್ರ ವಿರೋಧಿ ಗುಣಲಕ್ಷಣಗಳು ತಲೆಹೊಟ್ಟು ನಿವಾರಿಸುತ್ತದೆ. ಗಂಧಕದಿಂದ ಸಮೃದ್ಧವಾಗಿದೆ: ಕೂದಲಿನ ರಚನೆಯ ಗಮನಾರ್ಹ ಭಾಗವನ್ನು ಒಳಗೊಂಡಿರುವ ಕೆರಾಟಿನ್ ಎಂಬ ಪ್ರೋಟೀನ್ ಉತ್ಪಾದನೆಯಲ್ಲಿ ಸಲ್ಫರ್ ಒಂದು ನಿರ್ಣಾಯಕ ಅಂಶವಾಗಿದೆ. ಬೆಳ್ಳುಳ್ಳಿ ಸಾಕಷ್ಟು ಗಂಧಕವಿರುವುದು ಆರೋಗ್ಯಕರ ಕೂದಲಿಗೆ ಸಹಕಾರಿಯಾಗಿದೆ.

ಸೂರ್ಯನ ಹಾನಿಯಿಂದ ರಕ್ಷಣೆ: ಬೆಳ್ಳುಳ್ಳಿಯಲ್ಲಿರುವ ಉತ್ಕರ್ಷಣ ನಿರೋಧಕಗಳು ನೇರಳಾತೀತ (ಯುವಿ) ಕಿರಣಗಳಿಂದ ಉಂಟಾಗುವ ಹಾನಿಯಿಂದ ನಿಮ್ಮ ಕೂದಲನ್ನು ರಕ್ಷಿಸುವ ಸಾಮರ್ಥ್ಯವನ್ನು ಹೊಂದಿವೆ.

ವಿಟಮಿನ್ ಸಿ ಸಮೃದ್ಧವಾಗಿದೆ: ಹಸಿ ಬೆಳ್ಳುಳ್ಳಿ ವಿಟಮಿನ್ ಸಿ ಯ ಉತ್ತಮ ಮೂಲವಾಗಿದೆ. ವಿಟಮಿನ್ ಸಿ ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುವಲ್ಲಿ ಪಾತ್ರ ವಹಿಸುತ್ತದೆ.

**ಬೆಳ್ಳುಳ್ಳಿಯನ್ನು ಕೂದಲಿಗೆ ಹೇಗೆ ಬಳಸುವುದು**

ಕೂದಲಿಗೆ ಬೆಳ್ಳುಳ್ಳಿ ಎಣ್ಣೆ: ಬೆಳ್ಳುಳ್ಳಿ ಎಣ್ಣೆಯಲ್ಲಿ ಹಸಿ ಬೆಳ್ಳುಳ್ಳಿಯಲ್ಲಿರುವ ಎಲ್ಲಾ ಪ್ರಯೋಜನಕಾರಿ ಅಂಶಗಳಿವೆ. ಬೆಳ್ಳುಳ್ಳಿ ಎಣ್ಣೆಯನ್ನು ಮನೆಯಲ್ಲಿಯೇ ತಯಾ–ರಿಸಬಹುದು. ಕೆಲವು ಬೆಳ್ಳುಳ್ಳಿ ಎಸಳುಗಳನ್ನು ಪೇಸ್ಟ್ ಮಾಡಿಕೊಳ್ಳಿ. ಈ ಪೇಸ್ಟ್ ಅನ್ನು ಬಾಣಲೆಯಲ್ಲಿ ಹಾಕಿ ಹುರಿಯಿರಿ. ಒಂದು ಕಪ್ ತೆಂಗಿನ ಎಣ್ಣೆ ಅಥವಾ ಆಲಿವ್ ಎಣ್ಣೆಯನ್ನು ಸೇರಿಸಿ.

5 ನಿಮಿಷಗಳ ಕಾಲ ಕಡಿಮೆ ಉರಿಯಲ್ಲಿ ಎಣ್ಣೆಯನ್ನು ಬಿಸಿ ಮಾಡಿ. ತಣ್ಣಗಾದ ಎಣ್ಣೆಯನ್ನು ಬಾಟಲಿಗೆ ಹಾಕಿಟ್ಟುಕೊಳ್ಳಿ. 2 ಟೇಬಲ್ ಚಮಚಗಳಷ್ಟು ಎಣ್ಣೆ ತೆಗೆದುಕೊಂಡು ತಲೆಗೆ ನಿಧಾನವಾಗಿ ಮಸಾಜ್ ಮಾಡಿ. ಕನಿಷ್ಠ 30 ನಿಮಿಷ ಬಿಟ್ಟು ಮೃದುವಾದ ಶಾಂಪೂವಿನಿಂದ ತೊಳೆಯಿರಿ. ವಾರಕ್ಕೆ 2 ಬಾರಿ ಹಚ್ಚಿಕೊಳ್ಳಿ.

**ಬೆಳ್ಳುಳ್ಳಿ ಶ್ಯಾಂಪೂ**

15 ಬೆಳ್ಳುಳ್ಳಿ ಎಸಳುಗಳು, 1 ಟೀಸ್ಪೂನ್ ಆಲಿವ್ ಎಣ್ಣೆ, 3–5 ಹನಿ ಪುದೀನಾ ಎಣ್ಣೆ, 3–5 ಹನಿ ಟೀ ಟ್ರೀ ಆಯಿಲ್ ಮತ್ತು ಗಿಡಮೂಲಿಕೆ ಶಾಂಪೂ ಬೇಕಾಗುವ ಪದಾರ್ಥಗಳು. ಬೆಳ್ಳುಳ್ಳಿಯನ್ನು ಸಿಪ್ಪೆ ತೆಗೆದು ರುಬ್ಬಿಕೊಂಡು ಅದಕ್ಕೆ ಆಲಿವ್ ಎಣ್ಣೆ ಮತ್ತು ಪುದೀನಾ ಎಣ್ಣೆಯನ್ನು ಸೇರಿಸಿ ಬಳಿಕ ನಿಮ್ಮ ಸಾಮಾನ್ಯ ಶಾಂಪೂಗೆ ಮಿಶ್ರಣ ಮಾಡಿ. ಈ ಶಾಂಪೂವನ್ನು ವಾರಕ್ಕೆ 2–3 ಬಾರಿ ಬಳಸಬಹುದು. ಅಲ್ಲದೆ ನೀರುಳ್ಳಿ ಮತ್ತು ಬೆಳ್ಳುಳ್ಳಿ ಪೇಸ್ಟನ್ನು ತಲೆಗೆ ಹಚ್ಚುವುದರಿಂದ ಕೂದಲಿನ ಅನೇಕ ಸಮಸ್ಯೆಗಳಿಗೆ ಪರಿಹಾರ ಒದಗಿಸುತ್ತದೆ.



# ಚಳಿಗಾಲದಲ್ಲಿ ಪ್ರತಿದಿನ ೧ ಚಮಚ ಜೇನುತುಪ್ಪ ಸೇವಿಸೋದು ತುಂಬಾ ಒಳ್ಳೆಯದಂತೆ

ಜೇನುತುಪ್ಪವನ್ನು ನೀವು ಅದನ್ನು ನಿಮ್ಮ ಆಹಾರದಲ್ಲಿ ವಿವಿಧ ರೀತಿಯಲ್ಲಿ ಸೇ–ರಿಸಿಕೊಳ್ಳಬಹುದು. ಚಳಿಗಾಲದಲ್ಲಿ ಶೀತವನ್ನು ತಪ್ಪಿಸಲು ಕೇವಲ ಒಂದು ಚಮಚ ಜೇನುತುಪ್ಪವು ನಿಮಗೆ ತುಂಬಾ ಉಪಯುಕ್ತವಾಗಿದೆ.


ಜೇನು ತುಪ್ಪವು ಆಯುರ್ವೇದಿಕ್ ಗುಣವನ್ನು ಹೊಂದಿದ್ದು, ಕೆಮ್ಮು ಅಥವಾ ಗಂಟಲು ನೋವಿಗೆ, ತೂಕ ನಷ್ಟ ಅಥವಾ



ಜೀರ್ಣಕ್ರಿಯೆಯನ್ನು ಸುಧಾರಿಸಲು ಸಹಕಾ–ರಿಯಾಗಿದೆ. ಹಾಗಾಗಿ ಪ್ರತಿಯೊಬ್ಬರೂ ತಮ್ಮ ಆಹಾರದಲ್ಲಿ ಜೇನುತುಪ್ಪವನ್ನು ಸೇರಿಸಲು ಶಿಫಾರಸು ಮಾಡಲಾಗುತ್ತದೆ. ಚಳಿಗಾಲದಲ್ಲಿ ಶೀತವನ್ನು ತಪ್ಪಿಸಲು ಜೀವನಶೈಲಿಯನ್ನು ಆರೋಗ್ಯಕರವಾಗಿಸಬೇಕು. ಚಳಿಗಾಲದಲ್ಲಿ ಒಂದು ಚಮಚ ಜೇನುತುಪ್ಪವನ್ನು ಸೇವಿಸುವುದು ಉಪಯುಕ್ತವಾಗಿದೆ.

**ಸಂಸ್ಕರಿಸಿದ ಸಕ್ಕರೆಗೆ ಉತ್ತಮ ಪರ್ಯಾಯ**

ಜೇನು ತುಪ್ಪವು ನೈಸರ್ಗಿಕ ಆಹಾರ ಪದಾರ್ಥವಾಗಿದ್ದು, ಇದು ಚಳಿಗಾಲದಲ್ಲಿ ಔಷಧಕ್ಕಿಂತ ಕಡಿಮೆಯಿಲ್ಲ. ಇದರ ಪ್ರಯೋಜನಕಾರಿ ಮತ್ತು ಪೌಷ್ಟಿಕಾಂಶದ ಗುಣವು ದೇಹಕ್ಕೆ ಉಷ್ಣತೆಯನ್ನು ನೀಡುವುದಲ್ಲದೆ ಅನೇಕ ರೋಗಗಳನ್ನು ತಡೆಯುತ್ತದೆ. ಇದು ಸಂಸ್ಕ–ರಿಸಿದ ಸಕ್ಕರೆಗೆ ಉತ್ತಮ ಪರ್ಯಾಯವಾಗಿದೆ.



ಇದು ಅನೇಕ ಆರೋಗ್ಯ ಪ್ರಯೋಜನಗಳನ್ನು ಹೊಂದಿದೆ. ಇದು ರೋಗನಿರೋಧಕ ಶಕ್ತಿಯನ್ನು ಬಲಪಡಿಸಲು ಸಹಾಯ ಮಾಡುತ್ತದೆ. ಇದರ ಇತರ ಪ್ರಯೋಜನಗಳು ಮತ್ತು ಅದನ್ನು ನಿಮ್ಮ ಆಹಾರದಲ್ಲಿ ಹೇಗೆ ಸೇರಿಸಿಕೊಳ್ಳಬಹುದು ಎಂಬುದನ್ನು ತಿಳಿಯೋಣ.

**ಜೇನುತುಪ್ಪವನ್ನು ತಿನ್ನುವ ಪ್ರಯೋಜನಗಳು**

ಒಣ ತ್ವಚೆಯಿಂದ ಹಿಡಿದು ಋತುಮಾನದ ಶೀತ, ಚಳಿಗಾಲದಲ್ಲಿ ಕಾಡುವ ಸೋಂಕುಗಳ ವರೆಗೆ ಪರಿಣಾಮಬೀರುತ್ತದೆದೆ. ಹಸಿ ಜೇನುತುಪ್ಪವು ಉತ್ಕರ್ಷಣ ನಿರೋಧಕಗಳು ಮತ್ತು ಆಂಟಿಬ್ಯಾಕ್ಟೀರಿಯಲ್‌ಗಳಲ್ಲಿ ಸಮೃದ್ಧವಾಗಿದೆ, ಇದು ಸೋಂಕುಗಳನ್ನು ನಿವಾರಿಸಲು ಮತ್ತು ಪ್ರತಿರಕ್ಷಣಾ ವ್ಯವಸ್ಥೆಯನ್ನು ಹೆಚ್ಚಿಸಲು ಸಹಕಾರಿಯಾಗಿದೆ.

ಇದು ವಿಟಮಿನ್‌ಗಳು ಮತ್ತು ಖನಿಜಗಳಾದ ಬಿ ವಿಟಮಿನ್‌ಗಳು, ಕ್ಯಾಲ್ಸಿಯಂ ಮತ್ತು ಮೆಗ್ನೀಸಿಯಮ್ ಅನ್ನು ಸಹ ಒಳಗೊಂಡಿದೆ, ಇದು ಚಳಿಗಾಲದ ದೀರ್ಘ ದಿನಗಳಲ್ಲಿ ಶಕ್ತಿಯನ್ನು ಒದಗಿಸಲು ಸಹಾಯ ಮಾಡುತ್ತದೆ. ಹೆಚ್ಚುವರಿಯಾಗಿ, ಜೇನುತುಪ್ಪವು ನೈಸರ್ಗಿಕ ತೇವಾಂಶವನ್ನು ಉಳಿಸಿಕೊಳ್ಳುವ ಗುಣಗಳನ್ನು ಹೊಂದಿದೆ, ಇದು ಶೀತ ವಾತಾವರಣದಲ್ಲಿ ಚರ್ಮವನ್ನು ಹೈಡ್ರೀಕರಿಸುತ್ತದೆ.

**ಕೆಮ್ಮು, ಗಂಟಲು ನೋವಿಗೆ ಮನೆಮದ್ದು**

ಗಂಟಲು ನೋವನ್ನು ಶಮನಗೊಳಿಸಲು ಮತ್ತು ಕೆಮ್ಮನ್ನು ಕಡಿಮೆ ಮಾಡಲು ಜೇನುತುಪ್ಪವು ನೈಸರ್ಗಿಕ ಪರಿಹಾರವಾಗಿ ಕಾರ್ಯನಿರ್ವಹಿಸುತ್ತದೆ. ಒಂದು ಚಮಚ ಜೇನುತುಪ್ಪವನ್ನು ಬಿಸಿನೀರಿನಲ್ಲಿ ಅಥವಾ ಚಹಾದಲ್ಲಿ ಬೆರೆಸಿ ಕುಡಿಯುವುದು ತಕ್ಷಣ–ಕ್ಕೆ ಪರಿಹಾರವನ್ನು ನೀಡುತ್ತದೆ. ಜೇನುತುಪ್ಪದ ಬೆಚ್ಚಗಾಗುವ ಗುಣಲಕ್ಷಣಗಳು ದೇಹದ ಉಷ್ಣತೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ, ಇದು ಶೀತ ದಿನಗಳಿಗೆ ಸೂಕ್ತವಾದ ಆಯ್ಕೆಯಾಗಿದೆ. ಜೇನುತುಪ್ಪವು ಉತ್ತಮ ಶಕ್ತಿ ವರ್ಧಕವಾಗಿದೆ, ಇದು ಚಳಿಗಾಲದ ಆಯಾಸವನ್ನು ದೂರಮಾಡಲು ಉತ್ತಮವಾಗಿದೆ.

**ನಿಂಬೆ ಹಾಗೂ ಜೇನುತುಪ್ಪ**

ನಿಂಬೆಯೊಂದಿಗೆ ಬಿಸಿ ನೀರಿನಲ್ಲಿ ಜೇನುತುಪ್ಪ ಸೇರಿಸಿ ಕುಡಿಯುವುದು ತೂಕ ನಷ್ಟಕ್ಕೆ ಉತ್ತಮ ಪಾಕವಿಧಾನವಾಗಿದೆ. ಇದನ್ನು ಶತಮಾನಗಳಿಂದ ಬಳಸಲಾಗುತ್ತಿದೆ. ಇದು ತುಂಬಾ ಟೇಸ್ಟಿ ಮಾತ್ರವಲ್ಲ, ಸಾಕಷ್ಟು ಆರೋಗ್ಯಕರವೂ ಆಗಿದೆ. ನಿಂಬೆಯಲ್ಲಿ



ವಿಟಮಿನ್ ಸಿ ಇದ್ದು, ಇದು ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಜೇನುತುಪ್ಪವು ನೈಸರ್ಗಿಕ ಮಾಧುರ್ಯದ ಉತ್ತಮ ಪ್ರಮಾಣವಾಗಿದೆ. ಇದು ಜೀರ್ಣಕ್ರಿಯೆಯನ್ನು ಉತ್ತೇಜಿಸುತ್ತದೆ. ನೀವು ಇದನ್ನು ಬೆಳಗ್ಗೆಯೂ ಕುಡಿಯಬಹುದು ಅಥವಾ ಮಲಗುವ ಮುನ್ನವೂ ಕುಡಿಯಬಹುದು.

**ಸ್ಮೂಥಿಗಳು ಮತ್ತು ಮೊಸರಿಗೆ ಜೇನುತುಪ್ಪವನ್ನು ಸೇರಿಸಿ**

ಸ್ಮೂಥಿಗಳನ್ನು ಬೇಸಿಗೆಯಲ್ಲಿ ಮಾತ್ರ ತಿನ್ನುವುದಲ್ಲ, ನೀವು ಚಳಿಗಾಲದಲ್ಲೂ ಇದನ್ನು ಆನಂದಿಸಬಹುದು. ನೈಸರ್ಗಿಕ ಮಾಧುರ್ಯಕ್ಕಾಗಿ ನಿಮ್ಮ ಸ್ಮೂಥಿಗೆ ಜೇನುತುಪ್ಪವನ್ನು ಸೇರಿಸಿ. ಇದು ಸಿಹಿ ಮತ್ತು ಹುಳಿ ರುಚಿಯನ್ನು ಒದಗಿಸಲು ಸೇಬುಗಳು, ಬಾಳೆಹಣ್ಣುಗಳು ಮತ್ತು ಸಿಟ್ರಸ್ ಹಣ್ಣುಗಳಂತಹ ಹಣ್ಣುಗಳೊಂದಿಗೆ ಸೇರಿಸಿ.

**ಚಳಿಗಾಲದ ಬೇಕಿಂಗ್‌ನಲ್ಲಿ ಜೇನುತುಪ್ಪವನ್ನು ಬಳಸಿ**

ನೀವು ಸಕ್ಕರೆಯನ್ನು ಬಳಸುವ ಬೇಯಿಸಿದ ಪದಾರ್ಥಗಳಲ್ಲಿ ಜೇನುತುಪ್ಪವನ್ನು ಬಳಸಬಹುದು. ಜೇನುತುಪ್ಪವು ಬೇಯಿಸಿದ ಸರಕುಗಳಿಗೆ ತೇವಾಂಶವನ್ನು ಒದಗಿಸುತ್ತದೆ. ಜೇನುತುಪ್ಪವು ನೈಸರ್ಗಿಕ ಮಾಧುರ್ಯವನ್ನು ನೀಡುತ್ತದೆ. ನೀವು ಅದನ್ನು ಮಫಿನ್‌ಗಳು, ಕೇಕ್‌ಗಳಿಗೂ ಸೇರಿಸಬಹುದು.

# 32 ಅಭಿವೃದ್ಧಿ ಅನುದಾನಕ್ಕೆ 13 ಮಂಜೂರಿ:ಗುಡಗುಂಟಿ



ಜಮಖಂಡಿ: ಕ್ಷೇತ್ರದ ಅಭಿವೃದ್ಧಿಗಾಗಿ, ವಿವಿಧ ಕಾಮಗಾರಿಗಳ ಮಂಜೂರಾತಿಗಾಗಿ ಸದನದಲ್ಲಿ 32 ಪ್ರಶ್ನೆಗಳನ್ನು ಕೇಳಲಾಗಿತ್ತು. ಈ ಪೈಕಿ ಕ್ರಿಯಾಯೋಜನೆಗೆ 8 ಕೋಟಿ ಸಹಿತ ಮೂರು ಯೋಜನೆಗಳು ಸೇರಿ 13 ಕೋಟಿ ಅನುದಾನ ನೀಡಲು ರಾಜ್ಯಸರ್ಕಾರ ಒಪ್ಪಿಗೆ ಸೂಚಿಸಿದೆ ಎಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ನಗರದ ಶಾಸಕರ ಕಛೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಮಖಂಡಿ ಕ್ಷೇತ್ರದ ಅಭಿವೃದ್ಧಿಗಾಗಿ ಜನಸಂಖ್ಯೆಗೆ ಅನುಗುಣವಾಗಿ ರಸ್ತೆಗಳ ನಿರ್ಮಾಣ ಶಾಲಾ ಕಾಲೇಜುಗಳ ನಿರ್ಮಾಣ ಸರ್ಕಾರಿ ಕಟ್ಟಡಗಳ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅಂದಾಜು 21 ಕೋಟಿ ಅನುದಾನ ಮಂಜೂರು ಮಾಡುವ ಭರವಸೆ ರಾಜ್ಯ ಸರ್ಕಾರ ನೀಡಿದೆ ಎಂದರು.

ಬೆಳಗಾವಿ ಅಧಿವೇಶನದಲ್ಲಿ ಕೇವಲ ಕಾಲಹರಣವಾಯಿತು? ಉತ್ತರಕರ್ನಾಟಕದ ಅಭಿವೃದ್ಧಿ ಬಗ್ಗೆ ಚರ್ಚಿಸಲು ಹೆಚ್ಚು ಅವಕಾಶಗಳು ದೊರಕಿಲ್ಲ. ಕೃಷ್ಣ ಮೇಲ್ದಂಡೆ ಯೋಜನೆಯಿಂದ ಸುಮಾರು 22 ಹಳ್ಳಿಗಳು ಜಮಖಂಡಿ ನಗರಕ್ಕೆ ಹತ್ತಿರವಾಗಿದೆ ಇದರಿಂದ ಜಮಖಂಡಿ ನಗರದ ಜನಸಂಖ್ಯೆ ಹೆಚ್ಚಿದೆ. ಜನಸಂಖ್ಯೆಗೆ ಅನುಗುಣವಾಗಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕಾದ ಅನಿವಾರ್ಯತೆ ಇದೆ ಎಂದರು

ಆಲಮಟ್ಟಿ ಜಲಾಶಯದಲ್ಲಿ 524.256 ನೀರು ಸಂಗ್ರಹಿಸಲು ಮುಖ್ಯಮಂತ್ರಿಗಳು ಒಪ್ಪಿಗೆ ನೀಡಿದ್ದಾರೆ. ಮೂರು ವರ್ಷಗಳಲ್ಲಿ ಯೋಜನೆಯನ್ನು ಪೂರ್ಣಗೊಳಿಸಿ 130 ಟಿಎಂಸಿ ನೀರು ಸಂಗ್ರಹಿಸಲು ಸರ್ಕಾರ ಚಿಂತನೆ ನಡೆಸಿದೆ. ಇದರಿಂದ ಹದಿನೈದು ಲಕ್ಷ ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಬಹುದು. ಸರ್ಕಾರದ ಆರ್ಥಿಕ ಪರಿಸ್ಥಿತಿ ಸರಿಯಾಗಿ ಇಲ್ಲದ ಕಾರಣ ಅಭಿವೃದ್ಧಿಗಳು ವೇಗವಾಗಿ ಆಗುತ್ತಿಲ್ಲ ಎಂದರು.

ಜಮಖಂಡಿ ನಗರದಲ್ಲಿ ಯುಜಿಡಿ ಸಮಸ್ಯೆಯಿದೆ. ವಿಸ್ತೃತ ಯೋಜನೆ ರೂಪಿಸಿ ಕೊಳಚೆ ನೀರು ಹೊರಗಡೆ ಹೋಗುವಂತೆ ಕ್ರಮ ಜರುಗಿಸಬೇಕಾಗಿದೆ. ಸಚಿವ ಕೃಷ್ಣಭೈರೇಗೌಡರ ಜೊತೆ ಮಾತನಾಡಿದ್ದು ಕ್ರಿಯಾ ಯೋಜನೆ ಸಿದ್ಧಪಡಿಸಲು ತಿಳಿಸಿದ್ದು, ಅದರಂತೆ 2000 ಎಕರೆ ಅರಣ್ಯ ಇಲಾಖೆ ಜಮೀನು ಡೀ ನೋಟಿಫಿಕೇಷನ್ ಮಾಡಿ ಕೊಡುವುದಾಗಿ ತಿಳಿಸಿದ್ದಾರೆ. ನಗರದಲ್ಲಿರುವ ಬಾಗಲಕೋಟೆ ವಿಶ್ವವಿದ್ಯಾಲಯಕ್ಕೆ 38 ಎಕರೆ ಜಮೀನು ನೀಡಲು ಸರ್ಕಾರ ಒಪ್ಪಿದೆ. ಚಿಕ್ಕಪಡಸಲಗಿಯ ಬ್ಯಾರೇಜ್ ಪುನರ್ ನಿರ್ಮಾಣಕ್ಕೆ ಸರ್ಕಾರದ ಗಮನ ಸೆಳೆಯಲಾಗಿದೆ. ನಗರದಲ್ಲಿರುವ 1320 ಹೆಕ್ಟರ್ ಸವಳು ಜಗಳು ಜಮೀನು ಸುಧಾರಣೆಗೆ ವಾಗ್ದಾನ ಮಾಡಿದೆ. ಕಂಕಣವಾಡಿ ಗ್ರಾಮಕ್ಕೆ ದೊಡ್ಡ ಹಡಗು ಮಂಜೂರು ಮಾಡುವುದಾಗಿ ಸರ್ಕಾರ ತಿಳಿಸಿದೆ. ಸಾವಳಗಿ ತುಂಗಳ ಏತ ನೀರಾವರಿ ಯೋಜನೆಯನ್ನು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರ 50 ಕೋಟಿ ಮಂಜೂರು ಮಾಡುವುದಾಗಿ ಭರವಸೆ ನೀಡಿದೆ. ಮರೆಗುದ್ದಿ ಏತ ನೀರಾವರಿ ಯೋಜನೆ ಅನುಷ್ಠಾನಕ್ಕೆ ಒತ್ತಡ ಹೇರಲಾಗಿದೆ ಎಂದರು.

ನಗರಮಂಡಳ ಅಧ್ಯಕ್ಷ ಅಜಯ ಕಡಪಟ್ಟಿ, ಶ್ರೀಧರ ಕಂಬಿ, ರಾಜೇಂದ್ರಕುಮಾರ ಗುಡಗುಂಟಿ, ನಾಗಪ್ಪ ಸನದಿ, ದೇವಲ ದೇಸಾಯಿ, ಮಲ್ಲಪ್ಪ ಕೋಟಿ, ಮಾಂತೇಶ ಹಿಟ್ಟಿನಮಠ. ವಿರೂಪಾಕ್ಷಯ್ಯ ಗುಡಗುಂಟಿ. ಪ್ರಭು ಅಕ್ಕಿವಾಟ. ಸಹಿತ ಹಲವರು ಇದ್ದರು

# ಗವಿಮಠ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಪ್ರಸಾದ ವ್ಯವಸ್ಥೆ



ಕೊಪ್ಪಳ : ಶ್ರೀ ಗವಿಸಿದ್ಧೇಶ್ವರ ಮಹಾವಿದ್ಯಾಲಯದ 1997–98 ನೇ ಸಾಲಿನ ಶ್ರೀ ಗವಿಸಿದ್ಧೇಶ್ವರ ಮಹಾಸ್ವಾಮೀಜಿಗಳ ಕ್ಲಾಸ್ ಮೇಟ್ಸ್ ನವರು ಶ್ರೀ ಗವಿಸಿದ್ಧೇಶ್ವರ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಭಾನುವಾರ ಒಂದು ದಿನದ ಪ್ರಸಾದ ವ್ಯವಸ್ಥೆಯನ್ನು ಮಾಡಿಸಿದರು.

ಗೋಧಿ ಹುಗ್ಗಿ, ಅನ್ನಸಾಂಬರ್ ಹಾಗೂ ಫಲ್ಯವನ್ನು ಮಾಡಿ, ಮಕ್ಕಳಿಗೆ ಪ್ರಸಾದ ವ್ಯವಸ್ಥೆ ಮಾಡಲಾಯಿತು. ಖುದ್ದು ಶ್ರೀಗಳು ಸಹ ತಮ್ಮ ಪದವಿ ತರಗತಿ ವಿದ್ಯಾರ್ಥಿಗಳೊಂದಿಗೆ ಹಾಸ್ಟೆಲ್ ನಲ್ಲಿ ಕೆಲಕಾಲ ಕಳೆದರು.

ಹಾಸ್ಟೆಲ್ ನಲ್ಲಿ ಅಳವಡಿಸಿರುವ ಹೊಸ ಹೊಸ ವ್ಯವಸ್ಥೆಗಳನ್ನು ತಮ್ಮ ಪದವಿ ತರಗತಿಯವರಿಗೆ ತಾವೇ ವಿವರಿಸಿದರು. ವೃದ್ಧಾಶ್ರಮದಲ್ಲಿ ಊಟ ಇದಕ್ಕೂ ಮೊದಲು ಸುರಭಿ ವೃದ್ಧಾಶ್ರಮದಲ್ಲಿ ಅಲ್ಲಿದ್ದ ವೃದ್ಧರಿಗೆ ಊಟದ ವ್ಯವಸ್ಥೆಯನ್ನು ಸಹ ಮಾಡಿದರು. ಅವರೊಂದಿಗೆ ಕೆಲಕಾಲ ಕಳೆದು, ಅವರ ಯೋಗಕ್ಷೇಮವನ್ನು ವಿಚಾರಿಸಿ, ಅವರೊಂದಿಗೆ ಕೆಲಕಾಲ ಕಳೆದರು.

ಶ್ರೀಶೈಲ ಅಳವಂಡಿ, ಕನಕಪ್ಪ, ಬಸವರಾಜ ಒಂಟಿ, ಶಂಭು ಪಾಟೀಲ್, ಗುರು ಈಳಿಗೇರ, ಸೋಮರಡ್ಡಿ ಅಳವಂಡಿ, ಗುರುಬಸವ ಹಿರೇಮಠ, ರಾಜಮಹ್ಮದ್, ಇಬ್ರಾಹಿಂ, ನಾಗನಗೌಡ, ಶರಣಪ್ಪ ಶೆಟ್ಟರ್, ಉಮೇಶ, ನಿಂಗರಾಜ, ಸಂಜೀವ ವಾಲ್ಮಿಕಿ, ಗಿರೀಜಾ ಪೊಲೀಸ್ ಪಾಟೀಲ್, ವೀಣಾ ದೇಶಪಾಂಡೆ, ಪ್ರಮೀಳಾ, ಸುಮಂಗಲಾ ಸಜ್ಜನ, ವಿಜಯಲಕ್ಷ್ಮಿ ಬಳ್ಳೊಳ್ಳಿ, ಗೀತಾ ಪತ್ತಾರ ಸೇರಿದಂತೆ ಸ್ನೇಹಬಳಗ ಇದ್ದರು.

22ಕೆಪಿಎಲ್22 ಕೊಪ್ಪಳ ನಗರದ ಶ್ರೀ ಗವಿಸಿದ್ಧೇಶ್ವರ ಮಹಾವಿದ್ಯಾಲಯದ 1997–98 ನೇ ಸಾಲಿನ ಪದವಿ ತರಗತಿ ವಿದ್ಯಾರ್ಥಿಗಳು ಹಾಸ್ಟೆಲ್ ನಲ್ಲಿ ಪ್ರಸಾದ ವ್ಯವಸ್ಥೆಯನ್ನು ಮಾಡಿದರು. ಶ್ರೀ ಗವಿಸಿದ್ಧೇಶ್ವರ ಮಹಾಸ್ವಾಮಿಜಿಗಳು ಸಹ ಉಪಸ್ಥಿತರಿದ್ದರು.

****

# ಅದ್ದೂರಿಯಾಗಿ ನಡೆದ ಅಯ್ಯಪ್ಪ ಸ್ವಾಮಿ ಮಹಾಪೂಜೆ



ಯರಗಟ್ಟಿ: ಅಖಿಲ ಭಾರತ ಅಯ್ಯಪ್ಪ ಭಕ್ತವೃಂದ ಸಾಲಹಳ್ಳಿ ಇದರ 30ನೇ ವಾರ್ಷಿಕ ಶ್ರೀ ಅಯ್ಯಪ್ಪ ಸ್ವಾಮಿಯ ಮಹಾಪೂಜೆಯು ಗ್ರಾಮದ ಅಯ್ಯಪ್ಪಸ್ವಾಮಿ ಸನ್ನಿಧಾನದ ಆವರಣದಲ್ಲಿ ಕಾಂಚಿಪುರಂದ ತುಳಸಿ ಗುರುಸ್ವಾಮಿ ಅವರ ಪೌರೋಹಿತ್ಯದಲ್ಲಿ ಬಹು ವಿಜೃಂಭಣೆಯಿಂದ ಜರಗಿತು.

ಸಂಜೆ 04.30 ಜ್ಯೋತಿ ಮೆರವಣಿಗೆ ನಂತರ ಸ್ವಾಮಿಯ ಅಷೋತ್ತರ ವಿಧಿವಿಧಾನಗಳು ನಡೆದವು. ಬಳಿಕ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ ಗುರುಸ್ವಾಮಿ ಹಾಗೂ ಮಾಲಾ ದಾರಿಗಳಿಂದ ಮತ್ತು ನೆರೆದ ಭಕ್ತರಿಂದ ಭಜನೆ, ಶ್ಲೋಕ ಪಠಣ ನಡೆಯಿತು. ಪಡಿ ಪೂಜೆ ಮಾಡಿ, ಮಹಾ ಮಂಗಳಾರತಿ ಬೆಳಗಿದರು.

ನಂತರ 18ನೇ ವರ್ಷ ಮಾಲೆದಾರಣೆ ಮಾಡಿದ ಗುರುಸ್ವಾಮಿಗಳನ್ನು ಸತ್ಕರಿಸಲಾಯಿತು.

ಈ ವೇಳೆ ರುದ್ರಗೌಡ ಗುರುಸ್ವಾಮಿ, ಈರಣ್ಣಾ ಗುರುಸ್ವಾಮಿ, ಬಸವರಾಜ ಗುರುಸ್ವಾಮಿ, ಕಾಂತು ಗುರುಸ್ವಾಮಿ, ಅಶೋಕ ಗುರುಸ್ವಾಮಿ, ನಿಂಗನಗೌಡ ಗುರುಸ್ವಾಮಿ, ಮಹಾಂತೇಶ ಗುರುಸ್ವಾಮಿ, ಅಪ್ಪೇಶ ಗುರುಸ್ವಾಮಿ, ಸುತ್ತಲಿನ ಗ್ರಾಮಗಳಿಂದ ಆಗಮಿಸಿದ ಗುರುಸ್ವಾಮಿಗಳು, ಮಾಲಾ ದಾರಿಗಳು ಇದ್ದರು.

# ಬಸವನಬಾಗೇವಾಡಿ ವ್ಹಿಪಿಕೆಪಿಎಸ್‌ಗೆ ನೂತನ ಅಧ್ಯಕ್ಷರಾಗಿ ಸಂಗನಗೌಡ ಚಿಕ್ಕೊಂಡ- ಉಪಾಧ್ಯಕ್ಷ ಮಲ್ಲೇಶಿ ಕಡಕೋಳ ಅವಿರೋಧ ಆಯ್ಕೆ



ಬಸವನಬಾಗೇವಾಡಿ,ಡಿ. 23 ಪಟ್ಟಣದ ವಿವಿದೋದ್ಧೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಸಂಗನಗೌಡ ಚಿಕ್ಕೊಂಡ, ಉಪಾಧ್ಯಕ್ಷರಾಗಿ ಮಲ್ಲೇಶಿ ಕಡಕೋಳ ಅವರು ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿ ಎಸ್.ಎಂ.ಹಂಗರಗಿ ಘೋಷಿಸಿದರು.

ಪಟ್ಟಣದ ವಿವಿದೋದ್ಧೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘಕ್ಕೆ ಈಚೆಗೆ ಜರುಗಿದ ಚುನಾವಣೆಯಲ್ಲಿ ಸಂಗನಗೌಡ ಚಿಕ್ಕೊಂಡ ಅವರ ಗುಂಪಿಗೆ(–ನಲ್) ಮತದಾರರು ಭರ್ಜರಿ ಗೆಲುವು ತಂದು ಕೊಟ್ಟಿದ್ದರು. ಇಂದು ಜರುಗಿದ ಅಧ್ಯಕ್ಷ ಸ್ಥಾನಕ್ಕೆ ಸಂಗನಗೌಡ ಚಿಕ್ಕೊಂಡ, ಉಪಾಧ್ಯಕ್ಷ ಸ್ಥಾನಕ್ಕೆ ಮಲ್ಲೇಶಿ ಕಡಕೋಳ ನಾಮಪತ್ರ ಸಲ್ಲಿಸಿದ್ದರು. ಎರಡು ಸ್ಥಾನಗಳಿಗೆ ಒಬ್ಬಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದಾಗಿ ಎರಡು ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆ ಜರುಗಿತು. ಸಂಗನಗೌಡ ಚಿಕ್ಕೊಂಡ ಅವರು ಕಳೆದ ಐದು ಅವಧಿಯಿಂದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದರು. ಇಂದು ಆರನೇ ಅವಧಿಗೆ ಮತ್ತೆ ಅಧ್ಯಕ್ಷರಾಗಿ ಪುನರಾಯ್ಕೆಯಾಗಿರುವದು ಸಂಘದ ಇತಿಹಾಸದಲ್ಲಿ ಮೈಲಿಗಲ್ಲಾಗಿದೆ.

ಅಧ್ಯಕ್ಷ, ಉಪಾಧ್ಯಕ್ಷರಾಗಿ ಆಯ್ಕೆಯಾದ ನಂತರ ಜರುಗಿದ ಸಮಾರಂಭದಲ್ಲಿ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ ಅವರು ಹಿರಿಯ ರೈತ ಬಾಂಧವರಿಗೆ ಪಾದಪೂಜೆ ಮಾಡುವ ಮೂಲಕ ತಮ್ಮ ಅಧಿಕಾರವನ್ನು ಸ್ವೀಕರಿಸಿದ್ದು ವಿಶೇಷ ಗಮನ ಸೆಳೆಯಿತು. ಸಂಗನಗೌಡ ಚಿಕ್ಕೊಂಡ ಅವರು ಅಧ್ಯಕ್ಷರಾದ ನಂತರ ತಮ್ಮ ಅವಧಿಯಲ್ಲಿ ಒಂದಿಲ್ಲೊಂದು ವಿಶೇಷವಾದ ಕಾರ್ಯಕ್ರಮಗಳನ್ನು ಮಾಡುವ ಮೂಲಕ ರೈತರ ಮೇಲಿನ ಪ್ರೇಮ,ಕಾಳಜಿ ವ್ಯಕ್ತಪಡಿಸುವದು ಇವರ ಗುಣವಿಶೇಷ.

ನೂತನ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ರೈತ ಬಾಂಧವರ ಸಹಕಾರದಿಂದ ಚುನಾವಣೆಯಲ್ಲಿ ನಾವು ಅಭೂತಪೂರ್ವ ಯಶಸ್ಸನ್ನು ಪಡೆದುಕೊಂಡಿದ್ದೇವೆ. ಮುಂಬರುವ ದಿನಗಳಲ್ಲಿ ರೈತರ ಜೀವನಾಡಿಯಾಗಿ, ರೈತರ ಸಹಕಾರಿಯಾಗಿ ಇನ್ನಷ್ಟು ಹೆಚ್ಚಿನ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುವದು. ರೈತ, ಯೋಧ ದೇಶದ ಎರಡು ಕಣ್ಣುಗಳಿದ್ದಂತೆ. ಯೋಧ ದೇಶದ ಗಡಿ ಕಾಯುವ ಮೂಲಕ ದೇಶದ ರಕ್ಷಣೆ ಮಾಡಿದರೆ, ರೈತರು ಇಡೀ ಜಗತ್ತಿಗೆ ಅನ್ನವನ್ನು ನೀಡುತ್ತಾನೆ. ದೇಶದ ಯಾವುದೇ ಪ್ರತಿಷ್ಠಿತ ಕಂಪನಿ,ಕಾರ್ಖಾನೆ ಒಬ್ಬ ವ್ಯಕ್ತಿಗೆ ಉದ್ಯೋಗವನ್ನು ನೀಡಬಹುದು. ಅದೇ ಬದುಕಲು ಅಗತ್ಯವಿರುವ ಅನ್ನವನ್ನು ನೀಡಲು ಸಾಧ್ಯವಿಲ್ಲ. ರೈತ ಬಾಂಧವರು ಜಗತ್ತಿನ ಪ್ರತಿಯೊಬ್ಬರಿಗೂ ಅನ್ನವನ್ನು ನೀಡುತ್ತಾರೆ. ಇವರಿಬ್ಬರೂ ಸದಾ ಸ್ಮರಣೀಯರಾಗಿದ್ದಾರೆ ಎಂದರು.

ಸಾನಿಧ್ಯ ವಹಿಸಿದ್ದ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ಸಂಗನಗೌಡ ಚಿಕ್ಕೊಂಡ ಅವರು ಸಂಘದ ಅಧ್ಯಕ್ಷರಾದ ನಂತರ ಹಲವಾರು ರೈತಪರ ಯೋಜನೆಗಳನ್ನು ಹಾಕಿಕೊಳ್ಳುವ ಮೂಲಕ ರೈತರಿಗೆ ನೆರವಾಗುತ್ತಿದ್ದಾರೆ. ಇವರು ನೂತನವಾಗಿ ಮತ್ತೆ ಅಧ್ಯಕ್ಷರಾಗಿ ಆಯ್ಕೆಯಾಗಿರುವದು ರೈತ ದಿನಾಚರಣೆ ದಿನವಾಗಿರುವದು ವಿಶೇಷವಾಗಿದೆ. ಈ ದಿನದಂದು ರೈತರಿಗೆ ಪಾದಪೂಜೆ ಮಾಡಿರುವದು ಸುತ್ತ್ಯರ್ಹ ಕಾರ್ಯ. ಇವರಿಂದ ರೈತ ಬಾಂಧವರಿಗೆ ಹೆಚ್ಚು ಯೋಜನೆಗಳು ಬರುವಂತಾಗಲೆಂದು ಆಶಯವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನೂತನ ಉಪಾಧ್ಯಕ್ಷ ಮಲ್ಲೇಶಿ ಕಡಕೋಳ, ನೂತನ ನಿರ್ದೇಶಕರಾದ ಈರಣ್ಣ ವಂದಾಲ, ಶ್ರೀಶೈಲ ಪರಮಗೊಂಡ, ಮುತ್ತು ಉಕ್ಕಲಿ, ಸಂಗನಬಸಪ್ಪ ನಾಯ್ಕೋಡಿ, ಸುರೇಶ ನಾಯಕ, ನಿಂಗಪ್ಪ ಕುಳಗೇರಿ, ಮಹಾದೇವಿ ಮೈಲೇಶ್ವರ, ಜಯಶ್ರೀ ಪಾಟೀಲ, ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರವೀಣ ಚಿಕ್ಕೊಂಡ, ಸಿಬ್ಬಂದಿಗಳಾದ ಅಶೋಕ ಡೋಮನಾಳ, ಮಹೇಶ ಅವಟಿ, ಶ್ರೀಶೈಲ ಮುರಾಳ, ವಿಶ್ವನಾಥ ಕಡಕೋಳ, ಶಂಕರಲಿಂಗ ಅಡಗಿಮನಿ, ಪಾವಡೆಪ್ಪ ಹೆಬ್ಬಾಳ ಇತರರು ಇದ್ದರು.ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರವೀಣ ಚಿಕ್ಕೊಂಡ ಸ್ವಾಗತಿಸಿ,ನಿರೂಪಿಸಿದರು.

# ಫೆ.8 ಮತ್ತು 9ರಂದು ರಾಜನಹಳ್ಳಿಯ ಶ್ರೀ ಮಹರ್ಷಿ ವಾಲ್ಮೀಕಿ ಮಹಸಂಸ್ಥಾನ ಮಠದಲ್ಲಿ ಜರುಗಲಿರುವ ಮಹರ್ಷಿ ವಾಲ್ಮೀಕಿ ಜಾತ್ರೆ



ಗೋಕಾಕ: ಫೆ.8 ಮತ್ತು 9ರಂದು ರಾಜನಹಳ್ಳಿಯ ಶ್ರೀ ಮಹರ್ಷಿ ವಾಲ್ಮೀಕಿ ಮಹಸಂಸ್ಥಾನ ಮಠದಲ್ಲಿ ಜರುಗಲಿರುವ ಮಹರ್ಷಿ ವಾಲ್ಮೀಕಿ ಜಾತ್ರೆ 2025ರನ್ನು ಜಾರಕಿಹೊಳಿ ಸಹೋದರರ ಮಾರ್ಗದರ್ಶನದಲ್ಲಿ ಗೋಕಾಕ ಹಾಗೂ ಮೂಡಲಗಿ ತಾಲೂಕಿನ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ರಾಜನಹಳ್ಳಿಯ ಶ್ರೀ ಮಹರ್ಷಿ ವಾಲ್ಮೀಕಿ ಮಹಸಂಸ್ಥಾನ ಮಠದ ಶ್ರೀ ಪ್ರಸನ್ನಾನಂದಪುರಿ ಮಹಾಸ್ವಾಮಿಗಳು ಹೇಳಿದರು.

ಅವರು, ರವಿವಾರದಂದು ನಗರದ ಮಯೂರ ಶಾಲೆಯ ಹತ್ತಿರದ ನಗರಸಭೆ ಸಮುದಾಯ ಭವನದಲ್ಲಿ ಜರುಗಿದ ಮಹರ್ಷಿ ವಾಲ್ಮೀಕಿ ಜಾತ್ರಾಮಹೋತ್ಸವದ ಪೂರ್ವಭಾವಿ ಸಭೆಯ ಸಾನಿಧ್ಯವಹಿಸಿ ಮಾತನಾಡುತ್ತಿದ್ದರು.

ಈ ಜಾತ್ರಾ ಮಹೋತ್ಸವದಲ್ಲಿ ಲಿಂಗೈಕ್ಯ ಜಗದ್ಗುರು ಶ್ರೀ ಪುಣ್ಯಾನಂದಪುರಿ ಮಹಾಸ್ವಾಮಿಗಳ 18ನೇ ಪುಣ್ಯಾರಾಧನೆ ಹಾಗೂ ಶ್ರೀಮಠದ 27ನೇ ವಾರ್ಷಿಕೋತ್ಸವ ಹಾಗೂ ತಮ್ಮ 17ನೇ ಪಟ್ಟಾಭಿಷೇಕೋತ್ಸವವನ್ನು ಹಮ್ಮಿಕೊಳ್ಳಲಾಗಿದೆ. ರಾಜ್ಯದಾದ್ಯಂತ ಎಲ್ಲ ಸಮಾಜ ಬಾಂಧವರನ್ನು ಒಂದೆಡೆ ಕೂಡಿಸಿ ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತಿದ್ದು ತಾವುಗಳು ಸಹ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ತಿಳಿಸಿದರು.

ರಾಮಾಯಣದಂತಹ ಮಹಾನ ಗ್ರಂಥವನ್ನು ನೀಡಿ ಆದಿಕವಿಯಾದ ಮಹರ್ಷಿ ವಾಲ್ಮೀಕಿ ವಂಶಸ್ಥರಾದ ನಾವು ರಾಜ್ಯದಲ್ಲಿ 4ನೇ ಸ್ಥಾನದಲ್ಲಿದ್ದಿವಿ. ಸಂವಿಧಾನದಲ್ಲಿ ನಮಗೆ ನೀಡಿರುವ ಹಕ್ಕನ್ನು ಪಡೆಯಲು ನಾವೆಲ್ಲರೂ ಪಕ್ಷಾತೀತವಾಗಿ ಜಾಗೃತರಾಗಲು ಈ ಜಾತ್ರಾಮಹೋತ್ಸವವನ್ನು ಆಯೋಜಿಸಲಾಗಿದೆ.

ಸಮಾಜವನ್ನು ಶಿಕ್ಷಣ, ಆರ್ಥಿಕ ಹಾಗೂ ರಾಜಕೀಯವಾಗಿ ಸದೃಢವಾಗಿ ಬೆಳೆಸಲು ನಾವೆಲ್ಲ ಜಾಗೃತರಾಗೋಣ ಎಂದರು. ಇದೇ ಸಂದರ್ಭದಲ್ಲಿ ಮಹರ್ಷಿ ವಾಲ್ಮೀಕಿ ಜಾತ್ರೆಯ ಪ್ರಚಾರ ಸಮಾಗ್ರಿಗಳನ್ನು ಬಿಡುಗಡೆಗೊ ಳಿಸಲಾಯಿತು. ಆಪ್ತಸಹಾಯಕರುಗಳಾದ ಭೀಮಗೌಡ ಪೋಲಿಸಗೌಡರ, ಲಕ್ಕಪ್ಪ ಲೋಕೂರೆ, ನಿಂಗಪ್ಪ ಕುರಬೇಟ, ಮುಖಂಡರುಗಳಾದ ಡಾ.ರವೀಂದ್ರ ಅಚಿಟಿನ, ಎಸ್ ಎ ನಾಯಿಕ, ಎಸ್ ಎಸ್ ಮಾಳಗಿ, ಎಲ್ ಎಲ್ ಹಸರಂಗಿ ಸೇರಿದಂತೆ ಅನೇಕರು ಇದ್ದರು.

# ಪ್ರಭುಲಿಂಗ ಸೌಹಾರ್ದಕ್ಕೆ ಉತ್ತಮ ಸಹಕಾರಿ ಪ್ರಶಸ್ತಿ: ಗುಡಗುಂಟಿ



ಜಮಖಂಡಿ: ಪ್ರಭುಲಿಂಗೇಶ್ವರ ಸೌಹಾರ್ದ ಸಹಕಾರಿ ಸಂಘಕ್ಕೆ ಪ್ರಸಕ್ತ ಸಾಲಿನ ಜಿಲ್ಲಾಮಟ್ಟದ ಉತ್ತಮ ಸಹಕಾರಿ ಸಂಘ ಪ್ರಶಸ್ತಿ ದೊರೆತಿದೆ ಎಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ನಗರದ ಸಾಕ್ಷಾತ್ಕಾರ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2003 ರಲ್ಲಿ ಪ್ರಾರಂಭಗೊಂಡ ಸಹಕಾರಿ ಸಂಘ 2018ರ ಹೊತ್ತಿಗೆ 12 ಶಾಖೆಗಳನ್ನು ವಿಸ್ತರಿಸುವ ಮೂಲಕ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ಸಣ್ಣಕೈಗಾರಿಕೆಗಳು ಗುಡಿ ಕೈಗಾರಿಕೆಗಳು ಹಾಗೂ ಬೀದಿಬದಿ ವ್ಯಾಪಾರಿಗಳಿಗೆ ಸಾಲ ಸೌಲಭ್ಯಗಳನ್ನು ಕಲ್ಪಿಸುವ ಸಹಿತ ಸಹಕಾರ ಕ್ಷೇತ್ರದಲ್ಲಿ ದಾಪು–ಗಾಲು ಇಡುತ್ತಿದೆ. 10 ಕೋಟಿ ಶೇರು ಬಂಡವಾಳ 3763 ಸದಸ್ಯರನ್ನು ಹೊಂದಿದೆ. 13ಕ್ಕೂ ಹೆಚ್ಚು ರೀತಿ ಸಾಲಗಳನ್ನು ಸಂಘದಿಂದ ನೀಡಲಾಗುತ್ತಿದೆ. 80 ಜನ ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದು 430 ಕೋಟಿ ರೂಪಾಯಿ ಠೇವಣಿ ಹೊಂದಿದೆ. 400 ಕೋಟಿಯಷ್ಟು ಸಾಲವನ್ನು ನೀಡಲಾಗಿದೆ. ಮೈಕ್ರೋ ಫೈನಾನ್ಸ್ ವ್ಯವಸ್ಥೆಯಲ್ಲಿ ರೀತಿ ತ್ವರಿತ ಸಾಲ ನೀಡಲಾಗುತ್ತಿದ್ದು ಗ್ರಾಹಕರಿಗೆ ಸಾಕಷ್ಟು ಅನುಕೂಲವಾಗಿದೆ ಎಂದರು.

ಸಹಕಾರ ಸಂಘಕ್ಕೆ ಪ್ರಭುಲಿಂಗೇಶ್ವರ ಸಕ್ಕರೆ ಕಾರ್ಖಾನೆ ಹಾಗೂ ಇತನಾಲ್ ಉತ್ಪಾದನಾ ಘಟಕ ಬೆನ್ನೆಲುಬಾಗಿದ್ದು ಸಂಘದ ಬೆಳವಣಿಗೆಗೆ ಸಹಕಾರಿಯಾಗಿದೆ. ವಿಶೇಷ ಸೇವೆಗಳನ್ನು ಸಹಕಾರ ಸಂಘದಿಂದ ನೀಡಲಾಗುತ್ತಿದ್ದು ಆರ್ ಡಿ.ಎ.ಐ.ನಿಂದ ವಿಮಾ ಲೈಸನ್ಸ್ ಪಡೆಯಲಾಗಿದ್ದು ಜೀವವಿಮೆ ವಾಹನ ವಿಮೆ, ಅಪಘಾತ ವಿಮೆ, ಆರೋಗ್ಯ ವಿಮೆಗಳನ್ನು ಗ್ರಾಹಕರಿಗೆ ಒದಗಿಸಲಾಗುತ್ತದೆ. ಅದರಂತೆ ಪ್ಯಾನ್ ಕಾರ್ಡ್, ರೈಲ್ವೆ ಟಿಕೆಟ್ ಬುಕಿಂಗ್, ಮೈಕ್ರೋ ಎಟಿಎಂ ವ್ಯವಸ್ಥೆ, ಪಹಣಿ ಉತಾರ, ಪಾಸ್ ಪೋರ್ಟ್‌ಗಳನ್ನು ನೀಡುವ ಪರವಾನಿಗೆಗಳನ್ನು ಸಂಘ ಹೊಂದಿದೆ ಎಂದರು. ಇದೇ ಸಂದರ್ಭದಲ್ಲಿ ನಿರ್ದೇಶಕರಾದ ನೇಮಣ್ಣ ಜಮಖಂಡಿ, ಚೆನ್ನಪ್ಪ ಮಾಳವಾಡ, ವಿದ್ಯಾವತಿ ಮಳೆಮಠ, ಪಾರ್ವತಿ ಗುಡಗುಂಟಿ, ರಾಜೇಂದ್ರಕುಮಾರ ಗುಡಗುಂಟಿ, ನಾಗಪ್ಪ ಸನದಿ, ದೇವಲ ದೇಸಾಯಿ, ಮಲ್ಲಿಕಾರ್ಜುನ ಕೊಡ್ಲಿವಾಡಮಠ. ಬಸಯ್ಯ ಮಹಾಲಿಂಗಪೂರ, ಮಲ್ಲಪ್ಪ ಕೋಟಿ, ಹಣಮಂತ ದಾಸರ, ಮಾಂತೇಶ ಹಿಟ್ಟಿನಮಠ, ಪ್ರಕಾಶ ಕಾಲತಿಪ್ಪಿ, ವಿರೂಪಾಕ್ಷಯ್ಯ ಗುಡಗುಂಟಿ, ಪ್ರಭು ಅಕ್ಕಿವಾಟ, ನಿಂಗಪ್ಪ ತಳವಾರ, ಪ್ರಧಾನ ವ್ಯವಸ್ಥಾಪಕ ಮಹೇಶ ಮಠಪತಿ ಇದ್ದರು

# ದಕ್ಷಿಣ ಭಾರತೀಯ ಸಕ್ಕರೆ ಕಾರ್ಖಾನೆಗಳ ಸಂಘದ ಕರ್ನಾಟಕದ ಅಧ್ಯಕ್ಷರಾಗಿ ಯೋಗೇಶ ಪಾಟೀಲ ಆಯ್ಕೆ..!!



ಮೋಳೆ :–ಇತ್ತಿಚಿಗೆ ಬೆಂಗಳೂರಿನಲ್ಲಿ ನಡೆದ ದಕ್ಷಿಣ ಭಾರತೀಯ ಸಕ್ಕರೆ ಕಾರ್ಖಾನೆಗಳ ಸಂಘದ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ದಕ್ಷಿಣ ಭಾರತೀಯ ಸಕ್ಕರೆ ಕಾರ್ಖಾನೆಗಳ ಸಂಘ ಕರ್ನಾಟಕ (ಸಿಸ್ಮಾ–ಕೆ) ಇದರ 2 ವರ್ಷಗಳ ಅವಧಿಗೆ ಅಧ್ಯಕ್ಷರಾಗಿ ಯೋಗೇಶ ಶ್ರೀಮಂತ ಪಾಟೀಲ ಇವರು ಸರ್ವಾನುಮತದಿಂದ ನಿಯುಕ್ತರಾಗಿ ಅಧಿಕಾರ ವಹಿಸಿಕೊಂಡಿದ್ದು, ಅವರಿಗೆ ಅಭಿನಂದನೆಗಳು ಹರಿದು ಬರುತ್ತಿವೆ.

ಮಾಜಿ ಸಚಿವರು ಹಾಗೂ ಕಾಗವಾಡದ ಮಾಜಿ ಶಾಸಕರಾದ ಶ್ರೀಮಂತ ಪಾಟೀಲ ಅವರ ಸುಪುತ್ರರು, ಅಥಣಿ ಶುಗರ್ಸ್ನ ಕಾರ್ಯನಿರ್ವಾಹಕ ನಿರ್ದೇಶಕರು ಹಾಗೂ ಮುಖ್ಯ ಹಣಕಾಸು ಅಧಿಕಾರಿಯಾಗಿರುವ ಯೋಗೇಶ ಶ್ರೀಮಂತ ಪಾಟೀಲ ಅವರು ತಂದೆಯವರ ಮಾರ್ಗದರ್ಶನದಲ್ಲಿ ಚಿಕ್ಕ ವಯಸ್ಸಿನಲ್ಲಿಯೇ ಕಾರ್ಖಾನೆಯ ಜವಾಬ್ದಾರಿ ಹೊತ್ತು, ರೈತರ ಶ್ರೇಯೋಭಿವೃದ್ಧಿಗಾಗಿ ಸತತ ಪ್ರಯತ್ನದೊಂದಿಗೆ ಕಾರ್ಖಾನೆಯ ಕಾರ್ಯನಿರ್ವಾಹಕ ನಿರ್ದೇಶಕರಾಗಿ ಮತ್ತು ಮುಖ್ಯ ಹಣಕಾಸು ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವುದರ ಜೊತೆಗೆ ಭಾರತೀಯ ಸಕ್ಕರೆ ಕಾರ್ಖಾನೆಗಳ ಸಂಘ (ಇಸ್ಮಾ) ದ ನಿರ್ದೇಶಕರಾಗಿ ಹಾಗೂ ವೆಸ್ಟ್ ಇಂಡಿಯನ್ ಶುಗರ್ ಮಿಲ್ಸ್ ಅಸೋಸಿಯೇಷನ್ (ವಿಸ್ಮಾ)ದ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಾ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಸದ್ಯ ದಕ್ಷಿಣ ಭಾರತದ ಸಕ್ಕರೆ ಕಾರ್ಖಾನೆಗಳ ಕರ್ನಾಟಕದ ಅಧ್ಯಕ್ಷರಾಗಿ ಕಾಗವಾಡ ಹಾಗೂ ಅಥಣಿ ತಾಲೂಕಿನಿಂದ ಇದೇ ಮೊದಲ ಬಾರಿಗೆ ಅವರು ಆಯ್ಕೆಯಾಗಿದ್ದು, ಸಂತೋಷದ ವಿಷಯವಾಗಿದೆ. ಈ ಸಭೆಯಲ್ಲಿ ಸಿಸ್ಮಾ–ಕೆದ ಮಾಜಿ ಅಧ್ಯಕ್ಷ ವಿಜೇಂದ್ರ ಸಿಂಗ್, ಕಾರ್ಯದರ್ಶಿ ಡಾ. ಎಸ್ ಸಾಲಿಮಠ, ಮ್ಯಾನೇಜರ್ ವೀರೇಶ್ ಕವಟಗಿ, ಚಾಮುಂಡಿ ಶುಗರ್ಸ್ ಲಿಮಿಟೆಡ್‌ನ ಎಂಡಿ ಎಂ. ಶ್ರೀನಿವಾಸನ್, ಮೈಲಾರಿ ಶುಗರ್ ಕೋ ಲಿಮಿಟೆಡ್‌ನ ಚೇರ್ಮನ್ ಟಿ. ರಾಮಕೃಷ್ಣಾ, ಎಂಡಿ ಉದಯ್ ಕುಮಾರ್ ಪುರಾಣಿಕಮಠ, ಕೃಷ್ಣರಾಜಪೇಟದ ಕೋರೊಮಂಡೆಲ್ ಶುಗರ್ ಲಿಮಿಟೆಡ್‌ನ ಉಪಾಧ್ಯಕ್ಷ ವ್ಹಿ.ಜಿ ರವಿ, ಬಡಗಂದಿಯ ಬೀಳಗಿ ಶುಗರ್ ಮಿಲ್ಸ್ ಲಿಮಿಟೆಡ್‌ನ ಎಂಡಿ ರಾಹುಲ್ ನಾಡಗೌಡ, ಗೋದಾವರಿ ಶುಗರ್ಸ್ ಕಾರ್ಯನಿರ್ವಾಹಕ ನಿರ್ದೇಶಕ ಬಿ.ಆರ್. ಬಕ್ಷಿ, ಜೆಮ್ ಶುಗರ್ಸ್ನ ಉಪಾಧ್ಯಕ್ಷ ಮರಿಮುತ್ತು, ಬನಾರಿ ಅಮ್ಮನ ಶುಗರ್ಸ್ನ ಕಾರ್ಯಕಾರಿ ಅಧ್ಯಕ್ಷ ಜಿ. ಸರ್ವನನ್ ಸೇರಿದಂತೆ ದಕ್ಷಿಣ ಭಾರತೀಯ ಸಕ್ಕರೆ ಕಾರ್ಖಾನೆಗಳ ಸಂಘದ ನಿರ್ದೇಶಕರು, ಹಲವು ಕಾರ್ಖಾನೆಗಳ ಅಧಿಕಾರಿ ವರ್ಗದವರು, ಉಪಸ್ಥಿತರಿದ್ದರು. ಸಿಸ್ಮಾ–ಕೆದ ಅಧ್ಯಕ್ಷರಾಗಿ ಆಯ್ಕೆಗೊಂಡಿರುವ ಯೋಗೇಶ ಪಾಟೀಲ ಅವರಿಗೆ ಅಥಣಿ ಶುಗರ್ಸ್ನ ನಿರ್ದೇಶಕರು, ಸಿಬ್ಬಂದಿ ವರ್ಗದವರು, ಕಾರ್ಮಿಕ ವರ್ಗದವರು, ರೈತರು ಅಭಿನಂದಿಸಿದ್ದಾರೆ.

*****

# ಬೈಲಹೊಂಗಲದ ಮೂರಾರ್ಜಿ ವಸತಿ ಶಾಲೆಯಲ್ಲಿ ಪಾಲಕರ ಸಭೆ



ಬೈಲಹೊಂಗಲ– ಪಟ್ಟಣದ ಹೊರ ವಲಯದಲ್ಲಿರುವ ಮೂರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಈಚೆಗೆ ವಿದ್ಯಾರ್ಥಿಗಳ ಪಾಲಕರ ಹಾಗೂ ಪ್ರಗತಿ ಪರಿಶೀಲನಾ ಸಭೆ ಜರುಗಿತು. ಸಭೆಯ ಅಧ್ಯಕ್ಷತೆ ವಹಿಸಿದ ಶಾಲೆಯ ಪ್ರಾಂಶುಪಾಲ ಅಶೋಕ ಬ್ಯಾಳಿ ಮಾತನಾಡಿ, ಸಾಧಕರ ಹೆಸರಿನ ಈ ಮಾದರಿ ವಸತಿ ಶಾಲೆಗಳು ಸಮಾಜದಲ್ಲಿ ಮಾದರಿಯಾಗಿದ್ದು ಬಡ ವಿದ್ಯಾರ್ಥಿಗಳಿಗೆ ವರದಾನವಾಗಿವೆ. ಇಲ್ಲಿನ ನಿಯಮಗಳನ್ನು ಅಚ್ಚುಕಟ್ಟಾಗಿ ಪಾಲನೆ ಮಾಡಿ ಶೈಕ್ಷಣೀಕವಾಗಿ ಸಾಧನೆಗೈಯಬೇಕು. ಮಕ್ಕಳ ಪ್ರಗತಿಗಾಗಿ ಪಾಲಕರು ಸಹ ಆಗಾಗ ಪರಿಶೀಲನೆ ಮಾಡಿ ಅವರ ಶ್ರೇಯೋಭಿವೃದ್ದಿಗೆ ಸಹಕರಿಸಬೇಕೆಂದು. ಪಾಲಕರು ತಮ್ಮ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ವಸತಿ ನಿಲಯದ ಜೊತೆಗೆ ಉತ್ತಮ ಭಾಂದವ್ಯ ಇಟ್ಟುಕೊಳ್ಳಬೇಕೆಂದರು.

ವಸತಿ ನಿಲಯದ ಮೇಲ್ವಚಾರಕಿ ಲಕ್ಷ್ಮೀ ಕುಂಬಾರ ಮಾತನಾಡಿ, ಬಡ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ರಾಜ್ಯ ಸರಕಾರ ವಸತಿ ನಿಲಯಗಳ ಮಕ್ಕಳಿಗೆ ಹಲವಾರು ಯೋಜನೆಗಳನ್ನು ಜಾರಿ ಮಾಡಿ ಆ ಮೂಲಕ ನಿರಂತರವಾಗಿ ಪ್ರೋತ್ಸಾಹಿಸುತ್ತಿದೆ. ಉಪಯೋಗ ಪಡೆದು ಮಾದರಿ ಶಾಲೆಗಳ ಕೀರ್ತಿ ಹೆಚ್ಚಿಸಬೇಕೆಂದರು. ಶಿಕ್ಷಕ ಸಿಬ್ಬಂದಿಗಳಾದ ಎಂ.ಆರ್.ಗಾಣಗಿ, ಜಿ. ಎಸ್.ಕೊಟಬಾಗಿ, ರವಿ ರೂಡಬಸಣ್ಣವರ, ಪಿ.ಎ.ರೇಳೇಕರ, ಆರ್.ಎಸ್.ಎಮ್ಮಿ, ಎಸ್. ಎಸ್.ಛಲವಾದಿ, ಪಿ.ವಿ.ಹಂದಿಗನೂರ, ಎಂ.ಪಿ.ಹಿ ರೇಮಠ, ಸಿ.ಎಂ.ಸಾಲಿಮಠ, ಎನ್.ಜಿ .ಮುದ್ದನಗೌಡರ, ಎ.ಆರ್.ಪಾಟೀಲ, ಎಸ್.ಎಸ್.ಹದಲಿ ಹಾಗೂ ವಿದ್ಯಾರ್ಥಿಗಳು,



ಬೈಲಹೊಂಗಲ–ತಾಲೂಕಿನ ನಯಾನಗರ (ಚಿಕ್ಕಮೂಳಕೂರ) ಗ್ರಾಮದ ವಿವಿದ್ಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ ನಿಯಮಿತದ ಆಡಳಿತ ಮಂಡಳಿಗೆ ನಡೆದ ಸಾಮಾನ್ಯ, ಸಾಲಗಾರರಲ್ಲದ ಕ್ಷೇತ್ರಕ್ಕೆ ಚುನಾವಣೆ ಜರುಗಿತು.

ಸಾಮಾನ್ಯ ಕ್ಷೇತ್ರಕ್ಕೆ ನಡೆದ ಚುನಾವಣೆಯಲ್ಲಿ ಮುದಕಪ್ಪ ತೋಟಗಿ, ಜಗದೀಶ ಅಡಕಿ, ಬಸೆಟೆಪ್ಪ ಅಡಕಿ, ಚಂದ್ರಪ್ಪ ಉಜ್ಜಿನಕೊಪ್ಪ, ಭೀಮಪ್ಪ ಕರಿದೇಮಣ್ಣವರ, ಸಾಲಗಾರಲ್ಲದ ವಿಭಾಗಕ್ಕೆ ಮಂಜುನಾಥ ಹಡಪದ ಹಾಗೂ ಹಿಂದುಳಿದ ಅ ವರ್ಗ ಬಸನಗೌಡ ಸಂಕಣ್ಣವರ, ಹಿಂದುಳಿದ ಬ ವರ್ಗ ಬಸವರಾಜ ತೋಟಗಿ, ಮಹಿಳಾ ವಿಭಾಗಕ್ಕೆ ಸುಮಿತ್ರಾ ಹಂಪಿಹೊಳಿ, ಪಾರವ್ವ ತೋಟಗಿ, ಪರಿಶಿಷ್ಟ ಜಾತಿ ಬಸಪ್ಪ ಕಾಳಿ, ಪರಿಶಿಷ್ಟ ಪಂಗಡಕ್ಕೆ ರಮೇಶ ಅರವಳ್ಳಿ ಇವರು ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

# ವಣ್ಣೂರ ಪಿಕೆಪಿಎಸ್ ಚುನಾವಣೆ ಮಹಾಂತೇಶ ದೊಡ್ಡಗೌಡರ ಬೆಂಬಲಿಗರ ಭರ್ಜರಿ ಜಯ



ನೇಸರಗಿ. ಇಲ್ಲಿಗೆ ಸಮೀಪದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಿ.ವಣ್ಣೂರ ಇದರ ಆಡಳಿತ ಮಂಡಳಿಗೆ ನಡೆದ ಚುನಾವಣೆಯಲ್ಲಿ ಮಾಜಿ ಶಾಸಕ ಹಾಗೂ ಬಿಡಿಸಿಸಿ ಬ್ಯಾಂಕ ನಿರ್ದೇಶಕರಾದ ಮಹಾಂತೇಶ ದೊಡ್ಡಗೌಡರ ನೇತೃತ್ವದಲ್ಲಿ ಹಾಗೂ ಕಳೆದ ಹತ್ತು ವರ್ಷಗಳಿಂದ ಸಂಘದ ಚುಕ್ಕಾಣಿ ವಹಿಸಿರುವ ಬಾಳಾಸಾಹೇಬ ದೇಸಾಯಿ ಮುಂದಾಳತ್ವದಲ್ಲಿ ಭರ್ಜರಿ ಜಯಗಳಿಸಿದ್ದಾರೆ.

ಮುಖಂಡ ಬಾಳಾಸಾಹೇಬ ದೇಸಾಯಿ ಮಾತನಾಡಿ ನಮ್ಮ ಈ ಅಭೂತಪೂರ್ವ ಜಯಕ್ಕೆ ಕಾರಣರಾದ ಸಂಘದ ಸದಸ್ಯರು ನಮ್ಮ ಮೇಲೆ ನಂಬಿಕೆ ಇಟ್ಟು ಗೆಲ್ಲಿಸಿದ್ದಾರೆ. ಈ ಜಯಕ್ಕೆ ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ ಹಾಗೂ ವಣ್ಣೂರ , ಸುನಕುಂಪಿ, ಮಾಸ್ತಮರ್ಡಿ ಗ್ರಾಮದ ರೈತರಿಗೆ ಅಭಿನಂದನೆ ಸಲ್ಲಿಸಿದರು.ಮುಂದೆ ರೈತಪರ ಕೆಲಸಗಳನ್ನು ಮಾಡಲಾಗುವದು ಎಂದರು.

ಈ ಸಂದರ್ಭದಲ್ಲಿ ಸದಸ್ಯರಾದ ಈರಪ್ಪ ಶೇಬನ್ನವರ, ನಾಗಪ್ಪ ಬಶೆಟ್ಟಿ, ಬಾಳಪ್ಪ ಅಂಗಡಿ, ಸನಿಂಗಪ್ಪ ಅಡಿವೇರ, ಗಂಗಪ್ಪ ಆಡಿನ್ನವರ, ನಿಂಗಪ್ಪ ಇಂಚಲ, ಚನ್ನಪ್ಪ ಮ್ಯಾಗೇರಿ, ಸದೆಪ್ಪ ಕಿಲಾರಿ, ಲಕ್ಷ್ಮವ್ವ ಪಾಟೀಲ, ಮಹಾದೇವಿ ಹುಡೇದ , ಬಾಬಾಸಾಹೇಬ ದೇಸಾಯಿ ಮತ್ತು ಗ್ರಾಮದ ಹಿರಿಯರು, ಮುಖಂಡರು, ಸಹಕಾರಿ ಧುರೀಣರು, ಸಂಘದ ಸದಸ್ಯರು, ವಣ್ಣೂರ , ಸುನಕುಂಪಿ ಮಾಸ್ತಮರ್ಡಿ ಗ್ರಾಮಗಳ ರೈತರು ಉಪಸ್ಥಿತರಿದ್ದರು.

